



**ಶ್ರೀ ಡಿ ಕೆ ಶಿವಕುಮಾರ್**
ಸನ್ಮಾನ್ಯ ಮುಖ್ಯಮಂತ್ರಿಗಳು



ಕರ್ನಾಟಕ ಸರ್ಕಾರ





**ಡಾ. ಜಿ. ಪರಮೇಶ್ವರ**
ಮಾನ್ಯ ಉಪಮುಖ್ಯಮಂತ್ರಿಗಳು

**ನಾಡಿನ ಸಮಸ್ತ ಜನತೆಗೆ**

# 80ನೇ

# ಸ್ವಾತಂತ್ರ್ಯ ದಿನಾಚರಣೆಯ

**ಶುಭಾಶಯಗಳು**



# ಯುವ ಕರ್ನಾಟಕ ನವ ಭಾರತ

ಇಂದು ನಮಗೆ ನಿಜವಾದ '**ಸ್ವಾತಂತ್ರ್ಯ**' ಎಂದರೆ ಯುವಜನತೆ ಹೊಸ ಕನಸುಗಳನ್ನು ಕಾಣುವ ಅವಕಾಶ, ಹಸಿವಿನಿಂದ ಮುಕ್ತಿ, ಆರ್ಥಿಕ ಆತಂಕವಿಲ್ಲದ ನೆಮ್ಮದಿ, ಮಹಿಳೆಯರ ಬದುಕಿನಲ್ಲಿ ಆತ್ಮವಿಶ್ವಾಸ, ಹಾಗೂ ಪ್ರತಿಯೊಬ್ಬರಿಗೂ ಸಿಗುವ ಗೌರವಯುತ ಬದುಕು. ಇದನ್ನು ಸಾಕಾರಗೊಳಿಸುತ್ತಿರುವ **ಐದು ಗ್ಯಾರಂಟಿ ಯೋಜನೆಗಳು** ಪ್ರತಿಯೊಬ್ಬರ ಜೀವನಕ್ಕೂ ಹೊಸ ಆಶಾಕಿರಣವಾಗಿವೆ.

**ಮಹಾತ್ಮ ಗಾಂಧೀಜಿ**ಯವರ '**ಅಂತ್ಯೋದಯ**' ಹಾಗೂ '**ಸರ್ವೋದಯ**' ತತ್ವಗಳು ಮತ್ತು **ಡಾ. ಬಿ. ಆರ್. ಅಂಬೇಡ್ಕರ್** ಅವರ **ಸಾಂವಿಧಾನಿಕ ಮೌಲ್ಯ**ಗಳ ದಾರಿಯಲ್ಲಿ ಹೆಜ್ಜೆಯಿಡುತ್ತಿರುವ ನಾವು, ಯುವಜನತೆಯ ಶಕ್ತಿಯೊಂದಿಗೆ '**ಯುವ ಕರ್ನಾಟಕ, ನವ ಭಾರತ**'ಕ್ಕಾಗಿ **ಕರ್ನಾಟಕ ಅಭಿವೃದ್ಧಿ ಮಾದರಿ**ಯನ್ನು ನಿರ್ಮಿಸುತ್ತಿದ್ದೇವೆ.

**ಕನ್ನಡಿಗರ ಸಬಲೀಕರಣವೇ ನಮ್ಮ ದೃಢ ಸಂಕಲ್ಪ, ಅದುವೇ ನಮಗೆ ನಿಜ ಸ್ವಾತಂತ್ರ್ಯ.**

ಗ್ಯಾರಂಟಿ ಸರ್ಕಾರ

ಶಕ್ತಿ | ಅನ್ನಭಾಗ್ಯ | ಗೃಹ ಜ್ಯೋತಿ | ಗೃಹಲಕ್ಷ್ಮಿ | ಯುವನಿಧಿ

ಸ್ಕ್ಯಾನ್ ಮಾಡಿ,
ಸ್ವಾತಂತ್ರ್ಯದ ಸಂದೇಶ ಕೇಳಿ

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

CMofKarnataka | https://dipr.karnataka.gov.in/ | Karnatakavarthe | ಕರ್ನಾಟಕ ವಾರ್ತೆ

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 49 | ನವದೆಹಲಿ | ಬೆಲೆ ₹ 10 | ಆಗಸ್ಟ್ 15, 2026, ಶನಿವಾರ



ನಾಡಿನ ಸಮಸ್ತ ಜನತೆಗೆ, ಓದುಗರಿಗೆ ಹಿತೈಷಿಗಳಿಗೆ 80ನೇ ಸ್ವಾತಂತ್ರ್ಯೋತ್ಸವ ದಿನದ ಶುಭಾಶಯಗಳು

**ಕಚೇರಿಗೆ ಬಿಡುವು**

ಸ್ವಾತಂತ್ರ್ಯೋತ್ಸವದ ಪ್ರಯುಕ್ತ ಕಚೇರಿಗೆ ಶನಿವಾರ ಬಿಡುವು. 16–08–2026ರ ಸಂಚಿಕೆ ಪ್ರಕಟವಾಗುವುದಿಲ್ಲ

- ಸಂಪಾದಕರು

## ಒಳಪುಟಗಳಲ್ಲಿ

ಮಹಿಳೆಯರಿಗೆ ಪ್ರಾತಿನಿಧ್ಯ ನಿರಾಕರಣೆ, ಆರ್‌ಎಸ್‌ಎಸ್ ವಿರುದ್ಧ ಹಿಂಬಾಗಿಲಿನ ಷಡ್ಯಂತ್ರ ಬಿ.ವೈ. ವಿಜಯೇಂದ್ರ ವಾಗ್ದಾಳಿ - ಪು.4

# ಸ್ವಾತಂತ್ರ್ಯೋತ್ಸವ: ಕೆಂಪುಕೋಟೆಯಲ್ಲಿ ಇಂದು ಒಂದೇಮಾತರಂ ಅನುರಣನ

**ನವದೆಹಲಿ, ಆ.15:** ದೇಶದ 80ನೇ ಸ್ವಾತಂತ್ರ್ಯೋತ್ಸವವನ್ನು ನವದೆಹಲಿಯ ಐತಿಹಾಸಿಕ ಕೆಂಪುಕೋಟೆಯಲ್ಲಿ ಶನಿವಾರ ಅದ್ದೂರಿಯಾಗಿ ಆಚರಿಸಲು ಸಕಲ ಸಿದ್ಧತೆ ಪೂರ್ಣಗೊಂಡಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಕೆಂಪುಕೋಟೆಯ ಕೋಟೆಗೋಡೆಯ ಮೇಲೆ ರಾಷ್ಟ್ರಧ್ವಜಾರೋಹಣ ನೆರವೇರಿಸಿ ದೇಶವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಈ ಬಾರಿಯ ಸಮಾರಂಭಕ್ಕೆ ವಂದೇ ಮಾತರಂ ಗೀತೆಯ 150ನೇ ವರ್ಷಾಚರಣೆ ಹಾಗೂ ಯುವಶಕ್ತಿ, ವಿಕಸಿತ ಭಾರತ@2047 ಪ್ರಮುಖ ಕೇಂದ್ರಬಿಂದುಗಳಾಗಿವೆ.

2026ರಲ್ಲಿ ವಂದೇ ಮಾತರಂ ರಚನೆಯ 150ನೇ ವರ್ಷಾಚರಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಇದೇ ಮೊದಲ ಬಾರಿಗೆ ಕೆಂಪುಕೋಟೆಯಲ್ಲಿ ರಾಷ್ಟ್ರಗೀತೆ ವಂದೇಮಾತರಂ ಗಾಯನ ಮೊಳಗಲಿದೆ. ನಂತರ ರಾಷ್ಟ್ರಧ್ವಜಾರೋಹಣ ಹಾಗೂ ಪ್ರಧಾನಿಯವರ ರಾಷ್ಟ್ರವನ್ನುದ್ದೇಶಿಸಿದ ಭಾಷಣ ಇರಲಿದೆ.

ಜ್ಞಾನಪಥದಲ್ಲಿ ಎನ್‌ಸಿಸಿ ಹಾಗೂ ಮೈ ಭಾರತ್ ಸ್ವಯಂಸೇವಕರ 2,500 ಬಾಲಕ–ಬಾಲಕಿಯರು ವಂದೇ ಮಾತರಂ ಆಕಾರದಲ್ಲಿ ನಿಲ್ಲಲಿದ್ದಾರೆ. ಭಾರತೀಯ ವಾಯುಪಡೆಯ ಎಂಐ–17 ಹೆಲಿಕಾಪ್ಟರ್ 150 ಇಯರ್ಸ್ ಆಫ್ ವಂದೇಮಾತರಂಸಂದೇಶವಿರುವ ಬ್ಯಾನರ್ ಹೊತ್ತು ಪುಷ್ಪವೃಷ್ಟಿ ಮಾಡಲಿದೆ.

**ಯುವಶಕ್ತಿಗೆ ವಿಶೇಷ ಆದ್ಯತೆ:** ಯುವಶಕ್ತಿ, ವಿಕಸಿತ ಭಾರತ@2047 ಎಂಬ ಆಶಯದಡಿ ದೇಶದ ಯುವಜನರ ಸಾಧನೆಗಳನ್ನು ಸಮಾರಂಭದಲ್ಲಿ ಬಿಂಬಿಸಲಾಗುತ್ತಿದೆ. 2026ರ ಅಂತಾರಾಷ್ಟ್ರೀಯ ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ ಮತ್ತು ಗಣಿತ ಒಲಿಂಪಿಯಾಡ್‌ಗಳಲ್ಲಿ ಪದಕ ಗೆದ್ದ 19 ವಿದ್ಯಾರ್ಥಿಗಳನ್ನು ವಿಶೇಷ ಅತಿಥಿಗಳಾಗಿ ಆಹ್ವಾನಿಸಲಾಗಿದೆ.

**5 ಸಾವಿರ ವಿಶೇಷ ಅತಿಥಿಗಳು:** ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸುಮಾರು 5,000 ಮಂದಿಯನ್ನು ವಿಶೇಷ ಅತಿಥಿಗಳಾಗಿ ಆಹ್ವಾನಿಸಲಾಗಿದೆ. ಯುವ ಆವಿಷ್ಕಾರಕರು, ಸ್ಟಾರ್ಟ್‌ಅಪ್ ಸಾಧಕರು, ವಿಜ್ಞಾನಿಗಳು, ಮಹಿಳಾ ಉದ್ಯಮಿಗಳು, ರೈತರು, ಕುಶಲಕರ್ಮಿಗಳು, ಸ್ವಚ್ಛತಾ ಕಾರ್ಮಿಕರು, ಬೀದಿ ವ್ಯಾಪಾರಿಗಳು, ದೆಹಲಿ ಮೆಟ್ರೊ ಸಿಬ್ಬಂದಿ, ಆಸ್ಪತ್ರೆಗಳ ಸಿಬ್ಬಂದಿ ಸೇರಿದಂತೆ ವಿವಿಧ ವರ್ಗದ ಸಾಧಕರಿಗೆ ಆಹ್ವಾನ ನೀಡಲಾಗಿದೆ. ದೇಶದ ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಸಾಂಪ್ರದಾಯಿಕ ಉಡುಪು ಧರಿಸಿರುವ 1,500ಕ್ಕೂ ಹೆಚ್ಚು ದೆಹಲಿ ನಿವಾಸಿಗಳೂ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸುಮಾರು 600 ಸ್ಪರ್ಧಾ ವಿಜೇತ ಮಕ್ಕಳಿಗೂ ಸಮಾರಂಭದಲ್ಲಿ ಭಾಗವಹಿಸುವ ಅವಕಾಶ ಕಲ್ಪಿಸಲಾಗಿದೆ.





**ವಂದೇ ಮಾತರಂಗೆ ಐತಿಹಾಸಿಕ ಸ್ಥಾನ**

**ಐದು ಸಾವಿರ ವಿಶೇಷ ಅತಿಥಿಗಳು ಭಾಗಿ**

**ಭದ್ರತೆಗೆ 15-20 ಸಾವಿರ ಸಿಬ್ಬಂದಿ ನಿಯೋಜನೆ**

**ಭದ್ರತೆಗೆ 15–20 ಸಾವಿರ ಸಿಬ್ಬಂದಿ ನಿಯೋಜನೆ**

ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ಕೆಂಪುಕೋಟೆ ಹಾಗೂ ಸುತ್ತಮುತ್ತ ಭದ್ರತೆ ಮತ್ತಷ್ಟು ಬಿಗಿಗೊಳಿಸಲಾಗಿದೆ. ಸುಮಾರು 15,000ರಿಂದ 20,000 ಭದ್ರತಾ ಸಿಬ್ಬಂದಿ ನಿಯೋಜಿಸಲಾಗಿದ್ದು, ದೆಹಲಿ ಪೊಲೀಸ್, ಅರೆಸೇನಾ ಪಡೆಗಳು, ಕಮಾಂಡೊ ಪಡೆಗಳು ಹಾಗೂ ಎನ್‌ಎಸ್‌ಜಿ ಸಿಬ್ಬಂದಿ ಭದ್ರತಾ ಜಾಲದಲ್ಲಿದ್ದಾರೆ. ಎನ್‌ಎಸ್‌ಜಿ ಸ್ನೈಪರ್‌ಗಳು ಮತ್ತು ವಿಶೇಷ ಹಿಟ್ ಟೀಮ್‌ಗಳನ್ನೂ ನಿಯೋಜಿಸಲಾಗಿದೆ. ಕೆಂಪುಕೋಟೆ ಮತ್ತು ಸುತ್ತಮುತ್ತ 1,000ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ವಿಡಿಯೊ ವಿಶ್ಲೇಷಣೆ, ಮುಖ ಗುರುತಿಸುವ ವ್ಯವಸ್ಥೆ ಸೇರಿದಂತೆ ತಂತ್ರಜ್ಞಾನ ಆಧಾರಿತ ನಿಗಾ ವ್ಯವಸ್ಥೆ ಬಳಸಲಾಗುತ್ತಿದೆ. ಸುಮಾರು 1,000 ಕ್ಯಾಮೆರಾಗಳ ಸೈಬರ್ ಭದ್ರತಾ ಪರಿಶೀಲನೆಯನ್ನೂ ನಡೆಸಲಾಗಿದೆ.

ಜನಸಂದಣಿಯಲ್ಲಿ ಅನುಮಾನಾಸ್ಪದ ವ್ಯಕ್ತಿಗಳನ್ನು ಗುರುತಿಸಲು ಫೇಸಿಯಲ್ ರೆಕಗ್ನಿಷನ್ ಸಿಸ್ಟಂ (ಎಫ್‌ಆರ್‌ಎಸ್) ವ್ಯಾನ್‌ಗಳು ಹಾಗೂ ಅಭಿಜ್ಞಾನ ಆಪ್ ಬಳಕೆಯಲ್ಲಿವೆ. ಅನುಮಾನಾಸ್ಪದ ಮುಖಗಳನ್ನು ಪೊಲೀಸ್ ಡೇಟಾಬೇಸ್‌ನೊಂದಿಗೆ ಹೋಲಿಕೆ ಮಾಡುವ ವ್ಯವಸ್ಥೆ ಮಾಡಲಾಗಿದೆ. ವಾಹನಗಳ ಮೇಲೂ ನಂಬರ್‌ಪ್ಲೇಟ್ ಗುರುತಿಸುವ ವ್ಯವಸ್ಥೆ ಮೂಲಕ ನಿಗಾ ಇರಲಿದೆ.

**ಡ್ರೋನ್‌ಗಳ ಕಣ್ಗಾವಲು:** ಕೆಂಪುಕೋಟೆ ವ್ಯಾಪ್ತಿಯಲ್ಲಿ ಆಂಟಿ–ಡ್ರೋನ್ ವ್ಯವಸ್ಥೆ ಸಕ್ರಿಯಗೊಳಿಸಲಾಗಿದೆ. ಅನುಮತಿಯಿಲ್ಲದ ಡ್ರೋನ್ ಅಥವಾ ಇತರ ವೈಮಾನಿಕ ವಸ್ತುಗಳ ಹಾರಾಟ ತಡೆಯಲು ವಿಶೇಷ ನಿಗಾ ಇರಲಿದೆ. ಬಾಂಬ್ ನಿಷ್ಕ್ರಿಯ ದಳ, ಶ್ವಾನ ದಳ ಹಾಗೂ ಇತರ ವಿಶೇಷ ತಂಡಗಳು ನಿರಂತರವಾಗಿ ಸ್ಥಳ ಪರಿಶೀಲನೆ ನಡೆಸುತ್ತಿವೆ. ಕೆಂಪುಕೋಟೆ ಸುತ್ತ ಬಹುಹಂತದ ಭದ್ರತಾ ವಲಯ ನಿರ್ಮಿಸಲಾಗಿದ್ದು, ಪ್ರವೇಶಿಸುವವರನ್ನು ಹಲವು ಹಂತಗಳಲ್ಲಿ ತಪಾಸಣೆಗೆ ಒಳಪಡಿಸಲಾಗುತ್ತದೆ. ಪ್ರಮುಖ ರಸ್ತೆಗಳಲ್ಲಿ ಹೆಚ್ಚುವರಿ ಚೆಕ್‌ಪೋಸ್ಟ್‌ಗಳು, ಪಿಕೆಟ್‌ಗಳು ಹಾಗೂ ವಾಹನ ತಪಾಸಣೆ ವ್ಯವಸ್ಥೆ ಮಾಡಲಾಗಿದೆ.

# ಮೇಲ್ಮನೆ ಸಭಾಪತಿಯಾಗಿ ಸಲೀಂ ಅಹ್ಮದ್, ಜಿ.ಎಸ್. ಪಾಟೀಲ್ ವಿಧಾನಸಭಾ ಸ್ಪೀಕರ್





**ಬೆಂಗಳೂರು, ಆ.14:** ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ನೂತನ ಪೀಠಾಸೀನಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಶುಕ್ರವಾರ ಸುಗಮವಾಗಿ ನಡೆಯಿತು.ವಿಧಾನಸಭೆಯ ಸ್ಪೀಕರ್ ಆಗಿ ರೋಣ ಕ್ಷೇತ್ರದ ಶಾಸಕ ಜಿ.ಎಸ್.ಪಾಟೀಲ್ ಅವರು ಅವಿರೋಧವಾಗಿ ಆಯ್ಕೆಯಾದರೆ, ವಿಧಾನ ಪರಿಷತ್ತಿನ ಸಭಾಪತಿಯಾಗಿ ಸಲೀಂ ಅಹಮದ್ ಅವರು ಚುನಾವಣಾ ಪ್ರಕ್ರಿಯೆಯ ಮೂಲಕ ಆಯ್ಕೆಯಾದರು.

ವಿಧಾನಸಭೆಯ ಸಭಾಧ್ಯಕ್ಷ ಸ್ಥಾನಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಜಿ.ಎಸ್.ಪಾಟೀಲ್ ಅವರ ಹೆಸರನ್ನು ಪ್ರಸ್ತಾಪಿಸಿದರು. ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೇರಿದಂತೆ ಆಡಳಿತ ಪಕ್ಷದ ಸದಸ್ಯರು ಇದನ್ನು ಅನುಮೋದಿಸಿದರು. ಪ್ರತಿಪಕ್ಷಗಳ ಗೈರುಹಾಜರಿಯ ಹಿನ್ನೆಲೆಯಲ್ಲಿ ಜಿ.ಎಸ್.ಪಾಟೀಲ್ ಅವರು ಅವಿರೋಧವಾಗಿ ಆಯ್ಕೆಯಾದರು.

ಸ್ಪೀಕರ್ ಆಯ್ಕೆ ಪ್ರಕ್ರಿಯೆ ನಡೆಯುತ್ತಿದ್ದ ವೇಳೆ, ವಿಧಾನಸಭೆಯ ಬಿಜೆಪಿ ಸದಸ್ಯರು ಸದನದ ಹೊರಗಿದ್ದರು. ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಬಿಜೆಪಿ ಸದಸ್ಯರು ಮತ್ತೆ ಕಲಾಪಕ್ಕೆ ಹಾಜರಾದರು. ಬಳಿಕ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಜಿ.ಎಸ್. ಪಾಟೀಲ್ ಅವರನ್ನು ಸಾಂಪ್ರದಾಯಿಕವಾಗಿ ಕರೆತಂದು ಸ್ಪೀಕರ್ ಪೀಠದಲ್ಲಿ ಕೂರಿಸಿದರು. ವಿಧಾನಸಭೆಯಲ್ಲಿ ಸ್ಪೀಕರ್ ಆಯ್ಕೆ ಕುರಿತು ಹಂಗಾಮಿ ಸ್ಪೀಕರ್ ಟಿ.ಬಿ. ಜಯಚಂದ್ರ ಅವರು ಅಧಿಕಾರ ಹಸ್ತಾಂತರ ಮಾಡಿದರು.

ನೂತನ ಸಚಿವರ ನೇಮಕಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಹೈಕಮಾಂಡ್ ಪ್ರಕಟಿಸಿದ್ದ ಪಟ್ಟಿಯಲ್ಲಿ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರ ನೇಮಕದ ಕುರಿತು ಸೂಚನೆ ನೀಡಲಾಗಿತ್ತು. ಅದರಂತೆ ವಿಧಾನಸಭೆಗೆ ಜಿ.ಎಸ್ . ಪಾಟೀಲ್ ಅವರನ್ನು ಸ್ಪೀಕರ್ ಆಗಿ ಆಯ್ಕೆ ಮಾಡಲಾಗಿದೆ. ವಿಧಾನಸಭೆಯಲ್ಲಿ ಕಾಂಗ್ರೆಸ್‌ಗೆ ಸ್ಪಷ್ಟ ಬಹುಮತವಿದ್ದು, ಸುಮಾರು 135 ಶಾಸಕರ ಸಂಖ್ಯಾಬಲ ಹೊಂದಿದೆ. ರೈತ ಸಂಘದ ಶಾಸಕ ದರ್ಶನ್ ಪುಟ್ಟಣ್ಣಯ್ಯ, ಇಬ್ಬರು ಪಕ್ಷೇತರ ಶಾಸಕರು ಹಾಗೂ ಬಿಜೆಪಿ ಉಚ್ಚಾಟಿತ ಇಬ್ಬರು ಶಾಸಕರ ಬೆಂಬಲವನ್ನು ಪರಿಗಣಿಸಿದರೆ ಆಡಳಿತ ಪಕ್ಷದ ಬಲ 141 ರಷ್ಟಾಗುತ್ತದೆ. ಮತ್ತೊಂದೆಡೆ ಬಿಜೆಪಿ 62 ಶಾಸಕರನ್ನು ಹೊಂದಿದ್ದು, ಜನಾರ್ದನ ರೆಡ್ಡಿ ಮತ್ತು ಬಿಜೆಪಿ ಉಚ್ಚಾಟಿತ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಸೇರಿಸಿದರೂ ಸಂಖ್ಯಾಬಲ 64 ಕ್ಕೆ ತಲುಪುತ್ತದೆ. ಎನ್‌ಡಿಎ ಮೈತ್ರಿಕೂಟದ ಜೆಡಿಎಸ್ 18 ಸದಸ್ಯರನ್ನು ಹೊಂದಿದ್ದು, ಒಟ್ಟಾರೆ ಎನ್‌ಡಿಎ ಬಲ ಸುಮಾರು 82ರಷ್ಟಿದೆ.

ಈ ಸಂಖ್ಯಾಬಲದ ಹಿನ್ನೆಲೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಸ್ಪೀಕರ್ ಚುನಾವಣೆಯಿಂದ ಹಿಂದೆ ಸರಿದಿದ್ದವು. ಅಲ್ಲದೆ, ಪ್ರಜಾಸತ್ತಾತಕವಾಗಿ ನಡೆಯಬೇಕಿದ್ದ ಸ್ಪೀಕರ್ ಆಯ್ಕೆ ಪ್ರಕ್ರಿಯೆಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಪಕ್ಷದ ಲೆಟರ್‌ಹೆಡ್‌ನಲ್ಲಿ ಅಭ್ಯರ್ಥಿಯ ಹೆಸರನ್ನು ಕಳುಹಿಸಿದೆ ಎಂದು ಆರೋಪಿಸಿ ಬಿಜೆಪಿ ವಿಧಾನಸಭಾಧ್ಯಕ್ಷರ ಚುನಾವಣೆಯನ್ನು ಬಹಿಷ್ಕರಿಸಿತು. ಹೀಗಾಗಿ ಜಿ. ಎಸ್.ಪಾಟೀಲ್ ಅವರು ಅವಿರೋಧವಾಗಿ ಆಯ್ಕೆಯಾದರು.

ಇನ್ನು ವಿಧಾನ ಪರಿಷತ್ತಿನಲ್ಲಿ ಸಭಾಪತಿಯಾಗಿದ್ದ ಬಸವರಾಜ ಹೊರಟ್ಟಿ ಅವರು ಆ.7ರಂದು ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಸ್ಥಾನ ತೆರವಾಗಿತ್ತು. ತೆರವಾದ ಸ್ಥಾನಕ್ಕೆ ಹಿರಿಯ ಸದಸ್ಯ ಪುಟ್ಟಣ್ಣ ಅವರು ಹಂಗಾಮಿ ಸಭಾಪತಿಯಾಗಿ ಕಾರ್ಯ ನಿರ್ವಹಿಸುತ್ತಿದ್ದರು. ಅವರ ನೇತೃತ್ವದಲ್ಲಿ ನಡೆದ ನೂತನ ಸಭಾಪತಿ ಆಯ್ಕೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಲೀಂ ಅಹಮದ್ ಅವರು ಜಯಗಳಿಸಿದರು.

ವಿಧಾನ ಪರಿಷತ್ತಿನಲ್ಲಿ ಸಭಾಪತಿ ಸೇರಿ ಕಾಂಗ್ರೆಸ್ 39 ಸದಸ್ಯರ ಸಂಖ್ಯಾಬಲ ಹೊಂದಿದ್ದರೆ, ಬಿಜೆಪಿ 24 ಹಾಗೂ ಜೆಡಿಎಸ್ 6 ಸದಸ್ಯರನ್ನು ಹೊಂದಿವೆ. ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಸಂಖ್ಯಾಬಲ 30ರಷ್ಟಿದೆ. ಸಂಖ್ಯಾಬಲದ ಕೊರತೆಯಿದ್ದರೂ ಎನ್‌ಡಿಎ ಪರವಾಗಿ ಪಿ.ಎಚ್.ಪೂಜಾರ್ ಅವರನ್ನು ಒಮತದ ಅಭ್ಯರ್ಥಿಯಾಗಿ ಕಣಕ್ಕಿಳಿಸಲಾಗಿತ್ತು. ಆದರೆ ಚುನಾವಣಾ ಪ್ರಕ್ರಿಯೆಯಲ್ಲಿ ಅವರಿಗೆ ಹಿನ್ನಡೆಯಾಗಿ ಸಲೀಂ ಅಹಮದ್ ಆಯ್ಕೆಯಾದರು.

ಮಾಜಿ ಸಚಿವ ಮಂಕಾಳವೈದ್ಯ ಅವರನ್ನು ವಿಧಾನಸಭೆಯ ಉಪಸಭಾಧ್ಯಕ್ಷರನ್ನಾಗಿ ನೇಮಿಸುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

# ರಾಜ್ಯದ ಅಭಿವೃದ್ಧಿಗೆ ತಂಡವಾಗಿ ಕೆಲಸ ಮಾಡೋಣ: ಸಿಎಂ ಕರೆ

**ಬೆಂಗಳೂರು, ಆ.14:** ಪ್ರತಿಯೊಬ್ಬ ವ್ಯಕ್ತಿಗೂ ಹೊಸ ಆಲೋಚನೆಗಳಿರುತ್ತವೆ. ಹೊಸ ಆಲೋಚನೆ, ಭರವಸೆ, ನಂಬಿಕೆ ಮೂಲಕ ಜನರ ವಿಶ್ವಾಸ ಗಳಿಸುವುದು ನಮ್ಮ ಕರ್ತವ್ಯ. ನಮ್ಮ ಶಾಸಕರು, ವಿರೋಧ ಪಕ್ಷದ ಶಾಸಕರು, ನಾಯಕರು, ನಮ್ಮ ಸಚಿವ ಸಂಪುಟದ ಎಲ್ಲರನ್ನು ವಿಶ್ವಾಸಕ್ಕೆ ಪಡೆದು ರಾಜ್ಯದ ಜನರ ಅಭಿವೃದ್ಧಿಗೆ ಟೀಮ್ ಕರ್ನಾಟಕವಾಗಿ ಕೆಲಸ ಮಾಡಬೇಕು ಎಂದು ಸಿಎಂ ಡಿ.ಕೆ.ಶಿವಕುಮಾರ್ ವಿಧಾನಸಭೆಯಲ್ಲಿ ಕರೆ ನೀಡಿದರು.

ಸದನದಲ್ಲಿ ಸಚಿವ ಸಂಪುಟ ಸಹೋದ್ಯೋಗಿಗಳನ್ನು ಸದನಕ್ಕೆ ಪರಿಚಯಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಯಲ್ಲಿ ಜನರು ವಿವಿಧ ರೀತಿಯಲ್ಲಿ ಏನೇ ತೀರ್ಮಾನ ಮಾಡಿದ್ದರೂ ಒಪ್ಪಬೇಕು. ಆದರೆ ಈಗ ನನಗೆ ಸಿಕ್ಕಿರುವ ಅವಕಾಶದಲ್ಲಿ 224 ಶಾಸಕರೂ ನನ್ನ ದೃಷ್ಟಿಯಲ್ಲಿ ಒಂದೇ. ನಾನು ಈ ಸ್ಥಾನದಲ್ಲಿ ಕೂತು ಎಲ್ಲರನ್ನು ಒಟ್ಟಿಗೆ ಕರೆದೊಯ್ಯಬೇಕು ಎಂಬುದು ನನ್ನ ಆಸೆ ಎಂದರು.

ನಮ್ಮ ರಾಜಕಾರಣ ಏನೇ ಇದ್ದರೂ ರಸ್ತೆಯಲ್ಲಿರಲಿ. ನನಗೆ ಎಲ್ಲರೂ ಒಂದೇ. ಹಳೆಯದನ್ನೆಲ್ಲಾ ಮರೆತು, ಹೊಸ ಪಯಣದಲ್ಲಿ ಸಾಗೋಣ. ಇಡಿ ಪ್ರಪಂಚ ಭಾರತವನ್ನು ಬೆಂಗಳೂರು ಹಾಗೂ ಕರ್ನಾಟಕ ಮುಖೇನ ನೋಡುತ್ತಿದೆ. ನಮ್ಮಲ್ಲಿರುವ ಜ್ಞಾನ, ಪ್ರತಿಭೆ, ಮಾನವ ಸಂಪನ್ಮೂಲ, ಪ್ರಕೃತಿ ಸಂಪತ್ತು ಬೇರೆ ರಾಜ್ಯಗಳಲ್ಲಿ ಇಲ್ಲ ಎಂದರು.

ರಾಜಸ್ಥಾನ ಬಿಟ್ಟರೆ ಇದೇ ಎರಡನೇ ಅತಿದೊಡ್ಡ ಒಣಭೂಮಿ ಹೊಂದಿರುವುದು ರಾಜ್ಯ. ನಾವು ನೀರಿನ ವಿಚಾರದಲ್ಲಿ ಬೇರೆ ರಾಜ್ಯಗಳೊಂದಿಗೆ ಬಡಿದಾಡುತ್ತಿದ್ದೇವೆ. ಕೃಷಿಗೆ ಉತ್ತೇಜನ ನೀಡಲು ಅನೇಕ ನೀರಾವರಿ ಯೋಜನೆಗಳನ್ನು ನೀಡಿದ್ದು, ಮುಂದೆಯೂ ನೀಡುತ್ತೇವೆ. ಬೆಂಗಳೂರು ಸರ್ವಜನಾಂಗದ ಶಾಂತಿಯ ತೋಟ. ಇದು ಎಲ್ಲಾ ರೀತಿಯ ಜನರನ್ನು ಸ್ವಾಗತಿಸುತ್ತದೆ. ಇಲ್ಲಿ 2 ಲಕ್ಷ ವಿದೇಶಿ ಪಾಸ್‌ಪೋರ್ಟ್‌ದಾರರು, 500 ಪ್ರತಿಷ್ಠಿತ ಕಂಪನಿಗಳ ಪೈಕಿ 480 ಕಂಪನಿಗಳು, ಅದರ ಅಧಿಕಾರಿಗಳು ವಾಸಿಸುತ್ತಿದ್ದಾರೆ. ನಮ್ಮ ಕಾವೇರಿ ತಾಯಿ ಎಲ್ಲರಿಗೂ ನೀರು ನೀಡುತ್ತಿದ್ದಾಳೆ. ಬಂದವರಲ್ಲಿ ಎಲ್ಲರಿಗೂ ಉತ್ತಮ ಶಿಕ್ಷಣ, ಆರೋಗ್ಯ, ಪರಿಸರ ನೀಡುತ್ತಿದ್ದೇವೆ ಎಂದರು.

ನಾವು ಹೊಸ ಯೋಜನೆ ರಿಂಗ್‌ರಸ್ತೆ ಮಾಡುತ್ತಿದ್ದೇವೆ. ದೇವೇಗೌಡರು ನೈಸ್‌ರಸ್ತೆಗೆ ಸಹಿ ಹಾಕಿದರು. ಅವರು ಈ ವಿಚಾರದಲ್ಲಿ ಟೀಕೆ ಮಾಡಬಹುದು. ಆದರೆ ಆ ರಸ್ತೆಯೇ ಇಲ್ಲವಾಗಿದ್ದರೆ ಬೆಂಗಳೂರು ಪರಿಸ್ಥಿತಿ ಏನಾಗುತ್ತಿತ್ತು. ಆ ಯೋಜನೆಯಲ್ಲಿ ಅನ್ಯಾಯ ಆಗಿದ್ದರೆ ಅದನ್ನು ಸರಿಮಾಡೋಣ. ಕುಮಾರಸ್ವಾಮಿ ಅವರು ಒಳ್ಳೆಯ ಉದ್ದೇಶ ಇಟ್ಟುಕೊಂಡು ಸಹಿ ಹಾಕಿದ್ದಾರೆ. ಯಡಿಯೂರಪ್ಪ ಅವರು ರೈತರಿಗಾಗಿ ಪ್ರತ್ಯೇಕ ಬಜೆಟ್ ಮಂಡಿಸಿ, ಅನ್ನದಾತರಿಗೆ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು.

ಸಿದ್ದರಾಮಯ್ಯ ಅವರು ಹಸಿವಿನಿಂದ ಜನ ಕಂಗಾಲಾಗಬಾರದು ಎಂದು ಕೊಟ್ಟ ಅನ್ನಭಾಗ್ಯ ಯೋಜನೆ ಇತಿಹಾಸ ಪುಟದಲ್ಲಿ ರಾರಾಜಿಸುತ್ತದೆ. ಅರಸು ಅವರು ಕೊಟ್ಟ ಯೋಜನೆ, ಕೃಷ್ಣ ಅವರ ಕಾಲದಲ್ಲಿ ಆದ ಐಟಿ ಬಿಟಿ ಕ್ರಾಂತಿ ಎಲ್ಲವೂ ಇತಿಹಾಸ ಪುಟ ಸೇರಿದೆ. ನೆಹರೂ ಅವರ ಕಾಲದಿಂದ ಇಲ್ಲಿಯವರೆಗೂ ಎಲ್ಲ ನಾಯಕರು ಪಕ್ಷಾತೀತವಾಗಿ ತಮ್ಮದೇ ಆದ ದಾರಿಯಲ್ಲಿ ದೇಶದ ಪ್ರಗತಿಗೆ ಕೆಲಸ ಮಾಡಿದ್ದಾರೆ.

**ಹಸಿರು ರಾಜ್ಯದ ಗುರಿ, ಸಿಎಸ್‌ಆರ್ ನಿಧಿ ಸದ್ಬಳಕೆ:** ಮುಂದಿನ 25 ವರ್ಷಗಳಲ್ಲಿ ರಾಜ್ಯವನ್ನು ಹಸಿರು ರಾಜ್ಯವನ್ನಾಗಿ ಮಾಡಿ, ನೀರಿನ ಪೋಲು ತಡೆಗಟ್ಟಿ ಕೃಷಿಗೆ ಬಳಸಬೇಕು. ಪ್ರತಿಯೊಬ್ಬ ರೈತರ ಬದುಕಿಗೆ ಆಸರೆಯಾಗಬೇಕು. ತೋಟಗಾರಿಕೆ, ಹೈನುಗಾರಿಕೆ ಪರ್ಯಾಯ ರೈತರ ಆರ್ಥಿಕತೆಯಾಗಿದೆ. ನಮ್ಮ ಸರ್ಕಾರ ಗ್ರಾಮೀಣ ಭಾಗದ ಜನರು, ಮಕ್ಕಳು ಶಿಕ್ಷಣಕ್ಕಾಗಿ ನಗರಕ್ಕೆ ವಲಸೆ ಬರುವುದನ್ನು ತಪ್ಪಿಸಲು ಸಿಎಸ್‌ಆರ್ ನಿಧಿಯನ್ನು ಗ್ರಾಮೀಣ ಭಾಗದ ಪ್ರಾಥಮಿಕ ಶಿಕ್ಷಣಕ್ಕೆ ಮೀಸಲಿಡಲು ತೀರ್ಮಾನಿಸಿದ್ದೇವೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

**ಅಧಿಕಾರ ದುರುಪಯೋಗ ಮಾಡಲ್ಲ:** ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿರೋಧ ಪಕ್ಷದ ನಾಯಕರನ್ನು ಬಿಟ್ಟು ಕೆಲಸ ಮಾಡಲು ಆಗುವುದಿಲ್ಲ. ನಮಗೆ ಯಾರ ಬಗ್ಗೆಯೂ ಹೊಟ್ಟೆಉರಿ ಇಲ್ಲ. ಯಾರ ವಿರುದ್ಧವೂ ಈ ಅಧಿಕಾರ ದುರುಪಯೋಗ ಮಾಡಿ ತೊಂದರೆ ನೀಡಲು ಬಯಸುವುದಿಲ್ಲ. ಅಧಿಕಾರದ ವಿಚಾರವಾಗಿ ಅಶೋಕ್ ಅವರು ಇದೇ ಸದನದಲ್ಲಿ ಮಾತನಾಡಿದಾಗ, ನಾನು ಒಂದು ಮಾತು ಹೇಳಿದ್ದೆ. ಧೈರ್ಯಶಾಲಿ ಒಬ್ಬ ವ್ಯಕ್ತಿಯಿಂದ ಬಹುಮತ ಸಾಧ್ಯವಾಗುತ್ತದೆ. ಸಿದ್ದರಾಮಯ್ಯ ಅವರು ಸೇರಿ ನಾವು 136 ಜನ ಒಂದೇ ಎಂದು ಅಂತ ಹೇಳಿದ್ದೆ. ನಾನು ಅದನ್ನು ಸಾಬೀತುಪಡಿಸಿದ್ದೇನೆ. ನಾವು ಒಟ್ಟಾಗಿ ಹೋರಾಟ ಮಾಡುತ್ತೇವೆ. ಅಂತಿಮ ಫಲಿತಾಂಶವನ್ನು ಜನ ತೀರ್ಮಾನಿಸುತ್ತಾರೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

### 224 ಶಾಸಕರೂ ನನಗೆ ಒಂದೇ, ವಿರೋಧ ಪಕ್ಷದವರನ್ನು ವಿಶ್ವಾಸಕ್ಕೆ ಪಡೆದು ಕೆಲಸ ಮಾಡುವೆ: ಡಿ.ಕೆ. ಶಿವಕುಮಾರ್



### ಸಭಾಧ್ಯಕ್ಷರ ಆಯ್ಕೆಯಲ್ಲಿ ವಿಪಕ್ಷ ಭಾಗವಹಿಸಬೇಕಿತ್ತು

ಸಭಾಧ್ಯಕ್ಷರ ಪೀಠ ವೈಯಕ್ತಿಕ ಸ್ಥಾನವಲ್ಲ. ನಮ್ಮ ಪಕ್ಷದ ನಾಯಕರು ಈ ಸ್ಥಾನಕ್ಕೆ ಅಭ್ಯರ್ಥಿಗಳನ್ನು ಸೂಚಿಸಿದ್ದಾರೆ ಹೊರತು ಅವರನ್ನೇ ಸಭಾಧ್ಯಕ್ಷರನ್ನಾಗಿ ಘೋಷಣೆ ಮಾಡಿಲ್ಲ. ಇದಕ್ಕೆ ವಿರೋಧ ಪಕ್ಷದ ನಾಯಕರು ಪ್ರತಿಭಟನೆ ಮಾಡುತ್ತಿದ್ದಾರೆ. ಸ್ಪೀಕರ್ ಆದವರು ಪಕ್ಷಾತೀತರು. ಎಲ್ಲರ ಮಾತಿಗೂ ಕಿವಿಗೊಡಬೇಕು. ಹೀಗಾಗಿ ವಿರೋಧ ಪಕ್ಷದವರು ವಿರೋಧ ಮಾಡುವುದನ್ನು ಬಿಟ್ಟು ಸಭಾಧ್ಯಕ್ಷರ ಆಯ್ಕೆಯಲ್ಲಿ ಭಾಗವಹಿಸಬೇಕಿತ್ತು. ವಿರೋಧ ಮಾಡುವುದು ಅವರ ಘನತೆಗೆ ತಕ್ಕದಲ್ಲ ಎಂದು ಡಿ.ಕೆ. ಶಿವಕುಮಾರ್ ಅಭಿಪ್ರಾಯಪಟ್ಟರು.

### ಕೇಂದ್ರ ಸಚಿವರಿಗೆ ಅಭಿನಂದನೆ

ನೀರಾವರಿ ವಿಚಾರದಲ್ಲಿ ಪ್ರಹ್ಲಾದ್ ಜೋಷಿ ಅವರು ನಮಗೆ ಕೊಟ್ಟ ಸಹಕಾರವನ್ನು ನಾವು ಅಭಿನಂದಿಸುತ್ತೇವೆ. ಇನ್ನು ಕುಮಾರಸ್ವಾಮಿ ಅವರು ಕೇಂದ್ರ ಸರ್ಕಾರದಲ್ಲಿ ಅತಿದೊಡ್ಡ ಖಾತೆಯನ್ನು ಹೊಂದಿದ್ದಾರೆ. ಅವರು ರಾಜ್ಯದ ಜನರಿಗೆ 25 ಸಾವಿರ ಉದ್ಯೋಗ ಕಲ್ಪಿಸಬಹುದು. ಅವರು ಎಲ್ಲಿ ಜಾಗ ಕೇಳುತ್ತಾರೋ ಅಲ್ಲಿ ಕೊಡೋಣ. ಎಷ್ಟೇ ಆದರೂ ನಮ್ಮ ನಾಡಿನ ಜನರಿಗೆ ಉದ್ಯೋಗ ಕಲ್ಪಿಸುವುದು ಮುಖ್ಯ ಅಲ್ಲವೇ ಅವರು ನನ್ನ ಬಗ್ಗೆ ಎಷ್ಟೇ ಬೇಸರ ಹೊಂದಿದ್ದರೂ ಅವರ ಜೊತೆಗೆ ಕೆಲಸ ಮಾಡಲು ನಾನು ಸಿದ್ಧ ಎಂದು ತಿಳಿಸಿದರು.

### ಮುಂದಿನ ಚುನಾವಣೆ ಎದುರಿಸುವುದು ಗೊತ್ತಿದೆ

2028ರ ಚುನಾವಣೆ ಹೇಗೆ ಎದುರಿಸಬೇಕು ನನಗೆ ಗೊತ್ತಿದೆ. ನಾನು ಫುಟ್ಬಾಲ್ ಆಡುವವನಲ್ಲ, ಚೆಸ್ ಆಡುವವನು. ಜನರ ಸೇವೆ ಮಾಡುವಾಗ ಎಲ್ಲರೂ ಒಂದಾಗಿ ಕೆಲಸ ಮಾಡಬೇಕು. ಇಲ್ಲಿ ಯಾರೂ ಶಾಶ್ವತವಲ್ಲ. ನಾವು ವಿರೋಧ ಪಕ್ಷಕ್ಕೆ ಹೋಗಬಹುದು, ವಿರೋಧ ಪಕ್ಷದವರು ಇಲ್ಲಿಗೆ ಬರಬಹುದು. ಜನರು ನಮ್ಮೆಲ್ಲರನ್ನು ಆಯ್ಕೆ ಮಾಡಿರುವುದು ರಾಜ್ಯದ ಹಿತ ಕಾಪಾಡಲು. ಸಭಾಧ್ಯಕ್ಷರ, ಸ್ಥಾನದಲ್ಲಿ ಕುಳಿತಿರುವ ಟಿ.ಬಿ. ಜಯಚಂದ್ರ ಅವರು ಹಿರಿಯರು. ಆ ಸ್ಥಾನದ ಮಹಿಮೆ ದೊಡ್ಡದು. ಅದನ್ನು ಅಲಂಕರಿಸಿದ ಕೃಷ್ಣ ಅವರು ಸಿಎಂ ಆದರು, ಅಲ್ಲಿ ಕುಳಿತಿದ್ದ ಜಗದೀಶ್ ಶೆಟ್ಟರ್ ಅವರು ಸಿಎಂ ಆದರು. ಖಾದರ್ ಅವರು ಅಲ್ಲಿ ಕೂತು ಈಗ ಡಬಲ್ ಇಲಾಖೆ ಧಮಾಕದೊಂದಿಗೆ ಇಲ್ಲಿ ಕೂತಿದ್ದಾರೆ. ಎಲ್ಲರೂ ಭರವಸೆಯಿಂದ ಇರೋಣ ಎಂದು ಡಿ. ಕೆ.ಶಿವಕುಮಾರ್ ಆಶಿಸಿದರು.

# ಜನಗಣತಿ 2027: ಜಾತಿ, ಕೋವಿಡ್ ಲಸಿಕೆ ಮಾಹಿತಿ ಸೇರಿ 40 ಪ್ರಶ್ನೆ- ಕೇಂದ್ರ ಅಧಿಸೂಚನೆ

**ನವದೆಹಲಿ, ಆ.14:** ದೇಶದ ಮುಂದಿನ ಜನಗಣತಿ–2027ಕ್ಕೆ ಕೇಂದ್ರ ಸರ್ಕಾರ 40 ಪ್ರಶ್ನೆಗಳ ಪಟ್ಟಿಯನ್ನು ಅಧಿಸೂಚನೆ ಮೂಲಕ ಪ್ರಕಟಿಸಿದೆ. ಇದೇ ಮೊದಲ ಬಾರಿಗೆ ಸ್ವಾತಂತ್ರ್ಯಾನಂತರದ ಜನಗಣತಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮಾತ್ರವಲ್ಲದೆ ವ್ಯಕ್ತಿಯ ಜಾತಿಯ ವಿವರವನ್ನು ಪ್ರತ್ಯೇಕವಾಗಿ ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. ಕೋವಿಡ್ ಲಸಿಕೆ ಪಡೆದ ಸ್ಥಳದ ಮಾಹಿತಿಯನ್ನೂ ಸಂಗ್ರಹಿಸಲಾಗುತ್ತದೆ.

ಜನಗಣತಿಯ ಜನಸಂಖ್ಯೆ ಎಣಿಕೆ ಹಂತದಲ್ಲಿ ಮನೆ ಮನೆಗೆ ತೆರಳುವ ಗಣತಿದಾರರು ಈ 40 ಪ್ರಶ್ನೆಗಳನ್ನು ಕೇಳಲಿದ್ದಾರೆ. ವ್ಯಕ್ತಿಯ ಹೆಸರು, ಕುಟುಂಬದ ಮುಖ್ಯಸ್ಥರೊಂದಿಗಿನ ಸಂಬಂಧ, ಲಿಂಗ, ಜನ್ಮ ದಿನಾಂಕ, ವಯಸ್ಸು, ವೈವಾಹಿಕ ಸ್ಥಿತಿ, ಮದುವೆಯ ವಯಸ್ಸು, ಪತಿ/ಪತ್ನಿಯ ಹೆಸರು, ರಾಷ್ಟ್ರೀಯತೆ ಹಾಗೂ ಧರ್ಮದ ಮಾಹಿತಿಯನ್ನು ಪಡೆಯಲಾಗುತ್ತದೆ. ಪ್ರಶ್ನಾವಳಿಯ 10ನೇ ಪ್ರಶ್ನೆಯಲ್ಲಿ ಎಸ್‌ಸಿ/ಎಸ್‌ಟಿ ಜಾತಿ ಎಂಬ ಅಂಶವನ್ನು ಸೇರಿಸಲಾಗಿದೆ. ವ್ಯಕ್ತಿಯು ತನ್ನ ಜಾತಿಯನ್ನು ಹೇಗೆ ಘೋಷಿಸುತ್ತಾನೋ ಅದನ್ನೇ ದಾಖಲಿಸಲಾಗುತ್ತದೆ. ಜಾತಿಗಳ ಪೂರ್ವನಿರ್ಧರಿತ ದೊಡ್ಡ ಪಟ್ಟಿಯನ್ನು ನೀಡುವ ಬದಲು, ಉತ್ತರದಾರರು ತಿಳಿಸುವ ಜಾತಿಯನ್ನು ದಾಖಲಿಸುವ ಮುಕ್ತ ಕಾಲಂ ಇರಲಿದೆ ಎಂದು ವರದಿಗಳು ತಿಳಿಸಿವೆ.

### ಮೊದಲ ಬಾರಿಗೆ ಜಾತಿ ವಿವರ ಪ್ರತ್ಯೇಕವಾಗಿಸಲು ಅವಕಾಶ, ಕರೊನಾ ಲಸಿಕೆ ಪಡೆದ ಮಾಹಿತಿಯೂ ದಾಖಲೆ



ಜನಗಣತಿ ಪ್ರಶ್ನಾವಳಿಯಲ್ಲಿ ಆಧಾರ್, ಮತದಾರರ ಗುರುತಿನ ಚೀಟಿ, ಪಾಸ್‌ಪೋರ್ಟ್, ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆಯಂತಹ ಗುರುತಿನ ಮತ್ತು ಹಣಕಾಸು ಸಂಬಂಧಿತ ಮಾಹಿತಿಗಳಿಗೂ ಸ್ಥಾನ ನೀಡಲಾಗಿದೆ. ಶಿಕ್ಷಣ, ಡಿಜಿಟಲ್ ಸಾಕ್ಷರತೆ, ಅಂಗವೈಕಲ್ಯ, ಉದ್ಯೋಗ, ವಲಸೆ ಹಾಗೂ ಕುಟುಂಬ ಮತ್ತು ಸಾಮಾಜಿಕ, ಆರ್ಥಿಕ ಸ್ಥಿತಿಗೆ ಸಂಬಂಧಿಸಿದ ಮಾಹಿತಿಯನ್ನೂ ಸಂಗ್ರಹಿಸಲಾಗುತ್ತದೆ. ಕೋವಿಡ್ 19 ಲಸಿಕೆ ಪಡೆದಿರುವುದು ಮತ್ತು ಲಸಿಕೆ ಪಡೆದ ಸ್ಥಳದ ಕುರಿತ ಪ್ರಶ್ನೆಯೂ ಪಟ್ಟಿಯಲ್ಲಿದೆ. ಇದರಿಂದ ಕೋವಿಡ್ ನಂತರದ ದೇಶದ ಜನಸಂಖ್ಯೆಯ ಆರೋಗ್ಯ ಸಂಬಂಧಿತ ಮಾಹಿತಿಯ ಪ್ರಮುಖ ದಾಖಲೆ ಸಿದ್ಧವಾಗಲಿದೆ. 2027ರ ಜನಗಣತಿ ಸಂಪೂರ್ಣ ಡಿಜಿಟಲ್ ಮಾದರಿಯಲ್ಲಿ ನಡೆಯಲಿದೆ. ಜನರಿಗೆ ಸ್ವಯಂ ಗಣತಿ ಮೂಲಕ ತಮ್ಮ ವಿವರಗಳನ್ನು ಸಲ್ಲಿಸುವ ಅವಕಾಶವೂ ಇರಲಿದೆ. ಸ್ವಯಂ ಗಣತಿ ಸೌಲಭ್ಯ ಆಗಸ್ಟ್ 17ರಿಂದ 31ರವರೆಗೆ ಲಭ್ಯವಾಗಲಿದೆ ಎಂದು ತಿಳಿಸಲಾಗಿದೆ.

ಲಡಾಖ್ ಹಾಗೂ ಜಮ್ಮು–ಕಾಶ್ಮೀರ, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡದ ಕೆಲವು ಪ್ರದೇಶಗಳಲ್ಲಿ ಸೆ.1ರಿಂದ 30ರವರೆಗೆ ಗಣತಿ ನಡೆಯಲಿದೆ. ದೇಶದ ಉಳಿದ ಭಾಗಗಳಲ್ಲಿ ಜನಸಂಖ್ಯೆ ಎಣಿಕೆ 2027ರಲ್ಲಿ ನಡೆಯಲಿದೆ. 2021ರಲ್ಲಿ ನಡೆಯಬೇಕಿದ್ದ ದಶವಾರ್ಷಿಕ ಜನಗಣತಿ ಕೋವಿಡ್–19 ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ಮುಂದೂಡಿಕೆಯಾಗಿತ್ತು. ಇದೀಗ 2027ರ ಜನಗಣತಿ ದೇಶದ ಸಾಮಾಜಿಕ, ಆರ್ಥಿಕ ಮತ್ತು ಜನಸಂಖ್ಯಾ ಸ್ವರೂಪದ ಕುರಿತು ಹೊಸ ಹಾಗೂ ಹೆಚ್ಚು ವಿಸ್ತೃತ ಮಾಹಿತಿ ಒದಗಿಸುವ ನಿರೀಕ್ಷೆಯಿದೆ.

### ಖರ್ಗೆ ಸಲಹೆ ಕಡೆಗಣನೆ




ದೇಶದ ಜನಸಂಖ್ಯೆಯ ಸಮಗ್ರ ಮಾಹಿತಿ ಸಂಗ್ರಹಿಸುವ ಜನಗಣತಿ 2027ರ 2ನೇ ಹಂತಕ್ಕೆ ಕೇಂದ್ರ ಸರ್ಕಾರ 40 ಪ್ರಶ್ನಾವಳಿಯನ್ನು ಅಧಿಸೂಚನೆ ಮೂಲಕ ಪ್ರಕಟಿಸಿದೆ. ಸ್ವತಂತ್ರ ಭಾರತದ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಪರಿಶಿಷ್ಟ ಜಾತಿ, ಪಂಗಡಗಳ ಮಾಹಿತಿಯ ಜೊತೆಗೆ ಎಲ್ಲಾ ಜನರಿಂದ ಜಾತಿ ಕುರಿತ ಮುಕ್ತಪ್ರಶ್ನೆಯ ಮೂಲಕ ಮಾಹಿತಿ ಪಡೆಯಲಾಗುತ್ತದೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ಈ ಹಿಂದೆ ತೆಲಂಗಾಣ ಮತ್ತು ಬಿಹಾರದಲ್ಲಿ ನಡೆದ ಸಮೀಕ್ಷೆ ವೇಳೆ ಜಾತಿಗಳ ಪಟ್ಟಿ ಹಾಗೂ ಪ್ರಶ್ನಾವಳಿ ಸಿದ್ಧಪಡಿಸಲಾಗಿತ್ತು. ಜನ ನೀಡಿದ ಉತ್ತರವನ್ನು ಗುರುತು ಮಾಡಲಾಗುತ್ತಿತ್ತು. ಇದೇ ಮಾದರಿಯಲ್ಲಿ ಕೇಂದ್ರ ಸರ್ಕಾರ ಕೂಡಾ ಗಣತಿ ನಡೆಸಲಿದೆ ಎಂಬ ನಿರೀಕ್ಷೆ ಹುಸಿಯಾಗಿದೆ. ಜಾತಿಗಣತಿ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಎಐಸಿಸಿ ಅಧ್ಯಕ್ಷ ಖರ್ಗೆ ಅವರು ಕಳೆದ ವರ್ಷ ಮೇ 5ರಂದು ಬರೆದಿದ್ದ ಪತ್ರದ ಪ್ರತಿಯನ್ನು ಹಂಚಿಕೊಂಡಿದ್ದಾರೆ. ಜಾತಿ ಗಣತಿ ವಿಚಾರವಾಗಿ ಎಲ್ಲ ರಾಜಕೀಯ ಪಕ್ಷಗಳೊಂದಿಗೆ ಚರ್ಚೆ ನಡೆಸಬೇಕು. ಗಣತಿಗೆ ಸಂಬಂಧಿಸಿದಂತೆ ಸಮರ್ಪಕ ಪ್ರಶ್ನಾವಳಿ ಸಿದ್ಧಪಡಿಸಬೇಕು. ಜಾತಿವಾರು ಜನಸಂಖ್ಯೆಯ ಮಾಹಿತಿ ಸಂಗ್ರಹವಷ್ಟೇ ಗಣತಿ ಉದ್ದೇಶವಾಗಿರದೆ, ಸಾಮಾಜಿಕ ಆರ್ಥಿಕ ಸಾಧನೆಯೇ ಗುರಿಯಾಗಿರಬೇಕು ಎಂದು ಖರ್ಗೆ ಪತ್ರದಲ್ಲಿ ಪ್ರತಿಪಾದಿಸಿದ್ದರು. ಈ ಸಲಹೆಗಳನ್ನು ಕೇಂದ್ರ ಸರ್ಕಾರ ಕಡೆಗಣಿಸಿದೆ ಎಂದು ದೂರಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

## ಹಾರ್ದಿಕ ಅಭಿನಂದನೆಗಳು



ಕರ್ನಾಟಕ ವಿಧಾನಸಭೆಯ ನೂತನ ಸಭಾಧ್ಯಕ್ಷರಾಗಿ ಅವಿರೋಧವಾಗಿ
ಆಯ್ಕೆಯಾದ, ರೋಣ ವಿಧಾನಸಭಾ ಕ್ಷೇತ್ರದ ಶಾಸಕರಾದ

# ಶ್ರೀ ಜಿ.ಎಸ್.ಪಾಟೀಲ್

ಅವರಿಗೆ

# ಹೃತ್ಪೂರ್ವಕ ಅಭಿನಂದನೆಗಳು



ಶುಭಕೋರುವವರು : ಅಭಿಮಾನಿಗಳು ಹಾಗೂ
ಹಿತೈಷಿಗಳು, ರೋಣ ವಿಧಾನಸಭಾ ಕ್ಷೇತ್ರ, ಕರ್ನಾಟಕ

## ನಿತ್ಯ ಪಂಚಾಂಗ 15.08.2026 ಶನಿವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ**

**ಶ್ರಾವಣ ಶುದ್ಧ, ತದಿಗೆ, ಪುಬ್ಬ ನಕ್ಷತ್ರ, ಸ್ವಾತಂತ್ರ್ಯ ದಿನಾಚರಣೆ, ಶ್ರಾವಣ ಶನಿವಾರ, ಸಂಪದ್ಗೌರೀ ವ್ರತ, ತಿರುಪ್ಪಾಡಿಪುರಂ ಆಳ್ವಾರ್ ತಿರುನಕ್ಷತ್ರ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಕ್ಯೂಆರ್ ಕೋಡ್ ಮೂಲಕ ಮಾತ್ರ ವಿಧಾನಸೌಧ ಪ್ರವೇಶಕ್ಕೆ ಅವಕಾಶ



**ಬೆಂಗಳೂರು, ಆ.14:** ಫ್ರೀಡಂ ಹಬ್ಬಕ್ಕೆ ಹರಿದುಬಂದ ಅಭೂತಪೂರ್ವ ಪ್ರತಿಕ್ರಿಯೆ ದೊರೆಯುತ್ತಿದ್ದು, ಇದಕ್ಕೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ಹರ್ಷ ವ್ಯಕ್ತಪಡಿಸಿದ್ದಾರೆ.

ವಿಧಾನಸೌಧ ಅವರಣವನ್ನು ಪ್ರವೇಶಿಸಲು ಕ್ಯೂಆರ್ ಕೋಡ್ ಮೂಲಕ ಮುಂಗಡ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ. ಇಲ್ಲವಾದಲ್ಲಿ ಪ್ರವೇಶ ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಮೊದಲೇ ನೋಂದಣಿ ಇಲ್ಲದೆ ಬರುವ ಯಾರೊಬ್ಬರಿಗೂ ಪ್ರವೇಶ ನೀಡಲು ನಮಗೆ ಸಾಧ್ಯವಾಗುವುದಿಲ್ಲ. ಈ ಕಾರ್ಯವಿಧಾನವನ್ನು ಕಡ್ಡಾಯವಾಗಿ ಪಾಲಿಸುವಂತೆ ಪೊಲೀಸರು ಬಲವಾಗಿ ಸಲಹೆ ನೀಡಿದ್ದಾರೆ. ಕಾರ್ಯಕ್ರಮವು ಸುಗಮವಾಗಿ ಮತ್ತು ಸುರಕ್ಷಿತವಾಗಿ ನಡೆಯಲು ನಿಮ್ಮ ಪ್ರೀತಿಯ ಸಹಕಾರ ಅಗತ್ಯ ಎಂದು ಹೇಳಿದ್ದಾರೆ.

# 17 ಪೊಲೀಸ್ ಸಿಬ್ಬಂದಿಗೆ ರಾಷ್ಟ್ರಪತಿ ಪದಕ ಪ್ರಕಟ

**ಬೆಂಗಳೂರು, ಆ.14:** 80ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಸಚಿವಾಲಯವು ಪೊಲೀಸ್ ಇಲಾಖೆಯಲ್ಲಿ ಅತ್ಯುತ್ತಮ ಹಾಗೂ ಶ್ಲಾಘನೀಯ ಸೇವೆ ಸಲ್ಲಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ನೀಡಲಾಗುವ ಪ್ರತಿಷ್ಠಿತ ರಾಷ್ಟ್ರಪತಿ ಪದಕ–2026 ಪ್ರಶಸ್ತಿ ಘೋಷಿಸಿದೆ.

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಒಟ್ಟು 17 ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಈ ಬಾರಿಯ ರಾಷ್ಟ್ರಪತಿ ಪದಕ ಪುರಸ್ಕಾರಕ್ಕೆ ಭಾಜನರಾಗಿದ್ದಾರೆ.

**ಎಸಿಪಿ ಧರ್ಮೇಂದ್ರಗೆ ರಾಷ್ಟ್ರಪತಿ ವಿಶಿಷ್ಟ ಸೇವಾ ಗೌರವ**

ಸಿಸಿಬಿಯ ಸಹಾಯಕ ಪೊಲೀಸ್ ಕಮಿಷನರ್ ಎಚ್.ಎನ್. ಧರ್ಮೇಂದ್ರ ಪ್ರತಿಷ್ಠಿತ 'ರಾಷ್ಟ್ರಪತಿ ವಿಶಿಷ್ಟ ಸೇವಾ ಪದಕ' ಗೌರವಕ್ಕೆ ಆಯ್ಕೆಯಾಗಿದ್ದಾರೆ. ಪ್ರಶಸ್ತಿ ಪುರಸ್ಕೃತ ವಿವರ ಕೆಳಗಿನಂತಿದೆ.

**ಸಾರಾ ಫಾತಿಮಾ** – ಎಸ್‌ಪಿ, ರೈಲ್ವೇಸ್, ಬೆಂಗಳೂರು
**ಥಾಮಸ್ ಮ್ಯಾಥ್ಯೂ** – ಕಮಾಂಡೆಂಟ್, ಕೆಎಸ್‌ಆರ್‌ಪಿ
**ಮಹಾದೇವ್** – ಎಸಿಪಿ, ಆಗ್ನೇಯ ಸಂಚಾರ ವಿಭಾಗ, ಬೆಂಗಳೂರು
**ಪರಮಾನಂದ್**– ಡಿವೈಎಸ್‌ಪಿ, ಡಿಎಆರ್, ರಾಯಚೂರು
**ಷಣ್ಮುಗವರ್ಮಾ** – ಪಿಎಸ್‌ಐ, ಪೊಲೀಸ್ ತರಬೇತಿ ಶಾಲೆ, ಮೈಸೂರು
**ಭಾವುದ್ದೀನ್ ರುಕ್ಮುದ್ದೀನ್** – ಪಿಎಸ್‌ಐ, ಮಾಳಮಾರುತಿ ಠಾಣೆ, ಬೆಳಗಾವಿ
**ಗುರುಪ್ರಸಾದ್ ಗೋಪಾಲ್‌ನಾಯಕ್**–ಎಸ್‌ಐ, ಸಿಐಡಿ
**ನಯೀಂ** – ರಿಸರ್ವ್ ಪಿಐ, ರಾಜಭವನ
**ಶ್ರೀನಿವಾಸ** – ಪಿಎಸ್‌ಐ, ಬೆಂಗಳೂರು
**ಜ್ಞಾನದೇವ್ ನವಲ ತರಾಸೆ** – ಎಆರ್‌ಎಸ್‌ಐ, ಕೆಎಸ್‌ಆರ್‌ಪಿ
**ಮಹದೇವಸ್ವಾಮಿ** – ಹೆಚ್‌ಸಿ, ವಿಧಾನಸೌಧ ಭದ್ರತೆ
**ಮಾರಿಯಾ ಜೋಸೆಫ್ ದಿನೇಶ್ ಕುಮಾರ್** – ಹೆಡ್ ಕಾನ್ಸ್‌ಟೇಬಲ್, ಡಿಆರ್‌ಇ, ಕೆಜಿಎಫ್
**ಚಂದ್ರಶೇಖರ ಚಿಕ್ಕಣ್ಣನವರ್** – ಹೆಚ್‌ಸಿ, ಕೆಎಸ್‌ಆರ್‌ಪಿ
**ಅಬ್ದುಲ್ ಕಮಾಲ್** – ಎಚ್‌ಸಿ, ತರೀಕೆರೆ ಠಾಣೆ
**ನಾಗೇಶ್ ಮಚ್ಚಯ್ಯ** – ಎಚ್‌ಸಿ, ಸಿಐಡಿ
**ಮನೋಹರ್** – ಪಿಸಿ, ಹುಣಸೂರು ಠಾಣೆ

# ಆರ್.ಎಸ್.ಎಸ್ ಭಯೋತ್ಪಾದಕ ಸಂಘಟನೆಯೇ?

## ಆರ್.ಅಶೋಕ್ ಹೇಳಿಕೆಗೆ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನೆ



**ಬೆಂಗಳೂರು, ಆ.14:** ಸಾರ್ವಜನಿಕ ಸ್ಥಳಗಳ ಬಳಕೆಗೆ ಕಾನೂನು, ನಿಯಮಗಳನ್ನು ಪಾಲನೆ ಮಾಡಬೇಕು ಎಂದರೆ ಬಿಜೆಪಿಯವರು ಇದು ನಿರ್ದಿಷ್ಟವಾಗಿ ಆರ್‌ಎಸ್‌ಎಸ್‌ಗೆ ಹೇಳಿರುವುದು ಕುಂಬಳಕಾಯಿ ಕಳ್ಳ ಎಂದರೆ ಹೆಗಲು ಮುಟ್ಟಿ ನೋಡಿಕೊಂಡಂತೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವ್ಯಂಗ್ಯವಾಡಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಆರ್.ಎಸ್.ಎಸ್ ಎದುರು ಹಾಕಿಕೊಂಡರೆ ನೀವು ಮನೆಯಿಂದ ಆಚೆ ಬರಲು ಆಗುವುದಿಲ್ಲ" ಎಂದಿದ್ದಾರೆ. ಈ ಬೆದರಿಕೆ ಮಾತುಗಳ ಹಿಂದಿನ ಅರ್ಥವೇನು? ಆರ್.ಎಸ್.ಎಸ್ ಭಯೋತ್ಪಾದಕ ಸಂಘಟನೆಯೇ? ಪ್ರಶ್ನಿಸಿದವರನ್ನು ಮುಗಿಸುವ ಭೂಗತ ಜಗತ್ತಿನ ಮಾಫೀಯಾದವರೇ ಎಂದು ಖಾರವಾಗಿ ಪ್ರಶ್ನಿಸಿದ್ದಾರೆ.

ಇಂತಹ ಬೆದರಿಕೆ ಹಾಕುತ್ತಿದ್ದಾರೆಂದರೆ ಆರ್.ಎಸ್.ಎಸ್ ಕ್ರಿಮಿನಲ್‌ಗಳ ಸಮೂಹ ಇರಬಹುದೇ ಅಶೋಕ್ ಅವರೇ? ಎಂದು ಪ್ರಶ್ನಿಸಿರುವ ಅವರು, ನಾನು ಮನೆಯಿಂದ ಆಚೆ ಬರುವುದಕ್ಕೆ ಸಂವಿಧಾನದ ರಕ್ಷಣೆ ಇದೆ, ನಾನು ಮುಕ್ತವಾಗಿ ಮಾತನಾಡುವುದಕ್ಕೆ ಬಾಬಾ ಸಾಹೇಬರು ನೀಡಿದ ನೈತಿಕ ಧೈರ್ಯವಿದೆ. ನಿಮ್ಮ ಆರ್.ಎಸ್.ಎಸ್‌ನ ಗೊಡ್ಡು ದೊಣ್ಣೆಗಳಿಗೆ ಹೆದರುವುದಕ್ಕೆ ನನ್ನಲ್ಲಿ ಹರಿಯುತ್ತಿರುವುದು ಸಾವರ್ಕರ್ ರಕ್ತವಲ್ಲ, ನಮ್ಮದು ಅಂಬೇಡ್ಕರ್ ರಕ್ತ. ಅಂಬೇಡ್ಕರ್ ಧೈರ್ಯವನ್ನು ನೀಡಿದ್ದಾರೆಯೇ ಹೊರತು ಭಯವನ್ನಲ್ಲ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

# ಭಾರತೀಯ ಸೇನೆ ಗಸ್ತು ತಡೆದ ಚೀನಾ ಆತಂಕಕಾರಿ ಎಂದ ರಾಹುಲ್ ಗಾಂಧಿ



**ನವದೆಹಲಿ, ಆ.14:** ಅರುಣಾಚಲ ಪ್ರದೇಶದ ಹಲವು ಸ್ಥಳಗಳಲ್ಲಿ ಭಾರತೀಯ ಸೇನೆ ಗಸ್ತು ತಿರುಗುವುದನ್ನು ಚೀನಾ ತಡೆದಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಗಂಭೀರ ಆರೋಪ ಮಾಡಿದ್ದಾರೆ. ಇದೊಂದು ಆತಂಕಕಾರಿ ಬೆಳವಣಿಗೆ ಎಂದಿರುವ ಅವರು, ಈ ವಿಚಾರದಲ್ಲಿ ಕೇಂದ್ರ ಸರ್ಕಾರದ ಮೌನವನ್ನು ತೀವ್ರವಾಗಿ ಪ್ರಶ್ನಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಈ ಬಗ್ಗೆ ಪೋಸ್ಟ್ ಮಾಡಿರುವ ರಾಹುಲ್ ಗಾಂಧಿ, ಚೀನಾ ನಮ್ಮ ಸೇನೆಯನ್ನು ಗಸ್ತು ತಿರುಗದಂತೆ ತಡೆಯುತ್ತಿರುವುದು ಅತ್ಯಂತ ಆತಂಕಕಾರಿ. ಅದಕ್ಕಿಂತಲೂ ಆತಂಕಕಾರಿಯಾದದ್ದು ರಕ್ಷಣಾ ಸಚಿವ ರಾಜನಾಥ್ ಸಿಂಗ್, ಗೃಹ ಸಚಿವ ಅಮಿತ್ ಶಾ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ ಮೌನ. ಚೀನಾವನ್ನು ತಡೆಯುವ ಬದಲು, ಮೋದಿ ಸರ್ಕಾರವು ಈ ಸುದ್ದಿಯನ್ನು ಮುಚ್ಚಿಹಾಕಲು ಮಾಧ್ಯಮಗಳ ಮೇಲೆ ಒತ್ತಡ ಹೇರುತ್ತಿದೆ ಎಂದು ಆರೋಪಿಸಿದ್ದಾರೆ.

ಗಾಲ್ವಾನ್ ಸಂಘರ್ಷದ ಬಳಿಕ ಪ್ರಧಾನಿಯವರು ನೀಡಿದ್ದ ಚೀನಾ ನಮ್ಮ ಒಂದು ಇಂಚು ಭೂಮಿಯನ್ನೂ ವಶಪಡಿಸಿಕೊಂಡಿಲ್ಲ ಎಂಬ ಹೇಳಿಕೆಯನ್ನು ನೆನಪಿಸಿರುವ ರಾಹುಲ್, ಪ್ರಧಾನಿಯವರು ದೇಶದ ಭದ್ರತೆಗಿಂತ ತಮ್ಮ ನಕಲಿ ವರ್ಚಸ್ಸನ್ನು ಉಳಿಸಿಕೊಳ್ಳಲು ಆದ್ಯತೆ ನೀಡುತ್ತಿರುವುದು ದೇಶಕ್ಕೆ ಅತ್ಯಂತ ಅಪಾಯಕಾರಿ ಎಂದು ಟೀಕಿಸಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಕೂಡ ಈ ಕುರಿತು ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಗಾಲ್ವಾನ್ ನಂತರ ಈಗ ಅರುಣಾಚಲ ಪ್ರದೇಶವೇ ಭಾರತದ ಅವಿಭಾಜ್ಯ ಅಂಗವಾಗಿರುವ ಅರುಣಾಚಲ ಪ್ರದೇಶದ ಒಳಗೆ ಚೀನಾ ನುಗ್ಗಲು ಯತ್ನಿಸುತ್ತಿರುವ ವರದಿಗಳು ಕಳವಳಕಾರಿಯಾಗಿವೆ. ಸಾಂಪ್ರದಾಯಿಕ ಗಸ್ತು ಕೇಂದ್ರಗಳು ಹಾಗೂ ಹುಲ್ಲುಗಾವಲು ಪ್ರದೇಶಗಳಿಗೆ ಭಾರತೀಯರಿಗೆ ಪ್ರವೇಶವಿದೆಯೇ ಎಂಬುದಕ್ಕೆ ಮೋದಿ ಸರ್ಕಾರ ತಕ್ಷಣವೇ ಉತ್ತರಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

**ದುರುದ್ದೇಶಪೂರಿತ ಆರೋಪ:** ಈ ಬೆಳವಣಿಗೆಗಳ ನಡುವೆ, ಅರುಣಾಚಲ ಪ್ರದೇಶದಲ್ಲಿ ಚೀನಾದಿಂದ ಯಾವುದೇ ಒತ್ತುವರಿಯಾಗಿಲ್ಲ ಎಂದು ಅಧಿಕೃತ ಮೂಲಗಳು ಸ್ಪಷ್ಟಪಡಿಸಿವೆ. ಗಡಿರೇಖೆ ನಿಖರವಾಗಿ ಗುರುತಿಸಲ್ಪಡದ ಕಾರಣ, ಗಸ್ತು ತಿರುಗುವಾಗ ಕೆಲವೊಮ್ಮೆ ಎರಡೂ ಕಡೆಯ ಸೇನೆಗಳು ಮುಖಾಮುಖಿಯಾಗುತ್ತವೆ. ಇದನ್ನು ಚಾಲ್ತಿಯಲ್ಲಿರುವ ಶಿಷ್ಟಾಚಾರಗಳ ಮೂಲಕ ಬಗೆಹರಿಸಿಕೊಳ್ಳಲಾಗುತ್ತದೆ. ಗಡಿಯಲ್ಲಿ ಚೀನಾದ ಚಟುವಟಿಕೆಗಳನ್ನು ಕಣ್ಗಾವಲಿಡಲು ಮತ್ತು ತಡೆಯಲು ಸೇನೆ ಹಾಗೂ ಐಟಿಬಿಪಿ ಸನ್ನದ್ಧವಾಗಿವೆ. ಯಾವುದೇ ನಿರ್ದಿಷ್ಟ ಪುರಾವೆಗಳಿಲ್ಲದೆ ಇಂತಹ ಆರೋಪ ಮಾಡಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

# ಮಹಿಳೆಗೆ ಸಚಿವ ಸ್ಥಾನ ನೀಡದೆ ಅವಮಾನ: ಶಶಿಕಲಾ ಜೊಲ್ಲೆ



**ಬೆಂಗಳೂರು, ಆ.14:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಸ್ಥಾನ ನೀಡದೆ ಈ ಸರ್ಕಾರ ಮಹಿಳೆಯರಿಗೆ ಅವಮಾನ ಮಾಡಿದೆ ಎಂದು ಶಾಸಕಿ ಶಶಿಕಲಾ ಜೊಲ್ಲೆ ಆರೋಪಿಸಿದರು.

ವಿಧಾನಸೌಧದ ಭುವನೇಶ್ವರಿ ಪ್ರತಿಮೆ ಬಳಿ ಇಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆಯ ವಿಪಕ್ಷ ನಾಯಕರಾದ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆಯಲ್ಲಿ ಶಶಿಕಲಾ ಜೊಲ್ಲೆ ಮಾತನಾಡಿ, ಸಂಪುಟ ರಚನೆಯಾಗಿ ಇಷ್ಟು ದಿನವಾದರೂ ಮಹಿಳೆಯರಿಗೆ ಅವಕಾಶ ನೀಡಿಲ್ಲ ಎಂದು ದೂರಿದರು. ಈ ಸರ್ಕಾರಕ್ಕೆ ಮಹಿಳೆಯರ ಓಟು ಬೇಕು ಆದರೆ ಸಂಪುಟದಲ್ಲಿ ಸ್ಥಾನ ಬೇಡ. ಸರ್ಕಾರದ ಇಂತಹ ಧೋರಣೆಯನ್ನು ಖಂಡಿಸುತ್ತೇವೆ. ಕಾಂಗ್ರೆಸ್ ನ ಈ ಮಹಿಳಾ ವಿರೋಧಿ ಧೋರಣೆಗೆ ತಕ್ಕ ಉತ್ತರವನ್ನು ಮುಂದೆ ಕಲಿಸುತ್ತೇವೆ ಎಂದರು. ಡಿ. ಕೆ.ಶಿವಕುಮಾರ್ ಅವರ ಸರ್ಕಾರದ ಸಚಿವರ ಪಟ್ಟಿಯಲ್ಲಿ ಮೊದಲು ಮಹಿಳೆಯೊಬ್ಬರ ಹೆಸರು ಇತ್ತು. ಆದರೆ ಅದನ್ನು ನಂತರ ತೆಗೆದು ಹಾಕಿದರು. ಇದರಿಂದ ರಾಜ್ಯದ ಎಲ್ಲ ಮಹಿಳೆಯರಿಗೆ ಅವಮಾನ ಆಗಿದೆ ಎಂದು ಟೀಕಿಸಿದರು.

ಸಂಸತ್ತಿನ ಮಹಿಳಾ ಮೀಸಲು ಮಸೂದೆಗೆ ಕಾಂಗ್ರೆಸ್ ವಿರೋಧ ಮಾಡಿತು. ಮಹಿಳೆಯರಿಗೆ ಶೇ 33 ರಷ್ಟು ಮೀಸಲಾತಿ ನೀಡುವ ನರೇಂದ್ರ ಮೋದಿ ಜೀ ಅವರ ಸರ್ಕಾರದ ಮಹತ್ವದ ಕ್ರಮಕ್ಕೆ ಕಾಂಗ್ರೆಸ್ ಬೆಂಬಲ ನೀಡಲಿಲ್ಲ. ಕಾಂಗ್ರೆಸ್ ಮಹಿಳೆಯರಿಗೆ ಯಾವ ರೀತಿಯ ಗೌರವ ನೀಡುತ್ತಾರೆ ಎಂಬುದು ಇದರಿಂದ ತಿಳಿಯುತ್ತದೆ ಎಂದರು. ಮಹಿಳೆಯರು ಇಂದು ಸುಶಿಕ್ಷಿತರಾಗಿದ್ದಾರೆ, ಸಾಕಷ್ಟು ತಿಳಿವಳಿಕೆ ಪಡೆದುಕೊಂಡಿದ್ದಾರೆ. ಆದರೆ ಅವರಿಗೆ ಸರಿಯಾದ ಸ್ಥಾನ ಕೊಡಲು ಕಾಂಗ್ರೆಸ್ ಮುಂದಾಗಿಲ್ಲ ಎಂದರು.

# ಮಹಿಳೆಯರಿಗೆ ಪ್ರಾತಿನಿಧ್ಯ ನಿರಾಕರಣೆ, ಆರ್‌ಎಸ್‌ಎಸ್ ವಿರುದ್ಧ ಹಿಂಬಾಗಿಲಿನ ಷಡ್ಯಂತ್ರ: ಬಿ.ವೈ. ವಿಜಯೇಂದ್ರ ವಾಗ್ದಾಳಿ



**ಬೆಂಗಳೂರು, ಆ.14:** ತಾಯಿ ಭುವನೇಶ್ವರಿ ಪ್ರತಿಮೆ ಮುಂದೆ ಭಾರತೀಯ ಜನತಾ ಪಕ್ಷದ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ರಾಜ್ಯ ಮತ್ತು ದೇಶದ ಜನಸಂಖ್ಯೆಯಲ್ಲಿ ಮಹಿಳೆಯರು ಶೇಕಡ 50ರಷ್ಟು ಇದ್ದಾರೆ. ಮಹಿಳೆಯರಿಗೆ ಸಮಾನ ಅವಕಾಶ ಹಾಗೂ ಸೂಕ್ತ ಪ್ರಾತಿನಿಧ್ಯ ದೊರೆಯಬೇಕು. ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮಹಿಳೆಯರಿಗೆ 33ರಷ್ಟು ಮೀಸಲಾತಿ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಂಡಾಗ ಕಾಂಗ್ರೆಸ್ ಹಾಗೂ ರಾಹುಲ್ ಗಾಂಧಿ ಅವರು ಅದನ್ನು ವಿರೋಧಿಸುತ್ತಾರೆ. ಆದರೆ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರವೇ ಮಹಿಳೆಯರಿಗೆ ಪ್ರಾತಿನಿಧ್ಯ ನಿರಾಕರಿಸುವ ಮೂಲಕ ಮಹಿಳಾ ಸಮುದಾಯಕ್ಕೆ ಅಪಮಾನ ಮಾಡುತ್ತಿದೆ ಎಂದು ವಿಜಯೇಂದ್ರ ಆರೋಪಿಸಿದರು.

ಮಹಿಳಾ ಸಚಿವರಿಲ್ಲದ ಸಂದರ್ಭದಲ್ಲಿ ವಿಧಾನಮಂಡಲ ಅಧಿವೇಶನ ನಡೆಯುತ್ತಿದೆ ಎಂಬುದು ಅತ್ಯಂತ ವಿಷಾದನೀಯ. ಮಹಿಳೆಯರಿಗೆ ಪ್ರಾತಿನಿಧ್ಯ ನೀಡದೆ ರಾಜ್ಯದ ತಾಯಂದಿರಿಗೆ ಅಪಮಾನ ಮಾಡಿರುವ ಕಾಂಗ್ರೆಸ್ ಸರ್ಕಾರದ ಕ್ರಮವನ್ನು ಭಾರತೀಯ ಜನತಾ ಪಕ್ಷ ತೀವ್ರವಾಗಿ ಖಂಡಿಸುತ್ತದೆ ಎಂದು ತಿಳಿಸಿದರು.

ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ಸಾರ್ವಜನಿಕ ಸಭೆಗಳಿಗೆ ಅನುಮತಿ ಕಡ್ಡಾಯಗೊಳಿಸುವಂತಹ ನಿರ್ಧಾರಗಳನ್ನು ಸರ್ಕಾರ ಕೈಗೊಳ್ಳುತ್ತಿದೆ ಎಂಬ ಆರೋಪಗಳ ಕುರಿತು ಪ್ರತಿಕ್ರಿಯಿಸಿದ ವಿಜಯೇಂದ್ರ ಅವರು, ಮುಖ್ಯಮಂತ್ರಿ ಹಾಗೂ ಗೃಹ ಸಚಿವರಿಗೆ ನೇರ ಸವಾಲು ಹಾಕಿದರು.

ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ನೇರವಾಗಿ ಆರ್‌ಎಸ್‌ಎಸ್ ಹೆಸರನ್ನು ಉಲ್ಲೇಖಿಸದಿದ್ದರೂ, ಸರ್ಕಾರದ ಕ್ರಮಗಳ ಉದ್ದೇಶ ಸ್ಪಷ್ಟವಾಗಿದೆ. ಸದನದಲ್ಲಿ ಆರ್‌ಎಸ್‌ಎಸ್‌ನ ಪ್ರಾರ್ಥನೆಯ ಉಲ್ಲೇಖ ಮಾಡಿದ್ದ ಮುಖ್ಯಮಂತ್ರಿಗಳ ನಿಲುವು ಇದೀಗ ಬಯಲಾಗಿದೆ ಎಂದು ಅವರು ಟೀಕಿಸಿದರು.

ಮುಖ್ಯಮಂತ್ರಿಗಳೇ, ನಿಮಗೆ ಧೈರ್ಯವಿದ್ದರೆ ಆರ್‌ಎಸ್‌ಎಸ್ ಅನ್ನು ನಿಷೇಧಿಸುವ ಪ್ರಯತ್ನ ಮಾಡಿ ನೋಡೋಣ? ಎಂದು ವಿಜಯೇಂದ್ರ ಸವಾಲು ಹಾಕಿದರು.

> **ಸಂಘಕ್ಕೆ ಕಡಿವಾಣ ಹಾಕುವ ಯಾವುದೇ ಯತ್ನವನ್ನು ಸಹಿಸುವುದಿಲ್ಲ**
>
> ಆರ್‌ಎಸ್‌ಎಸ್ ಶತಮಾನ ಪೂರೈಸಿರುವ ಸಂಘಟನೆ. ದೇಶಭಕ್ತಿ, ರಾಷ್ಟ್ರಾಭಿಮಾನ ಹಾಗೂ ಸೇವಾ ಮನೋಭಾವ ಬೆಳೆಸುವ ಸಂಘಟನೆಯಾಗಿ ಅದು ಕಾರ್ಯನಿರ್ವಹಿಸುತ್ತಿದೆ. ದೇಶದ ಪರವಾಗಿ ಧ್ವನಿ ಎತ್ತುವ ಶಕ್ತಿಗಳಲ್ಲಿ ಆರ್‌ಎಸ್‌ಎಸ್ ಪ್ರಮುಖವಾಗಿದೆ. ಆರ್‌ಎಸ್‌ಎಸ್‌ನಿಂದ ಯಾವ ದೇಶವಿರೋಧಿ ಚಟುವಟಿಕೆ ನಡೆದಿದೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು. ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ತಮ್ಮ ಇಲಾಖೆಯ ಜವಾಬ್ದಾರಿಗಳ ಬಗ್ಗೆ ಗಮನಹರಿಸುವ ಬದಲು ಪದೇಪದೇ ಆರ್‌ಎಸ್‌ಎಸ್ ಅನ್ನು ಟೀಕಿಸುವ ಕೆಲಸ ಮಾಡುತ್ತಿದ್ದಾರೆ. ಆರ್‌ಎಸ್‌ಎಸ್ ವಿರುದ್ಧವೇ ಇಷ್ಟೊಂದು ಆಸಕ್ತಿ ಇದ್ದರೆ ಗೃಹ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ, ಆರ್‌ಎಸ್‌ಎಸ್ ವಿರೋಧಿ ಇಲಾಖೆಯನ್ನು ಪಡೆದುಕೊಳ್ಳಲಿ ಎಂದು ವಿಜಯೇಂದ್ರ ವ್ಯಂಗ್ಯವಾಡಿದರು. ಹಿಂಬಾಗಿಲಿನಿಂದ ಆರ್‌ಎಸ್‌ಎಸ್‌ನ ಚಟುವಟಿಕೆಗಳಿಗೆ ಕಡಿವಾಣ ಹಾಕುವ ಯಾವುದೇ ಪ್ರಯತ್ನವನ್ನು ಬಿಜೆಪಿ ಸಹಿಸುವುದಿಲ್ಲ. ಸರ್ಕಾರ ತನ್ನ ನಿಲುವನ್ನು ಮರುಪರಿಶೀಲಿಸಬೇಕು ಎಂದು ಎಚ್ಚರಿಸಿದರು.

# 2ನೇ ದಿನದ ಕಲಾಪಕ್ಕೆ ಮಾಜಿ ಸಿಎಂ ಸಿದ್ದರಾಮಯ್ಯ ಹಾಜರು

**ಬೆಂಗಳೂರು, ಆ.14:** ವಿಧಾನಸಭೆ ಕಲಾಪದ ಮೊದಲ ದಿನವಾದ ಗುರುವಾರ ಸದನಕ್ಕೆ ಗೈರುಹಾಜರಾಗಿದ್ದ ಮಾಜಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಎರಡನೇ ದಿನದ ಕಲಾಪದಲ್ಲಿ ಶುಕ್ರವಾರ ಭಾಗಿಯಾದರು. ಸಿದ್ಧರಾಮಯ್ಯ ಅವರಿಗೆ ಆಡಳಿತ ಪಕ್ಷದ ಸದಸ್ಯರು ಕುಳಿತುಕೊಳ್ಳುವ ಆಸನಗಳ ಕೊನೆಯ ಸಾಲಿನಲ್ಲಿ ಮುಖ್ಯ ಸಚೇತಕರ ಪಕ್ಕದ ಆಸನ ಒದಗಿಸಲಾಗಿದೆ.

ಮಾಜಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಶುಕ್ರವಾರ ಸದನಕ್ಕೆ ಹಾಜರಾದ ಬಳಿಕ ಪ್ರತಿಯೊಬ್ಬ ಸಚಿವರು, ಶಾಸಕರು ಅವರ ಬಳಿಗೆ ತೆರಳಿ ಅವರ ಜತೆ ಉಭಯಕುಶಲೋಪರಿ ವಿಚಾರಿಸಿದರು. ಕೆಲ ಶಾಸಕರು ಸಿದ್ಧರಾಮಯ್ಯ ರವರ ಕಾಲಿಗೆ ನಮಸ್ಕರಿಸಿ ಆಶೀರ್ವಾದ ಪಡೆದರು.

# 2047ರ ವಿಕಸಿತ ಭಾರತ ನಿರ್ಮಾಣಕ್ಕೆ ಸಂಕಲ್ಪ ಸಂಸದ ಬಸವರಾಜ ಬೊಮ್ಮಾಯಿ ಕರೆ



## ಕಾಂಗ್ರೆಸ್‌ನಲ್ಲಿ ದೊಡ್ಡ ಮಟ್ಟದ ಆಂತರಿಕ ಬೆಳವಣಿಗೆಗಳು ನಡೆಯುತ್ತಿವೆ: ಬಸವರಾಜ ಬೊಮ್ಮಾಯಿ

**ಹಾವೇರಿ, ಆ,14:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕಲ್ಪನೆಯ 'ವಿಕಸಿತ ಭಾರತ 2047ರ ವೇಳೆಗೆ ಭಾರತವನ್ನು ಸಂಪೂರ್ಣ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಪ್ರತಿಯೊಬ್ಬ ನಾಗರಿಕನೂ ಸಮರ್ಪಣಾ ಭಾವದಿಂದ ಶ್ರಮಿಸಬೇಕು. ಈ ಸುದೀರ್ಘ ಪ್ರಗತಿಯ ಪಯಣಕ್ಕೆ ಎಲ್ಲರೂ ಸಿದ್ಧರಾಗಿ ಪ್ರತಿಜ್ಞೆ ಸ್ವೀಕರಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಕರೆ ನೀಡಿದರು.

ಹಾವೇರಿಯಲ್ಲಿ ಸ್ವಾತಂತ್ರ್ಯೋತ್ಸವ ಹಿನ್ನೆಲೆಯಲ್ಲಿ ನಡೆದ ತಿರಂಗಾ ಯಾತ್ರೆಯಲ್ಲಿ ಭಾಗವಹಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಕಳೆದ 78–80 ವರ್ಷಗಳ ಸುದೀರ್ಘ ಅವಧಿಯಲ್ಲಿ ದೇಶವು ಸಾಗಿ ಬಂದಿರುವ ದಾರಿಯ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳುವ ಅಗತ್ಯವಿದೆ. ಮುಂದಿನ ಭವಿಷ್ಯವನ್ನು ಶಕ್ತಿಯುತವಾಗಿ ನಿರ್ಮಾಣ ಮಾಡಲು ಇದು ಸೂಕ್ತ ಸಮಯ" ಎಂದು ಬೊಮ್ಮಾಯಿ ತಿಳಿಸಿದರು. ಆರ್‌ಎಸ್‌ಎಸ್‌ಗೆ ರಾಜ್ಯ ಸರ್ಕಾರದಿಂದ ಅಂಕುಶ ಹಾಕಿರುವ ಕುರಿತು ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು, ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿದ ಸಂವಿಧಾನದಲ್ಲಿ ಪ್ರತಿಯೊಬ್ಬರಿಗೂ ನಾಗರಿಕ ಹಕ್ಕುಗಳು, ವೈಯಕ್ತಿಕ ಹಕ್ಕುಗಳು ಹಾಗೂ ಮೂಲಭೂತ ಹಕ್ಕುಗಳನ್ನು ನೀಡಲಾಗಿದೆ. ಈ ಹಕ್ಕುಗಳ ಉಲ್ಲಂಘನೆಯಾಗದಂತೆ ಕಾನೂನು ಚೌಕಟ್ಟಿನಲ್ಲಿ ಪ್ರತಿಯೊಬ್ಬರೂ ಕಾರ್ಯ ನಿರ್ವಹಿಸಬೇಕು" ಎಂದರು.

**ಸಂಸ್ಕೃತಿ ಮತ್ತು ಐಕ್ಯತೆ:**

"ನಮ್ಮ ದೇಶಕ್ಕೆ ಭವ್ಯ ಪರಂಪರೆ, ಸಂಸ್ಕೃತಿ ಹಾಗೂ ವರ್ಷವಿಡೀ ಆಚರಿಸುವ ಹಬ್ಬ–ಹರಿದಿನಗಳ ಸುದೀರ್ಘ ಇತಿಹಾಸವಿದೆ.

ಇಂತಹ ಆಚರಣೆಗಳು ಜನರನ್ನು ಒಂದಾಗಿ ಜೋಡಿಸುವ ಕೆಲಸ ಮಾಡಬೇಕು" ಇಂಥಹ ಪ್ರಕ್ರಿಯೆಗೆ ಅಡಚಣೆ ಮಾಡುವ ಕಾನೂನು ತರಲು ಹೊರಟಿರುವ ಇವರು ಸಂವಿಧಾನ ವಿರೋಧಿಗಳು. ಇಂಥಹ ಕಾನೂನು ತರಲು ಹೋಗಿ ಹಿಂದೆ ನ್ಯಾಯಲಾಯಗಳಲ್ಲಿ ಸೋಲು ಕಂಡಿದ್ದಾರೆ. ಇದರ ಹಣೆ ಬರಹವೂ ಅಷ್ಟೇ, ಕಾನೂನಿನ ಹೋರಾಟದಲ್ಲಿ ನಿಲ್ಲುವುದಿಲ್ಲ ಎಂದು ಅವರು ಪ್ರತಿಪಾದಿಸಿದರು.

# ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ದರ ನಿಯಂತ್ರಣ ಸಮಿತಿಯ ಭೇಟಿ



ಬೆಂಗಳೂರು, ಆ.14: ದರ ನಿಯಂತ್ರಣ ಸಮಿತಿಯ ಅಧ್ಯಕ್ಷ ಅತುಲ್ ಕುಮಾರ್ ತಿವಾರಿ (ನಿವೃತ್ತ ಐಎಎಸ್ ಅಧಿಕಾರಿ) ಅವರು, ಸಮಿತಿಯ ಸದಸ್ಯರಾದ ಐಐಎಸ್‌ಸಿ (IISC) ಪ್ರಾಧ್ಯಾಪಕ ಡಾ. ಅಬ್ದುಲ್ ಪಿಂಜಾರಿ ಮತ್ತು ಶ್ರೀ ದ್ವಾರಕನಾಥ್ ಬಾಬು ಅವರೊಂದಿಗೆ KSRTC ಮತ್ತು BMTCಗೆ ಭೇಟಿ ನೀಡಿದರು.

ಈ ಭೇಟಿಯ ಉದ್ದೇಶವು ಎರಡೂ ನಿಗಮಗಳ ಕಾರ್ಯಾಚರಣೆಯ ಮಾನದಂಡಗಳನ್ನು ಪರಿಶೀಲಿಸುವುದು ಮತ್ತು ಸಂಸ್ಥೆಗಳ ಬೆಳವಣಿಗೆಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಚರ್ಚಿಸುವುದಾಗಿತ್ತು ಸಭೆಯಲ್ಲಿ ಸಮಿತಿಯು ಈ ಕೆಳಗಿನ ವಿಷಯಗಳ ಕುರಿತು ಚರ್ಚಿಸಿತು: ಸದರಿ ಸಮಿತಿಯು ಪ್ರಾಥಮಿಕ ಮಾಹಿತಿಯನ್ನು ಪಡೆಯುವ ಉದ್ದೇಶದಿಂದ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ನಡುವಿನ ಸಮನ್ವಯ; ಮಾರ್ಗಗಳ ತರ್ಕಬದ್ಧಗೊಳಿಸುವಿಕೆ ಎಲೆಕ್ಟ್ರಿಕ್ ವಾಹನಗಳ ಕಾರ್ಯಾಚರಣೆಯ ಮಾನದಂಡಗಳು; ವಾಣಿಜ್ಯ ಚಟುವಟಿಕೆಗಳು; ಡೀಸೆಲ್ ಬಸ್‌ಗಳಿಗೆ ಹೋಲಿಸಿದರೆ ಎಲೆಕ್ಟ್ರಿಕ್ ಬಸ್‌ಗಳ ಜೀವಿತಾವಧಿ ವೆಚ್ಚ 'ಬ್ರೇಕ್–ಈವನ್' (ಲಾಭ–ನಷ್ಟ ಸಮಸ್ಥಿತಿ) ಸಾಧಿಸುವಲ್ಲಿನ ಕೊರತೆಗೆ ಕಾರಣಗಳು; ನಿಗಮಗಳ ವೆಚ್ಚದ ಮಾನದಂಡಗಳು; ಹಾಗೂ ವಿವಿಧ ಸಹಾಯಧನ ಯೋಜನೆಗಳು ಮತ್ತು ಸರ್ಕಾರದ ಅನುದಾನ ಮುಂತಾದ ವಿಷಯಗಳ ಕುರಿತು ಚರ್ಚಿಸಲಾಯಿತು.

ಜೊತೆಗೆ, ನಗರ ಕಾರ್ಯಾಚರಣೆಗಾಗಿ ವಿದ್ಯುತ್ ಚಾಲಿತ ವಾಹನಗಳು ಮತ್ತು ಚಾರ್ಜಿಂಗ್ ಮೂಲಸೌಕರ್ಯವನ್ನು ಹೊಂದಿರುವ ಬಿಎಂಟಿಸಿ ಡಿಪೋ–3 ಹಾಗೂ ಅಂತಾರಾಜ್ಯ ಮತ್ತು ರಾಜ್ಯದೊಳಗಿನ ಸಂಚಾರಕ್ಕಾಗಿ ಪ್ರೀಮಿಯಂ ಸೇವಾ ಬಸ್‌ಗಳನ್ನು ಹೊಂದಿರುವ ಕೆಎಸ್‌ಆರ್‌ಟಿಸಿ ಡಿಪೋ–4ಕ್ಕೆ ಭೇಟಿ ನೀಡಲಾಯಿತು.

ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ಡಿಪೋಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ, ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕರು ಶಿವಕುಮಾರ್ ಕೆ.ಬಿ. ಐಎಎಸ್, ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕರು ರಘುನಂದನ್ ಮೂರ್ತಿ ಐಎಎಸ್,ಬಿಎಂಟಿಸಿ ನಿರ್ದೇಶಕರು (ಭದ್ರತೆ ಮತ್ತು ಜಾಗೃತ ದಳ) ಶ್ರೀ ಅಬ್ದುಲ್ ಅಹದ್ ಐಪಿಎಸ್, ಕೆಎಸ್‌ಆರ್‌ಟಿಸಿ ನಿರ್ದೇಶಕರು (ಸಿಬ್ಬಂದಿ ಮತ್ತು ಜಾಗೃತ ದಳ) ಗಾಯಿತ್ರಿ ಕೆ.ಎಂ.ಐಎಎಸ್ ಹಾಗೂ ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿಯ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು1

# ಆ. 31ರವರೆಗೆ ಬೆಳೆ ವಿಮೆ ನೋಂದಣಿ ದಿನಾಂಕ ವಿಸ್ತರಿಸಲು ಕೇಂದ್ರಕ್ಕೆ ಶಿಫಾರಸು: ಮುಖ್ಯ ಕಾರ್ಯದರ್ಶಿಗೆ ಕೃಷಿ ಸಚಿವ ನರೇಂದ್ರಸ್ವಾಮಿ ಸೂಚನೆ



**ಫಸಲ್ ಬಿಮಾ ಬೆಳೆ ವಿಮೆ ಯೋಜನೆಯ ದಿನಾಂಕ ವಿಸ್ತರಣೆಗೆ ಪತ್ರ ಬರೆದು ಮನವಿ ಮಾಡಿದ್ದ ಶಾಸಕ ದಿನೇಶ್ ಗೂಳಿಗೌಡ**



ಬೆಂಗಳೂರು, ಆ.14: ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆಯಿಂದಾಗಿ ಬಿತ್ತನೆ ವಿಳಂಬವಾಗಿದ್ದು, ರೈತರಿಗೆ ಅನುಕೂಲವಾಗುವಂತೆ 'ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ' ಯೋಜನೆಯಡಿ ಬೆಳೆ ವಿಮೆ ನೋಂದಣಿ ದಿನಾಂಕವನ್ನು ಆ.31ರವರೆಗೆ ವಿಸ್ತರಿಸುವಂತೆ ವಿಧಾನ ಪರಿಷತ್ ಶಾಸಕರು ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ದಿನೇಶ್ ಗೂಳಿಗೌಡ ಅವರು ಕೃಷಿ ಸಚಿವರಿಗೆ ಮನವಿ ಸಲ್ಲಿಸಿದ್ದಾರೆ. ಈ ಮನವಿಗೆ ತಕ್ಷಣವೇ ಸಕಾರಾತ್ಮಕವಾಗಿ ಸ್ಪಂದಿಸಿರುವ ಕೃಷಿ ಸಚಿವ ಪಿ.ಎಂ. ನರೇಂದ್ರಸ್ವಾಮಿ ಅವರು, ವಿಮಾ ನೋಂದಣಿ ಗಡುವನ್ನು ವಿಸ್ತರಿಸುವಂತೆ ಕೇಂದ್ರ ಸರ್ಕಾರಕ್ಕೆ ಅಧಿಕೃತ ಪ್ರಸ್ತಾವನೆ ಸಲ್ಲಿಸಲು ಕೃಷಿ ಇಲಾಖೆಯ ಮುಖ್ಯ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದ್ದಾರೆ.

ಮನವಿಯ ಪ್ರಮುಖ ಅಂಶಗಳು:

ಮಳೆ ಕೊರತೆ ಹಾಗೂ ಬಿತ್ತನೆ ಹಿನ್ನಡೆ: ಮಂಡ್ಯ ಸೇರಿದಂತೆ ರಾಜ್ಯಾದ್ಯಂತ ವಾಡಿಕೆಯಂತೆ ಮಳೆಯಾಗದ ಪರಿಣಾಮ ಆಗಸ್ಟ್ 2ನೇ ವಾರ ಕಳೆದರೂ ಪೂರ್ಣ ಪ್ರಮಾಣದಲ್ಲಿ ಬಿತ್ತನೆ ಕಾರ್ಯ ಆರಂಭವಾಗಿಲ್ಲ.

ದಿನಾಂಕ ವಿಸ್ತರಣೆಯ ಅನಿವಾರ್ಯತೆ: ನಿಯಮಾನುಸಾರ ವಿಮೆ ನೋಂದಣಿಗೆ ಆಗಸ್ಟ್ 14 ಕೊನೆಯ ದಿನವಾಗಿದೆ. ಆದರೆ ಆಗಸ್ಟ್ ಅಂತ್ಯದವರೆಗೂ ಮಧ್ಯಮಾವಧಿ ಹಾಗೂ ಅಲ್ಪಾವಧಿ ತಳಿಗಳ ಬಿತ್ತನೆಗೆ ಅವಕಾಶವಿರುವುದರಿಂದ ಗಡುವು ವಿಸ್ತರಿಸುವುದು ಅತ್ಯಗತ್ಯ.

ಪ್ರಮುಖ ಬೆಳೆಗಳಿಗೆ ರಕ್ಷಣೆ: ಗ್ರಾಮ ಪಂಚಾಯಿತಿ ಮತ್ತು ಹೋಬಳಿ ಮಟ್ಟದ ಅಧಿಸೂಚಿತ ಬೆಳೆಗಳಾದ ನೀರಾವರಿ ಹಾಗೂ ಮಳೆಯಾಶ್ರಿತ ಭತ್ತ, ರಾಗಿ, ಮುಸುಕಿನ ಜೋಳ ಮತ್ತು ಹುರುಳಿ ಬೆಳೆಗಾರರಿಗೆ ವಿಮಾ ರಕ್ಷಣೆ ದೊರಕಿಸಲು ದಿನಾಂಕವನ್ನು 31.08.2026ರವರೆಗೆ ವಿಸ್ತರಿಸಬೇಕು ಎಂದು ದಿನೇಶ್ ಗೂಳಿಗೌಡ ಪತ್ರದಲ್ಲಿ ಒತ್ತಾಯಿಸಿದ್ದರು.

ತ್ವರಿತ ಕ್ರಮಕ್ಕೆ ಕೃಷಿ ಸಚಿವರ ಸೂಚನೆ:

ರೈತರು ವಿಮಾ ಸೌಲಭ್ಯದಿಂದ ವಂಚಿತರಾಗಬಾರದು ಎಂಬ ಕಾಳಜಿಯಿಂದ, ರಾಜ್ಯ ಸರ್ಕಾರದ ವತಿಯಿಂದ ಕೇಂದ್ರ ಕೃಷಿ ಸಚಿವಾಲಯಕ್ಕೆ ತಕ್ಷಣವೇ ಪ್ರಸ್ತಾವನೆ ರವಾನಿಸುವಂತೆ ಸಚಿವರು ಅಧಿಕಾರಿಗಳಿಗೆ ಆದೇಶಿಸಿದ್ದಾರೆ. ಈ ಮೂಲಕ ರೈತರ ಸಂಕಷ್ಟಕ್ಕೆ ನಮ್ಮ ಸರ್ಕಾರ ಸದಾ ಧಾವಿಸುತ್ತದೆ ಎಂಬುದನ್ನು ತೋರಿಸಿಕೊಟ್ಟಿದ್ದಾರೆ ಎಂದು ಶಾಸಕರಾದ ದಿನೇಶ್ ಗೂಳಿಗೌಡ ಅವರು ಹೇಳಿದ್ದಾರೆ.

# ಕೆಎಚ್‌ಬಿ ಅಧ್ಯಕ್ಷರಾಗಿ ಶ್ರೀನಿವಾಸ ಮಾನೆ ನೇಮಕಕ್ಕೆ ಸಿಎಂ ಪತ್ರ

**ಬೆಂಗಳೂರು, ಆ.14:** ಹಾನಗಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀನಿವಾಸ ಮಾನೆ ಅವರನ್ನು ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷರನ್ನಾಗಿ ನೇಮಿಸುವಂತೆ ಆದೇಶಿಸಲಾಗಿದೆ. ಈ ಸಂಬಂಧ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪತ್ರ ಬರೆದಿದ್ದಾರೆ.ಸದ್ಯ ಸಚಿವರಾಗಿ ಅಧಿಕಾರ ವಹಿಸಿಕೊಂಡಿರುವ ಅರಸೀಕರೆ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಮಂಡಳಿಯ ಅಧ್ಯಕ್ಷರಾಗಿದ್ದರು. ಸಚಿವ ಸ್ಥಾನದ ಆಕಾಂಕ್ಷಿಯಾಗಿದ್ದ ಮಾನೆ ಅವರಿಗೆ ಮಂಡಳಿಯ ಹೊಣೆ ನೀಡಲು ಸಿಎಂ ಮುಂದಾಗಿದ್ದಾರೆ.



ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಅವರು ಶುಕ್ರವಾರ ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ಅಮೃತ್ ಉದ್ಯಾನ-ಬೇಸಿಗೆ ವಾರ್ಷಿಕ ಪ್ರದರ್ಶನದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿದ್ದರು.

# ವಿದ್ಯಾರ್ಥಿಗಳ ಪ್ರತಿಭಟನಾ ಹಕ್ಕಿನಲ್ಲಿ ಬಾರ್ ಕೌನ್ಸಿಲ್ ಹಸ್ತಕ್ಷೇಪ ಬೇಡ: ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್

**ನವದೆಹಲಿ, ಆ.14:** ಹೈದರಾಬಾದ್‌ನ ಎನ್‌ಎಎಲ್‌ಎಸ್‌ಎಆರ್ ವಿಶ್ವವಿದ್ಯಾಲಯದ 2026ನೇ ಬ್ಯಾಚ್ ಕಾನೂನು ವಿದ್ಯಾರ್ಥಿಗಳನ್ನು ನೋಂದಾಯಿಸದಂತೆ ರಾಜ್ಯ ಬಾರ್ ಕೌನ್ಸಿಲ್‌ಗಳಿಗೆ ಸೂಚಿಸಿದ್ದ ಬಾರ್ ಕೌನ್ಸಿಲ್ ಆಫ್ ಇಂಡಿಯಾ (ಬಿಸಿಐ) ಕ್ರಮಕ್ಕೆ ಭಾರತದ ಮುಖ್ಯ ನ್ಯಾ.ಸೂರ್ಯಕಾಂತ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ವಿಶ್ವವಿದ್ಯಾಲಯದ ಘಟಿಕೋತ್ಸವಕ್ಕೆ ಸಿಜೆಐ ಅವರನ್ನು ಆಹ್ವಾನಿಸಿದ್ದನ್ನು ವಿದ್ಯಾರ್ಥಿಗಳು ವಿರೋಧಿಸಿ ಪ್ರತಿಭಟನೆ ನಡೆಸಿದ್ದ ಹಿನ್ನೆಲೆಯಲ್ಲಿ ಬಿಸಿಐ ಈ ನಿರ್ದೇಶನ ನೀಡಿತ್ತು. ಶುಕ್ರವಾರ ಪ್ರಕರಣದ ವಿಚಾರಣೆ ವೇಳೆ ಸಿಜೆಐ, ವಿದ್ಯಾರ್ಥಿ ಗಳಿಗೆ ಪ್ರತಿಭಟಿಸುವ ಹಕ್ಕಿದೆ. ವಿದ್ಯಾರ್ಥಿಗಳು ನನಗೆ ಪತ್ರ ಬರೆದಿದ್ದಾರೆ. ಇದು ವಿದ್ಯಾರ್ಥಿಗಳು ಮತ್ತು ನನ್ನ ನಡುವಿನ ಸಂವಾದ. ಇದರಲ್ಲಿ ಬಿಸಿಐ ಮಧ್ಯಪ್ರವೇಶಿಸುವ ಅಗತ್ಯವೇ ಇರಲಿಲ್ಲ ಎಂದು ಮೌಖಿಕವಾಗಿ ಹೇಳಿದರು. ಬಿಸಿಐ ಕೈಗೊಂಡ ಕ್ರಮ ಸಂಪೂರ್ಣ ಅನಗತ್ಯ ಮತ್ತು ಅನವಶ್ಯಕ. ಈ ವಿಚಾರದಲ್ಲಿ ಬಿಸಿಐಗೆ ಯಾವುದೇ ಸಂಬಂಧವಿಲ್ಲ ಎಂದು ಸೂರ್ಯಕಾಂತ್ ಸ್ಪಷ್ಟಪಡಿಸಿದ್ದಾರೆ.

ತಮ್ಮ ವಿದ್ಯಾರ್ಥಿ ಜೀವನವನ್ನು ನೆನಪಿಸಿಕೊಂಡ ಸಿಜೆಐ ಸೂರ್ಯಕಾಂತ್, ವಿದ್ಯಾರ್ಥಿಗಳು ತಪ್ಪು ಅಭಿಪ್ರಾಯ ವ್ಯಕ್ತಪಡಿಸಿದ್ದರೂ ಅಥವಾ



ತಪ್ಪು ಹೇಳಿಕೆ ನೀಡಿದ್ದರೂ ಪ್ರತಿಭಟಿಸುವ ಹಕ್ಕನ್ನು ಕಳೆದು ಕೊಳ್ಳುವುದಿಲ್ಲ. ಯುವಕರಾಗಿದ್ದಾಗ ಯಾರಾದರೂ ತಪ್ಪು ಹೇಳಿಕೆ ನೀಡಿದರೆ, ಅದರಿಂದ ಅವರಿಗೆ ಪ್ರತಿಭಟಿಸುವ ಹಕ್ಕಿಲ್ಲ ಎಂದರ್ಥವಲ್ಲ. ಎಲ್ಲ ವಿದ್ಯಾರ್ಥಿಗಳಿಗೂ ನೋಂದಣಿ ಮಾಡಿಕೊಳ್ಳುವಂತೆ ಹೇಳಿ. ಸುಪ್ರೀಂ ಕೋರ್ಟ್ ಬಾರ್ಗೆ ಸೇರಿಕೊಳ್ಳಲಿ; ಕಾನೂನು ನೆರವು ಪ್ರಕರಣಗಳಿಗೆ ಅವರನ್ನು ನಾವು ಸೇರಿಸಿಕೊಳ್ಳುತ್ತೇವೆ. ಈ ನಡುವೆ ಬಿಸಿಐ ನಿರ್ದೇಶನವನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಯ ವಿಚಾರಣೆ ವೇಳೆ, ವಿದ್ಯಾರ್ಥಿಗಳು ಅಥವಾ ಬೋಧಕ ಸಿಬ್ಬಂದಿ ವಿರುದ್ಧ ಯಾವುದೇ ಶಿಕ್ಷಾತ್ಮಕ ಕ್ರಮ ಕೈಗೊಳ್ಳ ಬಾರದು ಎಂದು ಸುಪ್ರೀಂ ಸೂಚಿಸಿದೆ.

ಅರ್ಜಿದಾರರ ಪರ ವಾದಿಸಿದ ಹಿರಿಯ ವಕೀಲ ಕೆ. ಪರಮೇಶ್ವರ್, ಬಿಸಿಐ ಸುತ್ತೋಲೆಯನ್ನು ಹಿಂಪಡೆದಿದ್ದರೂ ಪ್ರಕರಣದ ಮೂಲ ಪ್ರಶ್ನೆ ಇನ್ನೂ ಉಳಿದಿದೆ ಎಂದು ನ್ಯಾಯಾಲಯದ ಗಮನಕ್ಕೆ ತಂದರು. ಬಿಸಿಐ ಅಧ್ಯಕ್ಷ ಮಾನನ್ ಕುಮಾರ್ ಮಿಶ್ರಾ ಅವರು ಕೈಗೊಂಡ ಕ್ರಮದ ಸ್ವರೂಪದ ಬಗ್ಗೆಯೂ ಪ್ರಶ್ನೆಗಳಿವೆ ಎಂದು ಹೇಳಿದರು. ವಿಶ್ವವಿದ್ಯಾಲಯದಲ್ಲಿ ನಡೆಯುತ್ತಿರುವ ವಿಚಾರದಲ್ಲಿ ಬಿಸಿಐಗೆ ಯಾವುದೇ ಕೆಲಸವಿಲ್ಲ ಎಂದು ಪರಮೇಶ್ವರ್ ವಾದಿಸಿದರು.

ಇದಕ್ಕೆ ಸಮ್ಮತಿಸಿದ ಸಿಜೆಐ ಸೂರ್ಯಕಾಂತ್, ವಿದ್ಯಾರ್ಥಿಗಳು ಶಾಂತಿಯುತವಾಗಿ ತಮ್ಮ ಧ್ವನಿ ಎತ್ತುತ್ತಿದ್ದರೆ ಅವರಿಗೆ ಅದಕ್ಕೆ ಅವಕಾಶ ನೀಡಬೇಕು ಎಂದು ಹೇಳಿದರು. ಅವರು ತಪ್ಪಾಗಿದ್ದರೂ ಸಹ, ಪ್ರತಿಭಟಿಸುವ ಹಕ್ಕು ಅವರಿಗಿದೆ. ಬಿಸಿಐಗೆ ಈ ವಿಚಾರದಲ್ಲಿ ಯಾವುದೇ ಕೆಲಸವಿಲ್ಲ ಎಂದು ಸಿಜೆಐ ಪುನರುಚ್ಚರಿಸಿದರು.

# ಕರೂರ್ ಕಾಲ್ತುಳಿತ ಸಂತ್ರಸ್ತರಿಗೆ ಉದ್ಯೋಗ: ಮದ್ರಾಸ್ ಹೈಕೋರ್ಟ್ ಆದೇಶಕ್ಕೆ ಸುಪ್ರೀಂಕೋರ್ಟ್ ತಡೆ

**ನವದೆಹಲಿ, ಆ.14:** ತಮಿಳುನಾಡಿನ ಕರೂರ್‌ನಲ್ಲಿ ನಡೆದ ಕಾಲ್ತುಳಿತ ದುರಂತದಲ್ಲಿ ಮೃತಪಟ್ಟವರ ಕುಟುಂಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಮದ್ರಾಸ್ ಹೈಕೋರ್ಟ್ ನೀಡಿದ್ದ ತಡೆಯನ್ನು ಸುಪ್ರೀಂಕೋರ್ಟ್ ಮಧ್ಯಂತರವಾಗಿ ತಡೆಹಿಡಿದಿದೆ. ಈ ಮೂಲಕ ಮೃತರ ಕುಟುಂಬಗಳಿಗೆ ಉದ್ಯೋಗ ನೀಡುವ ತಮಿಳುನಾಡು ಸರ್ಕಾರದ ನಿರ್ಧಾರಕ್ಕೆ ಸದ್ಯಕ್ಕೆ ಕಾನೂನು ರಕ್ಷಣೆ ದೊರೆತಿದೆ.



ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದಿವಾಲಾ ಮತ್ತು ಕೆ. ವಿನೋದ್ ಚಂದ್ರನ್ ಅವರನ್ನೊಳಗೊಂಡ ಪೀಠವು ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿ, ಮದ್ರಾಸ್ ಹೈಕೋರ್ಟ್‌ನ ತೀರ್ಪಿನ ಜಾರಿಗೆ ತಡೆ ನೀಡಿತು. ಇದೇ ವೇಳೆ ತಮಿಳುನಾಡು ಮುಖ್ಯ ಕಾರ್ಯದರ್ಶಿ ಸೇರಿದಂತೆ ಸಂಬಂಧಪಟ್ಟವರಿಗೆ ನೋಟಿಸ್ ಜಾರಿಗೊಳಿಸಿತು.

ವಿಚಾರಣೆ ವೇಳೆ ಸುಪ್ರೀಂಕೋರ್ಟ್ ಮದ್ರಾಸ್ ಹೈಕೋರ್ಟ್‌ನ ಆದೇಶದ ಕುರಿತು ಪ್ರಶ್ನೆಗಳನ್ನು ಎತ್ತಿತು. ದುರಂತ ಸಂಭವಿಸಿದೆ. ಕುಟುಂಬದ ಏಕೈಕ ಆದಾಯದ ಸದಸ್ಯ ಮೃತಪಟ್ಟಿದ್ದರೆ, ಅವರ ಮಗ, ಮಗಳು ಅಥವಾ ಪತ್ನಿಗೆ ವಿದ್ಯಾರ್ಹತೆಗೆ ಅನುಗುಣವಾಗಿ ಉದ್ಯೋಗ ನೀಡಬಾರದೇ ಎಂದು ಪೀಠ ಪ್ರಶ್ನಿಸಿತು.

ದುರಂತದಿಂದ ಸಂಕಷ್ಟಕ್ಕೆ ಸಿಲುಕಿದ ಕುಟುಂಬಗಳಿಗೆ ಸರ್ಕಾರ ಪರಿಹಾರ ನೀಡಲು ಮುಂದಾದಾಗ, ಹಣದ ಬದಲಿಗೆ ಉದ್ಯೋಗದ ರೂಪದಲ್ಲಿ ನೆರವು ನೀಡುವುದನ್ನು ಪ್ರಶ್ನಿಸುವುದು ಏಕೆ ಎಂಬುದನ್ನೂ ನ್ಯಾಯಮೂರ್ತಿಗಳು ವಿಚಾರಿಸಿದರು.

ಕರೂರ್‌ನಲ್ಲಿ 2025ರ ಸೆಪ್ಟೆಂಬರ್ 27ರಂದು ನಡೆದ ಕಾಲ್ತುಳಿತದಲ್ಲಿ 41 ಮಂದಿ ಮೃತಪಟ್ಟಿದ್ದರು. ಈ ಕುಟುಂಬಗಳ ಅರ್ಹ ಸದಸ್ಯರಿಗೆ ಅನುಕಂಪದ ಆಧಾರದ ಮೇಲೆ ಸರ್ಕಾರಿ ಉದ್ಯೋಗ ನೀಡಲು ತಮಿಳುನಾಡು ಸರ್ಕಾರ ನಿರ್ಧರಿಸಿತ್ತು.

ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರು 31 ಮೃತರ ಕುಟುಂಬ ಸದಸ್ಯರಿಗೆ ಜುಲೈ 10ರಂದು ನೇಮಕಾತಿ ಆದೇಶಗಳನ್ನು ವಿತರಿಸಿದ್ದರು.

ಜುಲೈ 27ರಂದು ಮದ್ರಾಸ್ ಹೈಕೋರ್ಟ್‌ನ ಮದುರೈ ಪೀಠವು ಸರ್ಕಾರದ ನಿರ್ಧಾರವನ್ನು ರದ್ದುಗೊಳಿಸಿತ್ತು. ಸಾರ್ವಜನಿಕ ಉದ್ಯೋಗದಲ್ಲಿ ಸಂವಿಧಾನದ 14 ಮತ್ತು 16ನೇ ವಿಧಿಗಳ ಸಮಾನತೆಯ ನಿಯಮಗಳನ್ನು ಪಾಲಿಸಬೇಕು. ನಿರ್ದಿಷ್ಟ ದುರಂತದ ಸಂತ್ರಸ್ತರ ಕುಟುಂಬಗಳಿಗೆ ಪ್ರತ್ಯೇಕವಾಗಿ ಉದ್ಯೋಗ ನೀಡುವುದು ಇಂತಹ ಬೇಡಿಕೆಗಳ ಪ್ರವಾಹಕ್ಕೆ ಕಾರಣವಾಗಬಹುದು ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿತ್ತು. ಈ ಆದೇಶವನ್ನು ಪ್ರಶ್ನಿಸಿ ತಮಿಳುನಾಡು ಸರ್ಕಾರ ಸುಪ್ರೀಂಕೋರ್ಟ್ ಮೆಟ್ಟಿಲೇರಿತ್ತು.

**ದೇಶೀಯವಾಗಿಯೇ ಫೈಟರ್‌ಜೆಟ್ ಇಂಜಿನ್ ನಿರ್ಮಾಣ:**

# ರಿಲಯನ್ಸ್ ಉದ್ಯಮ-ರೋಲ್ಸ್ ರಾಯ್ಸ್ ಜಂಟಿಯಾಗಿ ತಯಾರಿಕೆ



**ನವದೆಹಲಿ, ಆ.14:** ಶುಕ್ರವಾರ ಅಡ್ವಾನ್ಸ್ಡ್ ಮೀಡಿಯಂ ಕಾಂಬ್ಯಾಟ್ ಏರ್‌ಕ್ರಾಫ್ಟ್ (ಎಎಂಸಿಎ) ಯೋಜನೆಯಡಿ ಜಂಟಿಯಾಗಿ ದೇಶೀಯ ಯುದ್ಧ ಎಂಜಿನ್ ಅಭಿವೃದ್ಧಿಪಡಿಸಲು ಉದ್ದೇಶಿಸಿರುವುದಾಗಿ ರಿಲಯನ್ಸ್ ಇಂಡಸ್ಟ್ರೀಸ್ ಮತ್ತು ರೋಲ್ಸ್ ರಾಯ್ಸ್ ಘೋಷಿಸಿವೆ. ಭಾರತದ ಅತಿದೊಡ್ಡ ಖಾಸಗಿ ವಲಯದ ಕಂಪನಿ ಮತ್ತು ಬ್ರಿಟನ್‌ನ ಪ್ರತಿಷ್ಠಿತ ಏರೋ-ಎಂಜಿನ್ ತಯಾರಕರು ದೇಶದಲ್ಲಿ ಸ್ಥಳೀಯ ಫೈಟರ್-ಜೆಟ್ ಪ್ರೊಪಲ್ಷನ್ ಸಾಮರ್ಥ್ಯವನ್ನು ನಿರ್ಮಿಸಲು ಬಿಡ್ ಮಾಡಿವೆ. ಎರಡು ಕಂಪನಿಗಳು ಜಂಟಿ ಹೇಳಿಕೆಯಲ್ಲಿ, ಮೀಸಲಾದ ಏರೋ ಸ್ಪೇಸ್ ಗ್ಯಾಸ್ ಟರ್ಬೈನ್ ಕಾಂಪ್ಲೆಕ್ಸ್ ರಚನೆಯನ್ನು ಭಾರತದಲ್ಲಿ ಅನ್ವೇಷಿಸುವುದಾಗಿ ತಿಳಿಸಿವೆ.

ಇದನ್ನು ಯುದ್ಧ ಎಂಜಿನ್‌ಗಳ ವಿನ್ಯಾಸ, ಅಭಿವೃದ್ಧಿ, ತಯಾರಿಕೆ, ಪರೀಕ್ಷೆ, ಉತ್ಪಾದನೆ ಮತ್ತು ಜೀವಿತಾವಧಿಯ ಬೆಂಬಲವನ್ನು ಒಳಗೊಂಡಂತೆ ಶಕ್ತಿ ಮತ್ತು ಪ್ರೊಪಲ್ಷನ್ ತಂತ್ರಜ್ಞಾನಕ್ಕಾಗಿ ಶ್ರೇಷ್ಠತೆಯ ಕೇಂದ್ರವಾಗಿ ರೂಪಿಸಲಾಗುತ್ತದೆ.




**ಎಎಂಸಿಎ ತಯಾರಿಕೆಗೆ 3 ಖಾಸಗಿ ಕಂಪನಿಗಳ ಪೈಪೋಟಿ:** ಮೊದಲ ಬಾರಿಗೆ ಎಚ್‌ಎಎಲ್ ಹೊರಗಿಟ್ಟ ಕೇಂದ್ರ ಸರ್ಕಾರ

"ಭಾರತದ ಕಾರ್ಯತಂತ್ರದ ಸ್ವಾಯತ್ತತೆಗೆ ನಿರ್ಣಾಯಕ ತಂತ್ರಜ್ಞಾನಗಳಲ್ಲಿ ಸಾರ್ವಭೌಮ ಸಾಮರ್ಥ್ಯದ ಅಗತ್ಯವಿದೆ" ಎಂದು ರಿಲಯನ್ಸ್ ಇಂಡಸ್ಟ್ರೀಸ್‌ನ ಕಾರ್ಯನಿರ್ವಾಹಕ ನಿರ್ದೇಶಕ ಅನಂತ್ ಅಂಬಾನಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ತೆಲಂಗಾಣದಲ್ಲಿ 21% ಮತದಾರರ ಹೆಸರು ಡಿಲೀಟ್ ಸಾಧ್ಯತೆ: ಸಿಎಂ ರೆಡ್ಡಿ

**ಹೈದರಾಬಾದ್, ಆ.14:** ತೆಲಂಗಾಣದಲ್ಲಿ ನಡೆದಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ವೇಳೆ ಸುಮಾರು 21% ಮತದಾರರ ಹೆಸರುಗಳು ಮತದಾರರ ಪಟ್ಟಿಯಿಂದ ಅಳಿಸಿ ಹೋಗುವ ಸಾಧ್ಯತೆ ಇದೆ ಎಂದು ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ನಾಯಕ ರೇವಂತ್‌ರೆಡ್ಡಿ ಪಕ್ಷದ ಸಚಿವರು, ಶಾಸಕರು ಮತ್ತು ಹಿರಿಯ ನಾಯಕರಿಗೆ ಎಚ್ಚರಿಕೆ ನೀಡಿದ್ದಾರೆ.

ಆಗಸ್ಟ್ 10ರಂದು ಎಸ್‌ಐಆರ್ ಪ್ರಕ್ರಿಯೆ ಮುಕ್ತಾಯಗೊಂಡ ಹಿನ್ನೆಲೆಯಲ್ಲಿ ಗುರುವಾರ ಸಂಜೆ ನಡೆದ ಸಭೆಯಲ್ಲಿ ರೇವಂತ್ ರೆಡ್ಡಿ, ಮತದಾರರ ಹೆಸರುಗಳನ್ನು ಡಿಲೀಟ್ ಆಗದಂತೆ ರಕ್ಷಿಸುವಲ್ಲಿ ವಿಫಲರಾದರೆ ಅದಕ್ಕೆ ಬೂತ್ ಮಟ್ಟದ ಉಸ್ತುವಾರಿ ಸೇರಿದಂತೆ ಪಕ್ಷದ ನಾಯಕರೇ ಹೊಣೆ ಎಂದು ಹೇಳಿದ್ದಾರೆ. ವಿವಿಧ ಕ್ಷೇತ್ರಗಳು ಹಾಗೂ ಜಿಲ್ಲೆಗಳಿಂದ ಬಂದಿರುವ ಆಂತರಿಕ ವರದಿಗಳ ಆಧಾರದ ಮೇಲೆ ಅವರು ಈ ಎಚ್ಚರಿಕೆ ನೀಡಿದ್ದಾರೆ.

ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಮತದಾರರ ಹೆಸರುಗಳು ಡಿಲೀಟ್ ಆಗುವ ಅಪಾಯದಲ್ಲಿವೆ ಎಂಬುದರ ಕುರಿತು ಸಮಗ್ರ ವರದಿ ಸಿದ್ಧಪಡಿಸುವಂತೆ ಉಸ್ತುವಾರಿ ಸಚಿವರಿಗೆ ಮುಖ್ಯಮಂತ್ರಿ ಸೂಚಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವರು ತಮ್ಮ ಜಿಲ್ಲೆಗಳಲ್ಲಿರುವ ಲೋಕಸಭೆ ಹಾಗೂ ವಿಧಾನಸಭಾ ಕ್ಷೇತ್ರಗಳ ಉಸ್ತುವಾರಿಗಳೊಂದಿಗೆ ಸಭೆ ನಡೆಸಿ ಸಮಸ್ಯೆಗಳನ್ನು ಗುರುತಿಸಿ, ಕರಡು ಮತದಾರರ ಪಟ್ಟಿ ಪ್ರಕಟವಾಗುವ ಮುನ್ನವೇ ಅವುಗಳನ್ನು ಪರಿಹರಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಮುಂದಿನ ಎರಡು ದಿನಗಳಲ್ಲಿ ಜಿಲ್ಲೆಗಳಲ್ಲಿ ಪರಿಶೀಲನಾ ಸಭೆ ನಡೆಸುವಂತೆಯೂ ಸಚಿವರಿಗೆ ಸೂಚಿಸಲಾಗಿದೆ.

ಪ್ರತಿ ವಿಧಾನಸಭಾ ಕ್ಷೇತ್ರದ ಉಸ್ತುವಾರಿ ನಾಯಕರು ತಮ್ಮ ಕ್ಷೇತ್ರಗಳಲ್ಲೇ ನಾಲ್ಕು ದಿನಗಳ ಕಾಲ



ಉಳಿದು, ಮತದಾರರ ಪಟ್ಟಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಗುರುತಿಸಿ ಪರಿಹರಿಸಬೇಕು. ಆಗಸ್ಟ್ 17ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗುವ ಮುನ್ನವೇ ಈ ಕಾರ್ಯ ಪೂರ್ಣಗೊಳಿಸಬೇಕು ಎಂದು ರೇವಂತ್ ರೆಡ್ಡಿ ಸೂಚಿಸಿದ್ದಾರೆ.

ಮತದಾರರ ಪಟ್ಟಿಯಲ್ಲಿ ಹೆಸರು ಕಾಣಿಸದಿದ್ದರೆ ಹೊಸದಾಗಿ ನೋಂದಣಿ ಮಾಡಿಸಲು ಪಕ್ಷದ ನಾಯಕರು ಮತದಾರರಿಗೆ ನೆರವಾಗಬೇಕು. ಇದಕ್ಕಾಗಿ ಫಾರ್ಮ್-6 ಮೂಲಕ ಅರ್ಜಿ ಸಲ್ಲಿಸಿ ಹೆಸರು ಸೇರ್ಪಡೆಗೊಳಿಸುವಂತೆ ಸಹಾಯ ಮಾಡಬೇಕು ಎಂದು ಮುಖ್ಯಮಂತ್ರಿ ಹೇಳಿದ್ದಾರೆ.

ಅಂತಿಮ ಮತದಾರರ ಪಟ್ಟಿ ಅಕ್ಟೋಬರ್ 19ರಂದು ಪ್ರಕಟವಾಗಲಿದೆ. ಎಸ್‌ಐಆರ್ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯವನ್ನು ಪಕ್ಷ ಸಹಿಸುವುದಿಲ್ಲ. ಅಗತ್ಯವಿದ್ದರೆ ಎಐಸಿಸಿ ನಿರ್ದೇಶನದಂತೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ರೇವಂತ್ ರೆಡ್ಡಿ ಎಚ್ಚರಿಸಿದ್ದಾರೆ.

ತೆಲಂಗಾಣ ಮುಖ್ಯ ಚುನಾವಣಾಧಿಕಾರಿ ಸಿ. ಸುದರ್ಶನ್ ರೆಡ್ಡಿ ನೀಡಿರುವ ಮಾಹಿತಿಯ ಪ್ರಕಾರ, ರಾಜ್ಯದ 33 ಜಿಲ್ಲೆಗಳಲ್ಲಿ ಒಟ್ಟು 3,38,26,448 ಎಣಿಕೆ ನಮೂನೆಗಳನ್ನು ಮತದಾರರಿಗೆ ವಿತರಿಸಲಾಗಿತ್ತು.

ಇವುಗಳಲ್ಲಿ 2,64,73,616 ನಮೂನೆಗಳನ್ನು ಮತದಾರರು ಸಲ್ಲಿಸಿದ್ದು, ಅವುಗಳನ್ನು ಡಿಜಿಟಲೀಕರಣ ಮಾಡಲಾಗಿದೆ. ಉಳಿದ 73,52,832 ನಮೂನೆಗಳನ್ನು ಚುನಾವಣಾ ಆಯೋಗ ಸಂಗ್ರಹಿಸಲಾಗದ ನಮೂನೆಗಳೆಂದು ಗುರುತಿಸಿದೆ. ಈ ಮತದಾರರನ್ನು ಗೈರು, ಸ್ಥಳಾಂತರಗೊಂಡವರು ಅಥವಾ ಮೃತಪಟ್ಟವರು ಎಂಬ ವರ್ಗಕ್ಕೆ ಸೇರಿಸಲಾಗಿದೆ.

ಈ ಮತದಾರರ ಹೆಸರುಗಳ ಡಿಲೀಷನ್ ಸಂಬಂಧ ಚುನಾವಣಾ ಆಯೋಗದಿಂದ ನೋಟಿಸ್ ಬಂದಿದ್ದರೆ ಅದನ್ನು ಗಂಭೀರವಾಗಿ ಪರಿಗಣಿಸಿ, ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸುವ ಪ್ರಕ್ರಿಯೆಯಲ್ಲಿ ಮತದಾರರಿಗೆ ನೆರವಾಗುವಂತೆ ರೇವಂತ್ ರೆಡ್ಡಿ ಪಕ್ಷದ ನಾಯಕರಿಗೆ ಸೂಚಿಸಿದ್ದಾರೆ. ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸುವ ಪ್ರಕ್ರಿಯೆ ಆಗಸ್ಟ್ 17ರಿಂದ ಅಕ್ಟೋಬರ್ 15ರವರೆಗೆ ನಡೆಯಲಿದೆ.

ಈ ನಡುವೆ, ಎಸ್‌ಐಆರ್‌ಗೆ ಸಂಬಂಧಿಸಿದ ಸಂಪೂರ್ಣ ಮಾಹಿತಿಯನ್ನು ಚುನಾವಣಾ ಆಯೋಗ ಬಹಿರಂಗಪಡಿಸಬೇಕು ಎಂದು ಭಾರತ ರಾಷ್ಟ್ರ ಸಮಿತಿ ಒತ್ತಾಯಿಸಿದೆ. ಬಿಆರ್‌ಎಸ್ ನಾಯಕ ಹಾಗೂ ಎಂಎಲ್ಸಿ ಡಿ. ಶ್ರವಣ್, 73 ಲಕ್ಷಕ್ಕೂ ಹೆಚ್ಚು ನಮೂನೆಗಳನ್ನು ಸಂಗ್ರಹಿಸಲಾಗದ ಎಂದು ಏಕೆ ಗುರುತಿಸಲಾಗಿದೆ ಎಂದು ಪ್ರಶ್ನಿಸಿದ್ದಾರೆ.

ಮುಖ್ಯ ಚುನಾವಣಾಧಿಕಾರಿ ಕಚೇರಿಯ ಪ್ರಕಾರ, ಈ 73,52,832 ಮತದಾರರ ಪೈಕಿ 45 ಲಕ್ಷಕ್ಕೂ ಹೆಚ್ಚು ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡವರು ಎಂದು ಗುರುತಿಸಲಾಗಿದೆ. 11 ಲಕ್ಷಕ್ಕೂ ಹೆಚ್ಚು ಮತದಾರರು ಗೈರು ಅಥವಾ ಪತ್ತೆಯಾಗದವರು ಎಂದು ದಾಖಲಿಸಲಾಗಿದೆ.

ಎಸ್‌ಐಆರ್ ಪರಿಶೀಲನೆ ವೇಳೆ ತೆಲಂಗಾಣ ಸರ್ಕಾರ ಇತ್ತೀಚೆಗೆ ಪರಿಚಯಿಸಿರುವ ಫ್ಯಾಮಿಲಿ ರಿಜಿಸ್ಟರ್ ಸರ್ಟಿಫಿಕೇಟ್ ಅನ್ನು ಮಾನ್ಯ ದಾಖಲೆಯಾಗಿ ಪರಿಗಣಿಸಲು ಸಾಧ್ಯವಿಲ್ಲ ಎಂದು ಚುನಾವಣಾ ಆಯೋಗ ರಾಜ್ಯ ಸರ್ಕಾರಕ್ಕೆ ತಿಳಿಸಿರುವ ಹಿನ್ನೆಲೆಯಲ್ಲಿ ಮುಂದಿನ ಕ್ರಮದ ಬಗ್ಗೆಯೂ ರೇವಂತ್ ರೆಡ್ಡಿ ಸಭೆಯಲ್ಲಿ ಚರ್ಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಕಾನೂನು ಅಭಿಪ್ರಾಯ ಪಡೆಯುವ ಸಾಧ್ಯತೆಯ ಬಗ್ಗೆಯೂ ಸರ್ಕಾರ ಚಿಂತನೆ ನಡೆಸುತ್ತಿದೆ.


# ನಾಲ್ಕು ಸೆಕೆಂಡ್ ನಿಯಂತ್ರಣ ಕಳೆದುಕೊಂಡಿದ್ದ ವಿಮಾನ

## ಏರ್‌ಇಂಡಿಯಾ ವಿಮಾನದಲ್ಲಿ ಮತ್ತೊಂದು ಆಘಾತಕಾರಿ ಸಂಗತಿ

**ನವದೆಹಲಿ, ಆ.14:** ಫುಕೆಟ್‌ನಿಂದ ದೆಹಲಿಗೆ ಬರುತ್ತಿದ್ದ ಏರ್ ಇಂಡಿಯಾ ವಿಮಾನವು ಸುಮಾರು 300 ಅಡಿ ಕೆಳಕ್ಕೆ ಕುಸಿದ ಘಟನೆಗೆ ಸಂಬಂಧಿಸಿದಂತೆ ಮತ್ತೊಂದು ಆತಂಕಕಾರಿ ಮಾಹಿತಿ ಬಹಿರಂಗವಾಗಿದೆ. ಆಗಸ್ಟ್ 4ರಂದು ನಡೆದ ಘಟನೆಯಲ್ಲಿ ವಿಮಾನದ ಪ್ರಮುಖ ಹಾರಾಟ ನಿಯಂತ್ರಣ ವ್ಯವಸ್ಥೆಗಳು ಸುಮಾರು ನಾಲ್ಕು ಸೆಕೆಂಡ್‌ಗಳ ಕಾಲ ಸಂಪೂರ್ಣವಾಗಿ ಕಾರ್ಯನಿರ್ವಹಿಸಿರಲಿಲ್ಲ ಎಂದು ಏರ್‌ಬಸ್‌ನ ಪ್ರಾಥಮಿಕ ವಿಶ್ಲೇಷಣೆ ತಿಳಿಸಿದೆ.

ಎಐ-2379 ವಿಮಾನವು ಫುಕೆಟ್‌ನಿಂದ ನವದೆಹಲಿಗೆ ಪ್ರಯಾಣಿಸುತ್ತಿದ್ದಾಗ ಈ ಘಟನೆ ಸಂಭವಿಸಿತ್ತು. ವಿಮಾನದಲ್ಲಿದ್ದ 137 ಪ್ರಯಾಣಿಕರು ಹಾಗೂ 8 ಸಿಬ್ಬಂದಿ ಸೇರಿದಂತೆ 145 ಮಂದಿ ಇದ್ದರು. ವಿಮಾನ ಸುಮಾರು 300 ಅಡಿ ಎತ್ತರ ಕಳೆದುಕೊಂಡ ಪರಿಣಾಮ 20 ಪ್ರಯಾಣಿಕರು ಮತ್ತು ನಾಲ್ವರು ಸಿಬ್ಬಂದಿ ಗಾಯಗೊಂಡಿದ್ದು, 17 ಮಂದಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಬಳಿಕ ವಿಮಾನ ಸುರಕ್ಷಿತವಾಗಿ ದೆಹಲಿಯಲ್ಲಿ ಇಳಿದಿತ್ತು.

**ಮೂರು ಹೈಡ್ರಾಲಿಕ್ ವ್ಯವಸ್ಥೆಗಳ ವೈಫಲ್ಯ**



ವಿಮಾನದ ಡಿಜಿಟಲ್ ಫ್ಲೈಟ್ ಡೇಟಾ ರೆಕಾರ್ಡರ್ (ಬ್ಲ್ಯಾಕ್ ಬಾಕ್ಸ್)ನ ಪ್ರಾಥಮಿಕ ವಿಶ್ಲೇಷಣೆಯಲ್ಲಿ ವಿಮಾನದ ಮೂರು ಹೈಡ್ರಾಲಿಕ್ ವ್ಯವಸ್ಥೆಗಳಲ್ಲೂ ಏಕಕಾಲದಲ್ಲಿ ಒತ್ತಡ ಕುಸಿತ ಸಂಭವಿಸಿರುವುದು ಪತ್ತೆಯಾಗಿದೆ. ಇದರಿಂದ ವಿಮಾನದ ಮೇಲಕ್ಕೆ-ಕೆಳಕ್ಕೆ ಚಲನೆ ನಿಯಂತ್ರಿಸುವ ಎಲಿವೇಟರ್ ಹಾಗೂ ಎಡ-ಬಲ ತಿರುಗುವಿಕೆಗೆ ನೆರವಾಗುವ ಏಲಿರಾನ್‌ಗಳು ಸುಮಾರು ನಾಲ್ಕು ಸೆಕೆಂಡ್‌ಗಳ ಕಾಲ ನಿಯಂತ್ರಣಕ್ಕೆ ಸ್ಪಂದಿಸಿರಲಿಲ್ಲ.

ಹೈಡ್ರಾಲಿಕ್ ವ್ಯವಸ್ಥೆಗಳು ಕೆಲವೇ ಸೆಕೆಂಡ್‌ಗಳಲ್ಲಿ ಪುನಃ ಕಾರ್ಯನಿರ್ವಹಿಸಿದ ಬಳಿಕ ಪೈಲಟ್‌ಗಳ ನಿಯಂತ್ರಣ ಸೂಚನೆಗಳು ಪರಿಣಾಮ ಬೀರಿವೆ. ಇದರಿಂದ ವಿಮಾನದಲ್ಲಿ ಏಕಾಏಕಿ ಕೆಳಮುಖ ಚಲನೆ ಉಂಟಾಗಿ ಪ್ರಯಾಣಿಕರು ಹಾಗೂ ಸಿಬ್ಬಂದಿ ಮೇಲಕ್ಕೆ ಎಸೆಯಲ್ಪಟ್ಟಂತಾಗಿದ್ದಾರೆ.

ಈ ಹೈಡ್ರಾಲಿಕ್ ವೈಫಲ್ಯಕ್ಕೆ ನಿಖರ ಕಾರಣ ಏನು ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ವಿಮಾನದ ಹೈಡ್ರಾಲಿಕ್ ವ್ಯವಸ್ಥೆಗಳು, ಸೆನ್ಸರ್‌ಗಳು, ಸ್ವಿಚ್‌ಗಳು, ವೈರಿಂಗ್ ಹಾಗೂ ವಿಮಾನದ ರಚನಾತ್ಮಕ ಸ್ಥಿತಿಯನ್ನು ಮತ್ತಷ್ಟು ಪರಿಶೀಲಿಸುವಂತೆ ಏರ್‌ಬಸ್ ಸೂಚಿಸಿದೆ. ಘಟನೆಯ ತನಿಖೆಯಲ್ಲಿ ಭಾರತದ ಏರ್‌ಕ್ರಾಫ್ಟ್ ಆಕ್ಸಿಡೆಂಟ್ ಇನ್ವೆಸ್ಟಿಗೇಷನ್ ಬ್ಯೂರೋ, ಏರ್‌ಬಸ್ ಮತ್ತು ಫ್ರಾನ್ಸ್‌ನ ಃಇಂ ಸಂಸ್ಥೆಗಳು ಭಾಗಿಯಾಗಿವೆ.

ಆರಂಭದಲ್ಲಿ ಏರ್ ಇಂಡಿಯಾ ಈ ಘಟನೆಯನ್ನು ತೀವ್ರ ಪ್ರಕ್ಷುಬ್ಧತೆ (ಟರ್ಬುಲೆನ್ಸ್) ಎಂದು ಹೇಳಿತ್ತು. ಆದರೆ ನಂತರದ ತಾಂತ್ರಿಕ ವಿಶ್ಲೇಷಣೆಯಲ್ಲಿ ಹೈಡ್ರಾಲಿಕ್ ವ್ಯವಸ್ಥೆಗಳ ವೈಫಲ್ಯ ಮತ್ತು ನಿಯಂತ್ರಣ ವ್ಯವಸ್ಥೆಯ ತಾತ್ಕಾಲಿಕ ನಷ್ಟದ ಅಂಶ ಬೆಳಕಿಗೆ ಬಂದಿದೆ. ಇದೇ ಪ್ರಕರಣದ ಹಿನ್ನೆಲೆಯಲ್ಲಿ ವಿಮಾನದ ಕ್ಯಾಪ್ಟನ್ ಔಷಧ ಪರೀಕ್ಷೆಯಲ್ಲಿ ಗಾಂಜಾದ ಅಂಶ ಪತ್ತೆಯಾದ ವರದಿಯೂ ಹೊರಬಂದಿದೆ. ಈ ವಿಷಯಕ್ಕೆ ವಿಮಾನದ ತಾಂತ್ರಿಕ ವೈಫಲ್ಯದೊಂದಿಗೆ ನೇರ ಸಂಬಂಧವಿದೆ ಎಂಬುದು ಇನ್ನೂ ದೃಢಪಟ್ಟಿಲ್ಲ. ಆದರೆ ಏರ್ ಇಂಡಿಯಾ ತನ್ನ ಎಲ್ಲಾ ಪೈಲಟ್‌ಗಳಿಗೂ ಕಡ್ಡಾಯವಾಗಿ ಮಾದಕ ವಸ್ತುಗಳ ಪರೀಕ್ಷೆ ನಡೆಸುವ ಕ್ರಮವನ್ನು ವಿಸ್ತರಿಸಿದೆ.

# ವಿಕಲ ಚೇತನರ ಅವಹೇಳನ: ಸಮಯ್ ರೈನಾ, ರಣವೀರ್ ವಿರುದ್ಧದ ಎಲ್ಲ ಎಫ್‌ಐಆರ್ ರದ್ದು

**ನವದೆಹಲಿ, ಆ. 14:** ಯುಟ್ಯೂಬ್‌ನ ಜನಪ್ರಿಯ ಶೋ ಇಂಡಿಯಾಸ್ ಗಾಟ್ ಲೇಟೆಂಟ್‌ನಲ್ಲಿ ವಿಕಲಚೇತನರ ಬಗ್ಗೆ ಅವಹೇಳನಕಾರಿ ಮತ್ತು ಅಸೂಕ್ಷ್ಮ ಹೇಳಿಕೆ ನೀಡಿದ ಆರೋಪಕ್ಕೆ ಸಂಬಂಧಿಸಿದಂತೆ ಸ್ಟ್ಯಾಂಡ್-ಅಪ್ ಕಮಿಡಿಯನ್ ಸಮಯ್ ರೈನಾ, ಪಾಡ್‌ಕ್ಯಾಸ್ಟರ್ ರಣವೀರ್ ಅಲಹಾಬಾದಿಯಾ ಹಾಗೂ ಇತರರ ವಿರುದ್ಧ ದಾಖಲಾಗಿದ್ದ ಎಲ್ಲಾ ಎಫ್‌ಐಆರ್‌ಗಳನ್ನು ಸುಪ್ರೀಂ ಕೋರ್ಟ್ ಶುಕ್ರವಾರ ರದ್ದುಪಡಿಸಿದೆ. ಸಮಯ್ ರೈನಾ ಅವರ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ರಣವೀರ್ ಅಲಹಾಬಾದಿಯಾ ಅವರು ಅಶ್ಲೀಲ ಮತ್ತು ಆಕ್ಷೇಪಾರ್ಹ ಹೇಳಿಕೆಗಳನ್ನು ನೀಡಿದ್ದರು ಎಂಬುದು ವಿವಾದದ ಮೂಲವಾಗಿತ್ತು. ಈ ಹೇಳಿಕೆಗಳು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಟೀಕೆಗೆ ಗುರಿಯಾದ ಬೆನ್ನಲ್ಲೇ, ದೇಶದ ವಿವಿಧ ರಾಜ್ಯಗಳಲ್ಲಿ ಅಸಭ್ಯ ಭಾಷೆ ಬಳಕೆ ಮತ್ತು ಅಶ್ಲೀಲತೆ ಉತ್ತೇಜನದ ಆರೋಪದಡಿ ಇವರ ವಿರುದ್ಧ ಹಲವು ದೂರುಗಳು ಹಾಗೂ ಎಫ್‌ಐಆರ್‌ಗಳು ದಾಖಲಾಗಿದ್ದವು.



ತಮ್ಮ ವಿರುದ್ಧದ ಎಲ್ಲ ಎಫ್‌ಐಆರ್‌ಗಳನ್ನು ಒಗ್ಗೂಡಿಸಲು ಮತ್ತು ಬಂಧನದಿಂದ ರಕ್ಷಣೆ ಕೋರಿ ರಣವೀರ್ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ವಿಚಾರಣೆ ವೇಳೆ ಅವರ ಹೇಳಿಕೆಗಳನ್ನು ತೀವ್ರವಾಗಿ ಖಂಡಿಸಿದ್ದ ನ್ಯಾಯಾಲಯ, ವಾಕ್ ಸ್ವಾತಂತ್ರ್ಯವಿದೆ ಎಂದ ಮಾತ್ರಕ್ಕೆ ಸಾಮಾಜಿಕ ಮೌಲ್ಯಗಳನ್ನು ಉಲ್ಲಂಘಿಸುವಂತಹ ಅಸಭ್ಯ ಭಾಷೆ ಬಳಸಲು ಯಾರಿಗೂ ಪರವಾನಗಿ ನೀಡಿಲ್ಲ ಎಂದು ಚಾಟಿ ಬೀಸಿತ್ತು. ಆದಾಗ್ಯೂ, ಕೊಲೆ ಬೆದರಿಕೆಗಳು ಬಂದಿರುವ ವರದಿಗಳ ಹಿನ್ನೆಲೆಯಲ್ಲಿ ಅವರಿಗೆ ಮಧ್ಯಂತರ ರಕ್ಷಣೆ ನೀಡಿ, ಪೊಲೀಸ್ ಭದ್ರತೆ ಪಡೆಯಲು ಅನುಮತಿಸಿತ್ತು.

ಮಾರ್ಚ್ 2025ರಲ್ಲಿ ಕೆನಡಾದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಈ ಪ್ರಕರಣವನ್ನು ಪ್ರಸ್ತಾಪಿಸಿ ಮಾತನಾಡಿದ್ದ ಸಮಯ್ ರೈನಾ, ಶೋ ಅಂತ್ಯದಲ್ಲಿ ಪ್ರೇಕ್ಷಕರನ್ನು ಉದ್ದೇಶಿಸಿ ನನ್ನ ವಕೀಲರ ಶುಲ್ಕ ಪಾವತಿಸಿದ್ದಕ್ಕೆ ಧನ್ಯವಾದಗಳು ಎಂದು ವ್ಯಂಗ್ಯವಾಡಿದ್ದರು. ಈ ವಿಚಾರವಾಗಿ ಮಾರ್ಚ್ 3, 2025ರಂದು ರೈನಾ ಅವರನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದ್ದ ನ್ಯಾಯಮೂರ್ತಿ ಸೂರ್ಯಕಾಂತ್ ಅವರಿದ್ದ ಪೀಠ, ನಾವು ಹಳೇ ಕಾಲದವರು ಎಂದು ಈ ಯುವಕರು ಭಾವಿಸಿರಬಹುದು. ಆದರೆ ಅವರನ್ನು ಹೇಗೆ ನಿಭಾಯಿಸಬೇಕು ಎಂಬುದು ನಮಗೆ ತಿಳಿದಿದೆ ನ್ಯಾಯಾಲಯವನ್ನು ಲಘುವಾಗಿ ಪರಿಗಣಿಸಬೇಡಿ ಎಂದು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿತ್ತು.

ವಿಚಾರಣೆಯಲ್ಲಿ, ರಣವೀರ್ ಶೋ ಪಾಡ್‌ಕಾಸ್ಟ್ ಅನ್ನೇ ತಮ್ಮ ಸಂಸ್ಥೆಯ 280ಕ್ಕೂ ಹೆಚ್ಚು ಉದ್ಯೋಗಿಗಳು ಅವಲಂಬಿಸಿದ್ದಾರೆ ಎಂಬ ರಣವೀರ್ ಅಲಹಾಬಾದಿಯಾ ಅವರ ವಾದವನ್ನು ಆಲಿಸಿದ್ದ ಪೀಠ, ಅಭಿವ್ಯಕ್ತಿ ಸ್ವಾತಂತ್ರ್ಯ ಮತ್ತು ನೈತಿಕತೆಯ ನಡುವೆ ಸಮತೋಲನ ಕಾಯ್ದುಕೊಳ್ಳುವ ಷರತ್ತಿನೊಂದಿಗೆ ಪಾಡ್‌ಕಾಸ್ಟ್ ಮುಂದುವರಿಸಲು ಅನುಮತಿ ನೀಡಿತ್ತು. ಜೊತೆಗೆ, ಗುವಾಹಟಿಯಲ್ಲಿ ನಡೆಯುತ್ತಿರುವ ತನಿಖೆಗೆ ಹಾಜರಾಗುವಂತೆ ರಣವೀರ್‌ಗೆ ಸೂಚಿಸಿತ್ತು. ನ್ಯಾಯಾಲಯದ ಹಿಂದಿನ ನಿರ್ದೇಶನಗಳನ್ನು ಪಾಲಿಸದ ಆರೋಪದ ಮೇಲೆ ಇದೇ ವರ್ಷ ಜು. 14ರಂದು ಸುಪ್ರೀಂ ಕೋರ್ಟ್ ರೈನಾ ಮತ್ತು ರಣವೀರ್ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿತ್ತು. ಇವರನ್ನು ಸ್ವಯಂ ಘೋಷಿತ ಯೂತ್ ಐಕಾನ್‌ಗಳು ಎಂದು ಕರೆದಿದ್ದ ನ್ಯಾಯಾಲಯ, ಇಬ್ಬರಿಗೂ ತಲಾ 3 ಲಕ್ಷ ರೂ. ದಂಡ ವಿಧಿಸಿ, ಅಫಿಡವಿಟ್ ಸಲ್ಲಿಸಲು ಎರಡು ವಾರಗಳ ಗಡುವು ನೀಡಿತ್ತು. ಹಲವು ತಿಂಗಳುಗಳ ಕಾಲ ನಡೆದ ಈ ಸುದೀರ್ಘ ಕಾನೂನು ಪ್ರಕ್ರಿಯೆ ಮತ್ತು ನ್ಯಾಯಾಲಯದ ತೀಕ್ಷ್ಣ ಎಚ್ಚರಿಕೆಗಳ ಬಳಿಕ, ಇದೀಗ ಸುಪ್ರೀಂ ಕೋರ್ಟ್ ಶುಕ್ರವಾರದ ಆದೇಶದ ಮೂಲಕ ಇಬ್ಬರ ಮೇಲಿದ್ದ ಎಲ್ಲಾ ಎಫ್‌ಐಆರ್‌ಗಳನ್ನು ರದ್ದುಗೊಳಿಸುವ ಮೂಲಕ ಪ್ರಕರಣಕ್ಕೆ ಅಂತ್ಯ ಹಾಡಿದೆ.

**ಮಹಿಳೆಯರಿಗೆ ವಾರ್ಷಿಕ 40 ಸಾವಿರ ರೂ.: ಅಖಿಲೇಶ್ ಯಾದವ್ ಘೋಷಣೆ**

# ಉಪ್ರ: ಮಹಿಳಾ ಮತಬೇಟೆಗೆ ಬಿಜೆಪಿ-ಎಸ್‌ಪಿ ಸಜ್ಜು

**ಲಕ್ನೋ, ಆ.14:** ಉತ್ತರ ಪ್ರದೇಶ ವಿಧಾನಸಭಾ ಚುನಾವಣೆ ಇನ್ನೂ ಹಲವು ತಿಂಗಳು ದೂರವಿದ್ದರೂ, ಮಹಿಳಾ ಮತದಾರರನ್ನು ಸೆಳೆಯುವ ರಾಜಕೀಯ ಪೈಪೋಟಿ ಈಗಾಗಲೇ ತೀವ್ರಗೊಂಡಿದೆ. ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ಮಹಿಳೆಯರಿಗೆ ನಗದು ನೆರವು ನೀಡುವ ಯೋಜನೆಯನ್ನು ಬಿಜೆಪಿ ಸರ್ಕಾರ ಪರಿಗಣಿಸುತ್ತಿದೆ ಎಂಬ ವರದಿಗಳ ಬೆನ್ನಲ್ಲೇ, ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ಹೊಸ ಘೋಷಣೆ ಮಾಡಿದ್ದಾರೆ. ಎಸ್ಪಿ ಅಧಿಕಾರಕ್ಕೆ ಬಂದರೆ ಪ್ರತಿ ಮಹಿಳೆಗೆ ವರ್ಷಕ್ಕೆ 40,000 ರೂ. ಆರ್ಥಿಕ ನೆರವು ನೀಡುವುದಾಗಿ ಅವರು ಭರವಸೆ ನೀಡಿದ್ದಾರೆ.

ಉತ್ತರ ಪ್ರದೇಶದಲ್ಲಿ ಮಹಿಳೆಯರನ್ನು ಕೇವಲ ಕಲ್ಯಾಣ ಯೋಜನೆಗಳ ಫಲಾನುಭವಿಗಳಾಗಿ ನೋಡದೆ, ಪ್ರತ್ಯೇಕ ಹಾಗೂ ನಿರ್ಣಾಯಕ ಮತಬ್ಯಾಂಕ್ ಆಗಿ ರಾಜಕೀಯ ಪಕ್ಷಗಳು ಪರಿಗಣಿಸುತ್ತಿರುವುದಕ್ಕೆ ಈ ಬೆಳವಣಿಗೆ ಸಾಕ್ಷಿಯಾಗಿದೆ.

ಏಪ್ರಿಲ್ 10ರಂದು ಪ್ರಕಟವಾದ ಅಂತಿಮ ಮತದಾರರ ಪಟ್ಟಿಯ ಪ್ರಕಾರ, ಉತ್ತರ ಪ್ರದೇಶದಲ್ಲಿ ಒಟ್ಟು 13.39 ಕೋಟಿ ನೋಂದಾಯಿತ ಮತದಾರರಿದ್ದು, 6.09 ಕೋಟಿ ಮಹಿಳಾ ಮತದಾರರಿದ್ದಾರೆ. ಅಂದರೆ, ರಾಜ್ಯದ ಒಟ್ಟು ಮತದಾರರಲ್ಲಿ ಮಹಿಳೆಯರ ಪಾಲು ಶೇ 45.46ರಷ್ಟಿದೆ. ಪುರುಷ ಮತದಾರರ ಪ್ರಮಾಣ ಶೇ 54.54ರಷ್ಟಿದೆ. ರಾಜ್ಯದ 403 ವಿಧಾನಸಭಾ ಕ್ಷೇತ್ರಗಳಲ್ಲಿ ಮಹಿಳಾ ಮತದಾರರ ಒಲವು ಸ್ವಲ್ಪ ಪ್ರಮಾಣದಲ್ಲಿ ಬದಲಾದರೂ ಅದು ಚುನಾವಣಾ ಫಲಿತಾಂಶದ ಮೇಲೆ ದೊಡ್ಡ ಪರಿಣಾಮ ಬೀರಬಲ್ಲದು. ಹೀಗಾಗಿ 2027ರ ಚುನಾವಣೆಯಲ್ಲಿ ಮಹಿಳಾ ಮತಗಳನ್ನು ಸೆಳೆಯುವುದು ಬಿಜೆಪಿ ಮತ್ತು ಎಸ್ಪಿ ಸೇರಿದಂತೆ ಪ್ರಮುಖ ಪಕ್ಷಗಳಿಗೆ ಮಹತ್ವದ ರಾಜಕೀಯ ತಂತ್ರವಾಗಲಿದೆ.

ಬಿಜೆಪಿ ಸರ್ಕಾರ ಬಡ ಕುಟುಂಬಗಳ ಮಹಿಳೆಯರಿಗೆ ನೇರವಾಗಿ ಹಣ ವರ್ಗಾವಣೆ ಮಾಡುವ ಯೋಜನೆಯನ್ನು ಪರಿಗಣಿಸುತ್ತಿದೆ ಎಂಬ ವರದಿಗಳು ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿವೆ. ಕುಟುಂಬಗಳಿಗೆ ನೇರವಾಗಿ ತಲುಪುವ ಕಲ್ಯಾಣ ಯೋಜನೆಗಳ ಮೂಲಕ ಮತದಾರರೊಂದಿಗೆ ಸಂಪರ್ಕ ಸಾಧಿಸುತ್ತಿರುವ ಬಿಜೆಪಿಗೆ, ಮಹಿಳೆಯರನ್ನು ಗುರಿಯಾಗಿಸಿಕೊಂಡ ನಗದು ನೆರವು ಯೋಜನೆ ಮತ್ತೊಂದು ಪ್ರಮುಖ ಚುನಾವಣಾ ಅಸ್ತ್ರವಾಗುವ ಸಾಧ್ಯತೆಯಿದೆ. ಆದರೆ, ಈ ವರದಿಯನ್ನೇ ಆಧಾರವಾಗಿಸಿ ಕೊಂಡು ಅಖಿಲೇಶ್ ಯಾದವ್ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಮಹಿಳೆಯರಿಗೆ 20,000 ರೂ. ನೀಡುವ ಪ್ರಸ್ತಾವನೆಯನ್ನು ಅವರು ಜುಮ್ಲಾ ಎಂದು ಟೀಕಿಸಿದ್ದು, ಚುನಾವಣೆಯಲ್ಲಿ ಮತ ಕೇಳಲು ಬಿಜೆಪಿಯ ಬಳಿ ಹಣವೊಂದೇ ಉಳಿದಿದೆ ಎಂದು ಆರೋಪಿಸಿದ್ದಾರೆ.



ಬಿಜೆಪಿ ತನ್ನ ಯೋಜನೆಯನ್ನು ಅಧಿಕೃತವಾಗಿ ಘೋಷಿಸುವ ಮುನ್ನವೇ ಎಸ್ಪಿ ತನ್ನದೇ ಆದ ಮಾನದಂಡವನ್ನು ನಿಗದಿಪಡಿಸಲು ಮುಂದಾಗಿದೆ.

ಬಿಜೆಪಿ 20,000 ಅಥವಾ ಅದಕ್ಕಿಂತ ಕಡಿಮೆ ಮೊತ್ತದ ಯೋಜನೆ ಘೋಷಿಸಿದರೆ, ಎಸ್ಪಿ ಅದನ್ನು ಕಡಿಮೆ ನೆರವು ಎಂದು ಬಿಂಬಿಸಬಹುದು. ಮತ್ತೊಂದೆಡೆ ಬಿಜೆಪಿ ಹೆಚ್ಚಿನ ಮೊತ್ತ ಘೋಷಿಸಿದರೆ, ಚುನಾವಣೆ ಕಲ್ಯಾಣ ಯೋಜನೆಗಳ ಭರವಸೆಗಳ ನಡುವಿನ ಪೈಪೋಟಿಯಾಗಿ ಬದಲಾಗುವ ಸಾಧ್ಯತೆಯಿದೆ. ಮಹಿಳೆಯರಿಗೆ ನೆರವು ನೀಡುವುದಷ್ಟೇ ಮುಖ್ಯವಲ್ಲ; ಎಷ್ಟು ಹಣ, ಯಾವ ಷರತ್ತುಗಳಲ್ಲಿ ಮತ್ತು ಎಷ್ಟು ನಿರಂತರವಾಗಿ ನೀಡಲಾಗುತ್ತದೆ ಎಂಬುದೂ ಚುನಾವಣಾ ಚರ್ಚೆಯ ಭಾಗವಾಗಬೇಕು ಎಂಬ ಸಂದೇಶವನ್ನು ಅಖಿಲೇಶ್ ನೀಡಲು ಪ್ರಯತ್ನಿಸುತ್ತಿದ್ದಾರೆ.

ಮಹಿಳೆಯರಿಗೆ ನೇರವಾಗಿ ಹಣ ನೀಡುವ ಚುನಾವಣಾ ಭರವಸೆ ಉತ್ತರ ಪ್ರದೇಶಕ್ಕೆ ಮಾತ್ರ ಸೀಮಿತವಾಗಿಲ್ಲ. ಇತ್ತೀಚಿನ ವರ್ಷಗಳಲ್ಲಿ ಹಲವು ರಾಜ್ಯಗಳ ವಿಧಾನಸಭಾ ಚುನಾವಣೆಗಳಲ್ಲಿ ಮಹಿಳಾ ಮತಗಳನ್ನು ಸೆಳೆಯಲು ರಾಜಕೀಯ ಪಕ್ಷಗಳು ನೇರ ನಗದು ವರ್ಗಾವಣೆ ಯೋಜನೆಗಳನ್ನು ಪ್ರಮುಖ ಚುನಾವಣಾ ಅಸ್ತ್ರವನ್ನಾಗಿ ಬಳಸಿವೆ. ಕರ್ನಾಟಕದಲ್ಲಿ 2023ರ ವಿಧಾನಸಭಾ ಚುನಾವಣೆಗೆ ಮುನ್ನ ಕಾಂಗ್ರೆಸ್, ಕುಟುಂಬದ ಮಹಿಳಾ ಮುಖ್ಯಸ್ಥರಿಗೆ ತಿಂಗಳಿಗೆ 2,000 ನೀಡುವ ಗೃಹಲಕ್ಷ್ಮಿ ಯೋಜನೆಯನ್ನು ಭರವಸೆ ನೀಡಿತ್ತು.

ಮಹಾರಾಷ್ಟ್ರದಲ್ಲಿ 2024ರ ವಿಧಾನಸಭಾ ಚುನಾವಣೆಯ ವೇಳೆ ಮಹಾಯುತಿ ಸರ್ಕಾರದ ಮುಖ್ಯಮಂತ್ರಿ ಮಾಝಿ ಲಾಡ್ಕಿ ಬಹಿನ್ ಯೋಜನೆ ಪ್ರಮುಖ ಚುನಾವಣಾ ವಿಷಯವಾಗಿತ್ತು. ಈ ಯೋಜನೆಯಡಿ ಅರ್ಹ ಮಹಿಳೆಯರಿಗೆ ತಿಂಗಳಿಗೆ ?1,500 ನೀಡಲಾಗುತ್ತದೆ. ಪಶ್ಚಿಮ ಬಂಗಾಳದಲ್ಲಿ ತೃಣಮೂಲ ಕಾಂಗ್ರೆಸ್ ಸರ್ಕಾರದ ಲಕ್ಷ್ಮೀರ್ ಭಂಡಾರ್ ಯೋಜನೆಯಡಿ ನೀಡುವ ನೆರವನ್ನು 2026ರ ವಿಧಾನಸಭಾ ಚುನಾವಣೆಗೂ ಮುನ್ನ ಫೆಬ್ರವರಿಯಿಂದ ತಿಂಗಳಿಗೆ 500ರಷ್ಟು ಹೆಚ್ಚಿಸಲಾಯಿತು. ಆದರೆ, ಇಂತಹ ಯೋಜನೆಗಳ ಅನುಷ್ಠಾನವೂ ಸರ್ಕಾರಗಳಿಗೆ ಸವಾಲಾಗಿ ಪರಿಣಮಿಸಿದೆ. ಕರ್ನಾಟಕದ ಗೃಹಲಕ್ಷ್ಮಿ ಯೋಜನೆ ಆರಂಭವಾದ ಬಳಿಕ ಪಡಿತರ ಚೀಟಿ, ಆಧಾರ್ ಜೋಡಣೆ ಮತ್ತು ಬ್ಯಾಂಕ್ ಖಾತೆಗಳಿಗೆ ಸಂಬಂಧಿಸಿದ ತಾಂತ್ರಿಕ ಸಮಸ್ಯೆಗಳಿಂದ ಫಲಾನುಭವಿಗಳು ತೊಂದರೆ ಎದುರಿಸಿದ್ದರು. ಕೆಲವು ಜಿಲ್ಲೆಗಳಲ್ಲಿ ಹಣ ಪಾವತಿಯಲ್ಲಿ ವಿಳಂಬವೂ ವರದಿಯಾಗಿತ್ತು.

ಮಹಾರಾಷ್ಟ್ರದ ಲಾಡ್ಕಿ ಬಹಿನ್ ಯೋಜನೆಯಲ್ಲೂ ಕಡ್ಡಾಯ ಇ-ಕೆವೈಸಿ ಹಾಗೂ ಆಧಾರ್, ಬ್ಯಾಂಕ್ ಖಾತೆ ಪರಿಶೀಲನೆ ಯಿಂದ ಕೆಲವು ಅರ್ಹ ಫಲಾನುಭವಿಗಳಿಗೆ ಹಣ ಪಡೆಯುವಲ್ಲಿ ವಿಳಂಬವಾಗಿದೆ. ಮಾಹಿತಿ ಹೊಂದಾಣಿಕೆಯಾಗದಿರುವುದು, ತಪ್ಪು ವಿವರಗಳ ಸಲ್ಲಿಕೆ ಹಾಗೂ ತಾಂತ್ರಿಕ ಸಮಸ್ಯೆಗಳು ಇದಕ್ಕೆ ಕಾರಣವೆಂದು ಅಧಿಕಾರಿಗಳು ತಿಳಿಸಿದ್ದರು. 2022ರ ಉತ್ತರ ಪ್ರದೇಶ ವಿಧಾನಸಭಾ ಚುನಾವಣೆಯಲ್ಲಿ ಒಟ್ಟು 559 ಮಹಿಳೆಯರು ಸ್ಪರ್ಧಿಸಿದ್ದರು. ಕಾಂಗ್ರೆಸ್ 155, ಬಿಜೆಪಿ 45, ಬಿಎಸ್ಪಿ 38 ಹಾಗೂ ಎಸ್ಪಿ ಸುಮಾರು 42 ಮಹಿಳಾ ಅಭ್ಯರ್ಥಿಗಳನ್ನು ಕಣಕ್ಕಿಳಿಸಿತ್ತು. ಆದರೆ, ಗೆಲುವು ಸಾಧಿಸಿದವರು ಕೇವಲ 47 ಮಂದಿ. ಕಾಂಗ್ರೆಸ್ನ ಪ್ರಿಯಾಂಕಾ ಗಾಂಧಿ ವಾದ್ರಾ ನೇತೃತ್ವದಲ್ಲಿ ಲಡ್ಕಿ ಹೂಂ, ಲಡ್ ಸಕ್ತಿ ಹೂಂ ಎಂಬ ಘೋಷಣೆಯೊಂದಿಗೆ ಮಹಿಳಾ ಪ್ರಾತಿನಿಧ್ಯಕ್ಕೆ ಪಕ್ಷ ಒತ್ತು ನೀಡಿತ್ತು. ಮಹಿಳೆಯರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆಯಾಗುವ ಹಣವು, ಸಾಮಾನ್ಯ ಕುಟುಂಬ ಕಲ್ಯಾಣ ಯೋಜನೆಗಳಿಗಿಂತ ಸರ್ಕಾರ ಮತ್ತು ಫಲಾನುಭವಿಯ ನಡುವೆ ಹೆಚ್ಚು ನೇರವಾದ ರಾಜಕೀಯ ಸಂಬಂಧವನ್ನು ನಿರ್ಮಿಸಬಹುದು ಎಂಬ ಲೆಕ್ಕಾಚಾರ ಪಕ್ಷಗಳಲ್ಲಿದೆ.

2027ರ ಉತ್ತರ ಪ್ರದೇಶ ಚುನಾವಣೆಯಲ್ಲಿ ಈ ಲೆಕ್ಕಾಚಾರ ಎಷ್ಟರ ಮಟ್ಟಿಗೆ ಮತವಾಗಿ ಪರಿವರ್ತನೆಯಾಗಲಿದೆ ಎಂಬುದು ಈಗ ಕುತೂಹಲ ಮೂಡಿಸಿದೆ.

ಹಾರ್ದಿಕ ಅಭಿನಂದನೆಗಳು



ಕರ್ನಾಟಕ ವಿಧಾನ ಪರಿಷತ್ತಿನ ನೂತನ ಸಭಾಪತಿಗಳಾಗಿ ಆಯ್ಕೆಯಾದ

# ಶ್ರೀ ಸಲೀಂ ಅಹಮ್ಮದ್

ಅವರಿಗೆ

ಹೃತ್ಪೂರ್ವಕ ಅಭಿನಂದನೆಗಳು.

ಶುಭಕೋರುವವರು : ಅಭಿಮಾನಿಗಳು ಮತ್ತು ಹಿತೈಷಿಗಳು
ಬೆಂಗಳೂರು, ಕರ್ನಾಟಕ

# ಬೆಂಗಳೂರಿನಲ್ಲಿ ಜನವಿರೋಧಿ ಪಾರ್ಕಿಂಗ್ ನೀತಿ ಹಿಂಪಡೆಯದಿದ್ದರೆ ಸರ್ಕಾರಕ್ಕೆ ತಕ್ಕಪಾಠ: ಅಶೋಕ್ ಎಚ್ಚರಿಕೆ

**ಬೆಂಗಳೂರು, ಆ.14:** ಮನೆ ಮುಂದೆ ವಾಹನ ನಿಲ್ಲಿಸುವುದಕ್ಕೂ ಶುಲ್ಕ ವಿಧಿಸುವ ಜನವಿರೋಧಿ ಪಾರ್ಕಿಂಗ್ ನೀತಿಯನ್ನು ರಾಜ್ಯ ಸರ್ಕಾರ ತಕ್ಷಣವೇ ಹಿಂಪಡೆಯಬೇಕು. ಇಲ್ಲವಾದರೆ ಮುಂಬರುವ ಜಿಬಿಎ ಚುನಾವಣೆಯಲ್ಲಿ ಬೆಂಗಳೂರಿನ ಜನತೆ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕಪಾಠ ಕಲಿಸಲಿದ್ದಾರೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಎಚ್ಚರಿಕೆ ನೀಡಿದ್ದಾರೆ.

ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸರ್ಕಾರದ ವಿರುದ್ಧ ಪೋಸ್ಟ್ ಮಾಡಿರುವ ಅವರು, ರಾಜಧಾನಿ ಬೆಂಗಳೂರಿನಲ್ಲಿ ಮನೆಗಳ ಮುಂಭಾಗದ ರಸ್ತೆಯಲ್ಲಿ ಸ್ವಂತ ವಾಹನ ನಿಲ್ಲಿಸುವುದಕ್ಕೂ ವಾರ್ಷಿಕ ಶುಲ್ಕ ವಿಧಿಸುವ ಉದ್ದೇಶ ಹೊಂದಿರುವ ಜಿಬಿಎ ಪಾರ್ಕಿಂಗ್ ನಿಯಮಗಳ ಕುರಿತು ವ ರಾಜ್ಯ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನ ಜನರು ಈಗಾಗಲೇ ವಿವಿಧ ರೀತಿಯ ತೆರಿಗೆ ಹಾಗೂ ಶುಲ್ಕಗಳನ್ನು ಪಾವತಿಸುತ್ತಿದ್ದು, ತಮ ಸ್ವಂತ ಮನೆಯ ಮುಂದೆ ವಾಹನ ನಿಲ್ಲಿಸುವುದಕ್ಕೂ ವರ್ಷಕ್ಕೆ 15 ಸಾವಿರ ರೂ.ಗಳಿಂದ 25 ಸಾವಿರ ರೂ.ಗಳವರೆಗೆ ಶುಲ್ಕ ವಿಧಿಸಲು ಸರ್ಕಾರ ಮುಂದಾಗಿರುವುದು ಜನವಿರೋಧಿ ನೀತಿ ಎಂದು ಅವರು ಆರೋಪಿಸಿದ್ದಾರೆ.

ಮನೆ ಮುಂದಿನ ಪಾರ್ಕಿಂಗ್‌ಗೂ ಟ್ಯಾಕ್ಸ್ ವಿಧಿಸುವ ಸರ್ಕಾರದ ಹೊಸ ಸ್ಕೆಚ್ ಎಂದು ಆಕ್ಷೇಪ ವ್ಯಕ್ತಪಡಿಸಿರುವ ಆರ್.ಅಶೋಕ್, ಖಾಲಿ ನಿವೇಶನಗಳಲ್ಲಿ ಕಸ ವಿಲೇವಾರಿ



ಸೇರಿದಂತೆ ವಿವಿಧ ವಿಚಾರಗಳಲ್ಲಿ ಜನರಿಂದ ಹಣ ವಸೂಲಿ ಮಾಡುವ ಪ್ರಯತ್ನಗಳ ಬೆನ್ನಲ್ಲೇ ಇದೀಗ ಮನೆಗಳ ಮುಂಭಾಗದ ಪಾರ್ಕಿಂಗ್ ಮೇಲೂ ಸರ್ಕಾರದ ಕಣ್ಣು ಬಿದ್ದಿದೆಯೇ ಎಂದು ಪ್ರಶ್ನಿಸಿದ್ದಾರೆ.

ಬೆಂಗಳೂರಿನ ರಸ್ತೆಗಳ ದುಸ್ಥಿತಿಯನ್ನೂ ಪ್ರಸ್ತಾಪಿಸಿರುವ ಅವರು, ನಗರದಲ್ಲಿ ಸಾಲು ಸಾಲು ಗುಂಡಿಗಳಿದ್ದು, ಮಳೆ ಬಂದಾಗ ರಸ್ತೆಗಳು ಜಲಾವೃತವಾಗುತ್ತಿವೆ. ಇಂತಹ ಪರಿಸ್ಥಿತಿಯಲ್ಲಿ ರಸ್ತೆಗಳನ್ನು ಸಮರ್ಪಕವಾಗಿ ಅಭಿವದ್ಧಿಪಡಿಸದೆ, ಜನರಿಂದ ಪಾರ್ಕಿಂಗ್ ಶುಲ್ಕ ವಸೂಲಿ ಮಾಡಲು ಸರ್ಕಾರಕ್ಕೆ ಯಾವ ನೈತಿಕ ಹಕ್ಕಿದೆ ಎಂದು ಪ್ರಶ್ನಿಸಿದ್ದಾರೆ.

ಪಾರ್ಕಿಂಗ್ ದರ ಹೆಚ್ಚಿಸುವ ಬದಲು ಸರ್ಕಾರ ಮೊದಲು ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಸುಧಾರಿಸಬೇಕು. ಮೆಟ್ರೋ ಕಾಮಗಾರಿಗಳಿಗೆ ವೇಗ ನೀಡುವುದರ ಜತೆಗೆ ಬಿಎಂಟಿಸಿ ಬಸ್‌ಗಳ ಸಂಖ್ಯೆಯನ್ನು ಹೆಚ್ಚಿಸಿ ಜನರಿಗೆ ಉತ್ತಮ ಸಾರ್ವಜನಿಕ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.



ಕೇಂದ್ರ ಸಂಗೀತ ನಾಟಕ ಅಕಾಡಮಿ ಪ್ರಶಸ್ತಿ ಪುರಸ್ಕೃತ ಕನ್ನಡದ ಮಹನೀಯರನ್ನು ಶುಕ್ರವಾರ ದೆಹಲಿ ಕರ್ನಾಟಕ ಸಂಘದ ವತಿಯಿಂದ ಸನ್ಮಾನಿಸಲಾಯಿತು.

# ಮಲ್ಲಿಕಾರ್ಜುನ ಖರ್ಗೆಗೆ ಅಪಮಾನ ಖಂಡಿಸಿ ಕಾಂಗ್ರೆಸ್ ಮುಖಂಡರಿಂದ ಪ್ರತಿಭಟನೆ

**ಬೆಂಗಳೂರು, ಆ.14:** ದೇಶದಲ್ಲಿ ಆಡಳಿತ ನಡೆಸುತ್ತಿರುವ ದಲಿತ ವಿರೋಧಿ ಬಿಜೆಪಿ ಸರ್ಕಾರ ವಿರೋಧ ಪಕ್ಷದ ನಾಯಕರನ್ನು ಹಾಗೂ ದಲಿತ ನಾಯಕರನ್ನು ಅಪಮಾನಿಸಿರುವುದು ಅತ್ಯಂತ ಖಂಡನೀಯ ಕೂಡಲೇ ಪ್ರಜಾಪ್ರಭುತ್ವ ವಿರೋಧಿ ಸರ್ಕಾರವನ್ನು ವಜಾಗೊಳಿಸಬೇಕೆಂದು ಆಗ್ರಹಿಸಿ ಕಾಂಗ್ರೆಸ್ ಮುಖಂಡರು ನಗರದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿದರು.

ಉತ್ತರಾಖಂಡದ ರಾಮಲೀಲಾ ಮೈದಾನದಲ್ಲಿ ಎಐಸಿಸಿಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅರವರ ಭಾಷಣದ ನಂತರ ಶುದ್ದಿಕರಣ ಮಾಡುವ ಮೂಲಕ ದಲಿತ ಸಮುದಾಯಕ್ಕೆ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ಸ್ಥಾನಕ್ಕೆ ಅಪಮಾನಗೊಳಿಸಿರುವ ಬಿಜೆಪಿಯ ಸಂಘಟನೆಯ ಕಿಡಿಗೇಡಿಗಳನ್ನು ಕೂಡಲೇ ಬಂಧಿಸಬೇಕು. ಪ್ರಜಾಪ್ರಭುತ್ವದ ಕಗ್ಗೊಲೆಗೆ ಮುಂದಾಗಿರುವ ಬಿಜೆಪಿಯ ಉತ್ತರಖಂಡ ಸರ್ಕಾರವನ್ನು ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ದಲಿತರನ್ನು ಅಪಮಾನಿಸುವುದೇ ಬಿಜೆಪಿಯ ಒಂದಂಶದ ಕಾರ್ಯಕ್ರಮವಾಗಿದೆ. ಸಂಘ ಪರಿವಾರದವರು ಮೊದಲಿನಿಂದಲೂ ದಲಿತರನ್ನು ಅಪಮಾನಿಸುತ್ತಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಗೃಹ ಸಚಿವ ಅಮಿತ್ ಶಾ ತಮ್ಮ ಕಣ್ಣಾರೆ ಇಂತಹ ಹೇಯ ಕೃತ್ಯಗಳನ್ನು ಕಂಡರೂ ಸಹ ಕ್ರಮ ಕೈಗೊಳ್ಳದೆ ವರ್ತಿಸಿರುತ್ತಿರುವುದು ಅಂಬೇಡ್ಕರ್




ರವರ ಸಂವಿಧಾನಕ್ಕೆ ಬಗೆದ ದ್ರೋಹವಾಗಿದೆ. ಪ್ರಧಾನಿ ಮೋದಿ ಹಾಗೂ ಗೃಹ ಸಚಿವ ಅಮಿತ್ ಷಾ ದೇಶದ ದಲಿತರಲ್ಲಿ ಕ್ಷಮೆ ಕೋರಬೇಕು. ರಾಷ್ಟ್ರಪತಿ ಅವರು ಉತ್ತರಖಂಡ ಸರ್ಕಾರವನ್ನು ವಜಾಗೊಳಿಸಬೇಕೆಂದು ಆಗ್ರಹಿಸಿದರು.

# ಎರಡು ವಾರದಲ್ಲೇ ಜಲಾಶಯಗಳಿಗೆ ಹರಿದುಬಂತು 175 ಟಿಎಂಸಿ ನೀರು

**ಬೆಂಗಳೂರು, ಆ.14:** ಕರ್ನಾಟಕ ಮಾತ್ರವಲ್ಲದೇ ನೆರೆಯ ಕೇರಳ ಹಾಗೂ ಮಹಾರಾಷ್ಟ್ರದಲ್ಲಿ ಈ ತಿಂಗಳ ಎರಡು ವಾರದಲ್ಲಿ ಮಳೆಯಾಗಿರುವುದರಿಂದ ನಮ್ಮ ಭಾಗದ ಜಲಾಶಯಗಳಿಗೂ ಉತ್ತಮ ನೀರು ಹರಿದುಬಂದಿದೆ.

ಜಲಸಂಪನ್ಮೂಲ ಇಲಾಖೆಯಲ್ಲಿ ಲಭ್ಯ ಇರುವ ಮಾಹಿತಿ ಪ್ರಕಾರ ಆಗಸ್ಟ್ 1ರಿಂದ ಆಗಸ್ಟ್ 14ರವರೆಗೆ ಪ್ರಮುಖ 14 ಜಲಾಶಯಗಳಿಗೆ 175.28 ಟಿಎಂಸಿ ನೀರು ಹರಿದು ಬಂದಿದೆ. ಆಗಸ್ಟ್ 14ರಂದು ಜಲಾಶಯಗಳಲ್ಲಿ 660.66 (ಶೇ.74) ಟಿಎಂಸಿ ನೀರು ಸಂಗ್ರಹವಾಗಿದ್ದರೆ, ಆಗಸ್ಟ್ 1ರಂದು 485.38 (ಶೇ.54) ಟಿಎಂಸಿ ನೀರು ಸಂಗ್ರಹವಿತ್ತು.

ಕಾವೇರಿ ಕಣಿವೆಯ ನಾಲ್ಕು ಜಲಾಶಯಗಳಿಗೆ ಈ ಅವಧಿಯಲ್ಲಿ 20 ಟಿಎಂಸಿ ನೀರು ಹರಿದು ಬಂದಿದ್ದರೆ, ಕೃಷ್ಣಾ ಕಣಿವೆಯ ಆರು ಜಲಾಶಯಗಳಿಗೆ 97.19 ಟಿಎಂಸಿ ಹಾಗೂ ಮಲೆನಾಡು ಭಾಗದ ಮೂರು ಜಲಾಶಯಗಳಿಗೆ 58.33 ಟಿಎಂಸಿ ನೀರು ಸೇರಿದೆ.ಇದಲ್ಲದೇ ಆಲಮಟ್ಟಿ, ನಾರಾಯಣಪುರ, ಕಬಿನಿ, ಹಾರಂಗಿ ಸಹಿತ ವಿವಿಧ ಜಲಾಶಯಗಳಿಂದಲೂ ಈ ಅವಧಿಯಲ್ಲಿ ಹೆಚ್ಚಿನ ನೀರು ಹರಿದು ಹೋಗಿದೆ. ಮುಖ್ಯವಾಗಿ ಕಬಿನಿ ಜಲಾಶಯದಿಂದ ತಮಿಳುನಾಡು ಭಾಗಕ್ಕೆ, ನಾರಾಯಣಪುರದಿಂದ ತೆಲಂಗಾಣ ಭಾಗಕ್ಕೆ ಹೆಚ್ಚಿನ



ನೀರು ಹರಿದಿದೆ. ಈ ಅವಧಿಯಲ್ಲಿ ತುಂಗಭದ್ರಾ ಜಲಾಶಯಕ್ಕೆ 51 ಟಿಎಂಸಿ, ಭದ್ರಾ ಜಲಾಶಯಕ್ಕೆ 15 ಟಿಎಂಸಿ, ಲಿಂಗನಮಕ್ಕಿ ಜಲಾಶಯಕ್ಕೆ 30 ಟಿಎಂಸಿ, ಸೂಪಾ ಜಲಾಶಯಕ್ಕೆ 24 ಟಿಎಂಸಿ, ಕೆಆರ್ ಎಸ್ ಜಲಾಶಯಕ್ಕೆ 13 ಟಿಎಂಸಿ, ಘಟಪ್ರಭಾ ಜಲಾಶಯಕ್ಕೆ 14 ಟಿಎಂಸಿ, ಹೇಮಾವತಿ ಜಲಾಶಯಕ್ಕೆ 6 ಟಿಎಂಸಿ ನೀರು ಹರಿದು ಬಂದಿದೆ. ಹಾರಂಗಿ ಜಲಾಶಯದಿಂದ 5 ಟಿಎಂಸಿ, ಕಬಿನಿ ಜಲಾಶಯಕ್ಕೆ 15 ಟಿಎಂಸಿ, ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯಕ್ಕೆ 75 ಟಿಎಂಸಿಗೂ ಅಧಿಕ ನೀರು ಸಂಗ್ರಹವಾಗಿ ಹರಿದು ಹೋಗಿದೆ.

ಈ ಬಾರಿ ಎರಡೂವರೆ ತಿಂಗಳ ಅವಧಿಯಲ್ಲಿ ಮೂರು ಬಾರಿ ಮಾತ್ರ ಉತ್ತಮ ಮಳೆ ಬಂದಿದೆ. ಜುಲೈ ಮೊದಲ ವಾರ, ಜುಲೈ ಕೊನೆ ಹಾಗೂ ಆಗಸ್ಟ್ ಮೊದಲ ವಾರದಲ್ಲಿ ಉತ್ತಮ ಮಳೆಯಾಗಿದೆ.ಸದ್ಯ ಎಲ್ಲಾ ಜಲಾಶಯಗಳಲ್ಲಿ 660 ಟಿಎಂಸಿ ನೀರು ಸಂಗ್ರಹವಾಗಿದ್ದು, ಕಳೆದ ವರ್ಷ ಇದೇ ದಿನ 775 ಟಿಎಂಸಿ ನೀರು ಲಭ್ಯವಿತ್ತು. ಈಗಲೂ 1.15 ಲಕ್ಷ ನೀರು ಒಳಹರಿವು ಇದ್ದರೆ, 45 ಸಾವಿರ ಕ್ಯೂಸೆಕ್ ಹೊರ ಬಿಡಲಾಗುತ್ತಿದೆ.ಇದರಲ್ಲಿ ನಾರಾಯಣಪುರ, ಆಲಮಟ್ಟಿ, ಘಟಪ್ರಭಾ, ಹಾರಂಗಿ, ಕಬಿನಿ ಜಲಾಶಯಗಳು ಭರ್ತಿಯಾಗಿವೆ. ತುಂಗಭದ್ರಾದಲ್ಲಿ ಶೇ 85, ಹೇಮಾವತಿಯಲ್ಲಿ ಶೇ 86 ನೀರು ಸಂಗ್ರಹವಿದೆ. ಕೃಷ್ಣರಾಜ ಸಾಗರದಲ್ಲಿ ಶೇ 64, ಮಲಪ್ರಭಾ ಜಲಾಶಯದಲ್ಲಿ ಶೇ 57, ಲಿಂಗನಮಕ್ಕಿ ಹಾಗೂ ವಾರಾಹಿಯಲ್ಲಿ ಶೇ 53, ಸೂಪಾ ಜಲಾಶಯದಲ್ಲಿ ಶೇ 55ರಷ್ಟು ನೀರು ಸಂಗ್ರಹವಾಗಿದೆ.

# ಸಾರಿಗೆ ನೌಕರರ ವೇತನ ಬಾಕಿ 170 ಕೋಟಿ ರೂ. ಬಿಡುಗಡೆ: ಸಚಿವ ಬೈರತಿ ಸುರೇಶ್

**ಬೆಂಗಳೂರು, ಆ.14:** ರಾಜ್ಯ ಸರ್ಕಾರಿ ಸ್ವಾಮ್ಯದ ನಾಲ್ಕು ಸಾರಿಗೆ ನಿಗಮಗಳ ನೌಕರರಿಗೆ ಸಾರಿಗೆ ಸಚಿವ ಬೈರತಿ ಸುರೇಶ್ ವರ ಮಹಾಲಕ್ಷ್ಮಿ ಹಬ್ಬಕ್ಕೂ ಮುನ್ನವೇ ಖುಷಿ ಸುದ್ದಿ ನೀಡಿದ್ದು, ಬಾಕಿ ಇರುವ ವೇತನದ ಪೈಕಿ 170 ಕೋಟಿ ರೂಪಾಯಿಗಳನ್ನು ಶುಕ್ರವಾರವೇ ಬಿಡುಗಡೆ ಮಾಡಿರುವುದಾಗಿ ಘೋಷಿಸಿದ್ದಾರೆ.

ಬೆಂಗಳೂರಿನ ಕೆ.ಎಸ್.ಆರ್.ಟಿ.ಸಿ ಕೇಂದ್ರ ಕಚೇರಿಯಲ್ಲಿ ಶುಕ್ರವಾರ 15ಕ್ಕೂ ಹೆಚ್ಚು ಕಾರ್ಮಿಕ ಸಂಘಟನೆಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಅವರ ಬೇಡಿಕೆಗಳ ಬಗ್ಗೆ ಸಾರಿಗೆ ಸಚಿವರು ಚರ್ಚಿಸಿದರು.

ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ರಾಜ್ಯ ಸರ್ಕಾರ 2025ರಲ್ಲಿ ವೇತನ ಪರಿಷ್ಕರಣೆ ಮಾಡಿದ್ದರಿಂದ 1221 ಕೋಟಿ ರೂಪಾಯಿಗಳನ್ನು ನೌಕರರಿಗೆ ಪಾವತಿಸ ಬೇಕಿದ್ದು, ಅದರಲ್ಲಿ 450 ಕೋಟಿ ರೂಪಾಯಿಗಳನ್ನು ಪಾವತಿಸಲಾಗಿದೆ. ಇನ್ನೂ 821 ಕೋಟಿ ರೂಪಾಯಿಗಳು ಬಾಕಿ ಇದ್ದ ಬಗ್ಗೆ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರೊಂದಿಗೆ ಚರ್ಚೆ ನಡೆಸಲಾಗಿದ್ದು, ತಕ್ಷಣವೇ




## ಇವಿ ಬಸ್ ರದ್ದತಿ ಇಲ್ಲ

**ಶಕ್ತಿ ಹಣವನ್ನು ಹಂತ ಹಂತವಾಗಿ ಬಿಡುಗಡೆ ಮಾಡಲಾಗುತ್ತದೆ. ಎಲೆಕ್ಟ್ರಿಕ್ ಬಸ್‌ಗಳನ್ನು ಯಾವುದೇ ಕಾರಣಕ್ಕೂ ರದ್ದು ಮಾಡುವುದಿಲ್ಲ. ಪೂರ್ವ ನಿಗದಿಯಂತೆ ಪಿಎಂ ಯೋಜನೆಯಡಿ ಕೇಂದ್ರ ಸರ್ಕಾರದಿಂದ 4500 ಬಸ್‌ಗಳನ್ನು ಪಡೆಯಲಾಗುತ್ತದೆ. ಈ ಬಗ್ಗೆ ಮುಂದಿನ ಸಚಿವ ಸಂಪುಟದಲ್ಲಿ ಅಂತಿಮ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂದು ಬೈರತಿ ಸುರೇಶ್ ತಿಳಿಸಿದರು.**

170 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲು ಒಪ್ಪಿಗೆ ಸೂಚಿಸಿದ್ದಾರೆ. ಅದರಂತೆ ತಕ್ಷಣವೇ ಈ ಹಣವನ್ನು ಬಿಡುಗಡೆ ಮಾಡಿರುವುದಾಗಿ ಘೋಷಣೆ ಮಾಡಿದರು.

ಎಲ್ಲ ಕಾರ್ಮಿಕ ಸಂಘಟನೆಗಳ ಬೇಡಿಕೆಗಳ ಬಗ್ಗೆ ಚರ್ಚಿಸಲಾಗಿದೆ. ಈ ಹಿಂದೆ ಮಾಡಿದ್ದ ವೇತನ ಪರಿಷ್ಕರಣೆಯನ್ನು ಇನ್ನೂ 12 ತಿಂಗಳು ವಿಸ್ತರಿಸ ಬೇಕು, ನಾಲ್ಕು ವರ್ಷಗಳಿಗೊಮ್ಮೆ ವೇತನ ಪರಿಷ್ಕರಣೆ ಮಾಡುವುದು ಮತ್ತು ಹಲವು ವರ್ಷಗಳಿಂದ ಬಾಕಿ ಇರುವ

## ಹೊರೆಯಾಗದಂತೆ ಬಸ್ ಪ್ರಯಾಣದರ ಹೆಚ್ಚಳ

**ಈ ಹಿಂದೆ ಪ್ರಯಾಣ ದರ ಹೆಚ್ಚಳ ಮಾಡಿದ ನಂತರ 9ಕ್ಕೂ ಹೆಚ್ಚು ಬಾರಿ ತೈಲೋತ್ಪನ್ನಗಳ ಬೆಲೆ ಹೆಚ್ಚಳವಾಗಿದೆ. ಆದಾಗ್ಯೂ, ಸರ್ಕಾರಿ ಸ್ವಾಮ್ಯದ ಬಸ್‌ಗಳ ಪ್ರಯಾಣ ದರವನ್ನು ಹೆಚ್ಚಳ ಮಾಡಿಲ್ಲ. ಇದರಿಂದ ನಿಗಮಗಳಿಗೆ ಭಾರೀ ನಷ್ಟ ಉಂಟಾಗುತ್ತಿದೆ. ಈ ಹಿನ್ನೆಲೆಯಲ್ಲಿ ಹಿರಿಯ ಐಎಎಸ್ ಅಧಿಕಾರಿ ಅತುಲ್ ತಿವಾರಿ ನೇತೃತ್ವದಲ್ಲಿ ಬಸ್ ಪ್ರಯಾಣ ದರ ಹೆಚ್ಚಳದ ಬಗ್ಗೆ ಅಧ್ಯಯನ ನಡೆಸಲು ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿ ಸಾಧಕ–ಬಾಧಕಗಳ ಬಗ್ಗೆ ಅಧ್ಯಯನ ನಡೆಸಿ ವರದಿ ನೀಡಲಿದೆ. ಈ ವರದಿ ಬಗ್ಗೆ ಮುಖ್ಯಮಂತ್ರಿಗಳು ಮತ್ತು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಜನಸಾಮಾನ್ಯರಿಗೆ ಹೊರೆ ಆಗದ ರೀತಿಯಲ್ಲಿ ಪ್ರಯಾಣ ದರವನ್ನು ಹೆಚ್ಚಳ ಮಾಡಲಾಗುತ್ತದೆ ಎಂದು ಸಚಿವ ಬೈರತಿ ಸುರೇಶ್ ಸ್ಪಷ್ಟಪಡಿಸಿದರು.**

ಕಾರ್ಮಿಕ ಸಂಘಟನೆಗಳ ಚುನಾವಣೆಯನ್ನು ನಡೆಸುವುದು ಸೇರಿದಂತೆ ಇನ್ನಿತರೆ ವಿಚಾರಗಳ ಬಗ್ಗೆ ಸಭೆಯಲ್ಲಿ ವಿವರವಾಗಿ ಚರ್ಚೆ ನಡೆಸಲಾಗಿದೆ ಎಂದು ತಿಳಿಸಿದರು.

ಈ ಎಲ್ಲಾ ಬೇಡಿಕೆಗಳ ಈಡೇರಿಕೆಗಳ ಬಗ್ಗೆ ತಾವು ಮತ್ತು ಸರ್ಕಾರ ಸಕಾರಾತ್ಮಕವಾಗಿದೆ. ಆದರೆ ಹಣಕಾಸಿನ ವಿಚಾರವಾಗಿರುವುದರಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಆರ್ಥಿಕ ಇಲಾಖೆಯೊಂದಿಗೆ ಚರ್ಚಿಸಿ ಸಚಿವ ಸಂಪುಟದ ಮುಂದಿಟ್ಟು, ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಎಲ್ಲ ನೌಕರರಿಗೆ ಆರೋಗ್ಯ ವಿಮೆ –ಕೆ.ಎಸ್.ಆರ್.ಟಿ.ಸಿ ತನ್ನ ಸಿಬ್ಬಂದಿ ಮತ್ತು ನೌಕರರಿಗೆ ಆರೋಗ್ಯ ವಿಮೆಯನ್ನು ಜಾರಿಗೆ ತಂದಿದೆ. ಇದೆ ಮಾದರಿಯಲ್ಲಿ ಬಿ.ಎಂ.ಟಿ.ಸಿ, ಕೆ.ಕೆ.ಆರ್.ಟಿ.ಸಿ, ಎನ್.ಡಬ್ಲ್ಯೂ.ಕೆ.ಆರ್.ಟಿ.ಸಿ ನಿಗಮಗಳ ನೌಕರರಿಗೂ ಆರೋಗ್ಯ ವಿಮಾ ಯೋಜನೆಯನ್ನು ಜಾರಿಗೆ ತರಲಾಗುವುದು. ನಿವೃತ್ತರಿಗೆ ಉಚಿತ ಪ್ರಯಾಣ ಸಾರಿಗೆ ನಿಗಮಗಳ ನಿವೃತ್ತ ನೌಕರರಿಗೆ ವಾರ್ಷಿಕ 500 ರೂಪಾಯಿ ಪಡೆದು ಬಸ್ ಪಾಸ್ ವಿತರಿಸಲಾಗುತ್ತಿತ್ತು. ಇನ್ನೂ ಮುಂದೆ ಉಚಿತವಾಗಿ ಬಸ್‌ಪಾಸ್ ವಿತರಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

# ಕರಾರಸಾ ನಿಗಮ: ಗುಂಪು ವಿಮಾ ಯೋಜನೆ ಹಾಗೂ ಕಾರ್ಪೊರೇಟ್ ಸ್ಯಾಲರಿ ಪ್ಯಾಕೇಜ್ ವಿಮಾಚೆಕ್ ಪರಿಹಾರ ವಿತರಣಾ ಕಾರ್ಯಕ್ರಮ



**ಬೆಂಗಳೂರು, ಆ.14:** ಇಂದು ಸಾರಿಗೆ ಸಚಿವರು, ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಬೆಂ.ಮ.ಸಾಸಂಸ್ಥೆರವರು ನಿಗಮವು ತನ್ನ ಸಿಬ್ಬಂದಿ ಹಾಗೂ ಅವರ ಅವಲಂಭಿತರ ಕಲ್ಯಾಣಕ್ಕಾಗಿ ಜಾರಿಗೊಳಿಸಿರುವ ಯೋಜನೆಯಡಿ ರೂ.1 ಕೋಟಿ ಅಪಘಾತ ಪರಿಹಾರ ವಿಮೆಯ ಚೆಕ್ ವಿತರಣೆ ಮಾಡಿದರು.

ಸಚಿವರು ಮಾತನಾಡಿ, ಮೃತಪಟ್ಟ ಚಾಲನಾ ಸಿಬ್ಬಂದಿಗಳನ್ನು ಮರಳಿ ತರಲುಸಾಧ್ಯವಿಲ್ಲ. ಕುಟುಂಬದವರು ಹಣವನ್ನು ಬ್ಯಾಂಕಿನಲ್ಲಿ ಸ್ಥಿರ ಠೇವಣಿಯನ್ನು ಇಟ್ಟು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಹಾಗೂ ತಮ್ಮ ಮುಂದಿನ ಜೀವನಕ್ಕಾಗಿ ಕಾಪಾಡಿಕೊಳ್ಳಬೇಕು. ಅನುಕಂಪ ಆಧಾರದ ಮೇಲಿನ ಕೆಲಸಕ್ಕೆ ಅರ್ಜಿ ಸಲ್ಲಿಸಲು ತಿಳಿಸಿದರು. ನಿಗಮದ ಸಿಬ್ಬಂದಿಗಳ ಹಾಗೂ ಕುಟುಂಬದವರ ಹಿತಾಸಕ್ತಿ ಕಾಪಾಡಲು ನಾವು ನಿಮ್ಮೊಡನೆ ಸದಾ ಇರುವುದಾಗಿ ತಿಳಿಸಿದರು.

**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ:**

1. ಒಂದು ಕೋಟಿ ರೂ.ಗಳ ವೈಯಕ್ತಿಕ ಅಪಘಾತ ವಿಮಾ ಯೋಜನೆ

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ತನ್ನ ಸಿಬ್ಬಂದಿಗಳ ಅವಲಂಭಿತರ ಜೀವನಕ್ಕೆ ಆರ್ಥಿಕ ಭದ್ರತೆ ಒದಗಿಸುವ ಉದ್ದೇಶದಿಂದ ಕರ್ತವ್ಯದಲ್ಲಿರುವಾಗ ಅಥವಾ ಕರ್ತವ್ಯದಲ್ಲಿಲ್ಲದ ಸಂದರ್ಭದಲ್ಲಿ ಅಪಘಾತದಿಂದ ಮೃತಪಟ್ಟ ಅಥವಾ ಅಂಗ ನ್ಯೂನ್ಯತೆಗೆ ಒಳಗಾದಲ್ಲಿ ಕೋಟಿ ರೂ. ಅಪಘಾತ ವಿಮಾ ಪರಿಹಾರ ಒದಗಿಸುವ ಅಪಘಾತ ವಿಮಾ ಯೋಜನೆಯನ್ನು ಜಾರಿಗೆ ತಂದಿರುತ್ತದೆ.

☐ ಇದುವರೆವಿಗೂ 34 ಪ್ರಕರಣಗಳಲ್ಲಿ ಕುಟುಂಬದವರಿಗೆ ತಲಾ ಒಂದು ಕೋಟಿ ರೂ.ಗಳಂತೆ 34.00 ಕೋಟಿಗಳ ಅಪಘಾತ ವಿಮಾ ಮೊತ್ತವನ್ನು ವಿತರಿಸಲಾಗಿದೆ.

☐ ಕರ್ತವ್ಯನಿರತ ಅಪಘಾತದಲ್ಲಿ ಅಂಗನ್ಯೂನ್ಯತೆಗೊಂಡ ಒಂದು ಪ್ರಕರಣದಲ್ಲಿ 25.00 ಲಕ್ಷ ರೂ.ಗಳ ಪರಿಹಾರವನ್ನು ವಿತರಿಸಲಾಗಿದೆ.

☐ ಈ ದಿನ ಆರು ಪ್ರಕರಣಗಳಲ್ಲಿ ಮೃತರ ಅವಲಂಬಿತರಿಗೆ ತಲಾ ಒಂದು ಕೋಟಿ ರೂ.ಗಳಂತೆ ಒಟ್ಟು 6 ಕೋಟಿ ರೂ.ಗಳ ಅಪಘಾತ ವಿಮಾ ಮೊತ್ತವನ್ನು ವಿತರಿಸಲಾಯಿತು.

**2. ನೌಕರರಕುಟುಂಬಕಲ್ಯಾಣಯೋಜನೆ.**

☐ ಹೃದಯಾಘಾತ, ಕ್ಯಾನ್ಸರ್, ಸ್ಟ್ರೋಕ್ ಮತ್ತಿತರ ಕಾರಣಗಳಿಂದ ಮರಣವನ್ನಪ್ಪುವ ನೌಕರರ ಸಂಖ್ಯೆಯು ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗುತ್ತಿರುವ ವಿಷಯವನ್ನು ಮನಗಂಡು, ಈ ಕಾರಣದಿಂದ ಮೃತರಾಗುವ ಕುಟುಂಬದಅ ವಲಂಭಿತರು ಅನುಭವಿಸುವ ಕಷ್ಟಗಳನ್ನು ಗಮನಿಸಿ, ಅವರಿಗೆ ನೆರವಾಗಲು ಹೆಚ್ಚಿನ ಮೊತ್ತದ ಪರಿಹಾರವನ್ನು ನೀಡುವ ಸದುದ್ದೇಶದಿಂದ

☐ ನೌಕರರ ಕುಟುಂಬ ಕಲ್ಯಾಣಯೋಜನೆಯ ಪರಿಹಾರ ಮೊತ್ತವನ್ನು 3 ಲಕ್ಷ ರೂ.ಗಳಿಂದ ರೂ.10 ಲಕ್ಷ ರೂ.ಗಳಿಗೆ ದಿನಾಂಕ: 01.11.2023 ರಿಂದ ಜಾರಿಗೆ ಬರುವಂತೆ ಹೆಚ್ಚಿಸಲಾಗಿರುತ್ತದೆ.

☐ ಮುಂದುವರೆದು, ಸದರಿ ಪರಿಹಾರ ಮೊತ್ತವನ್ನು ರೂ.10.00 ಲಕ್ಷಗಳಿಂದ ರೂ.14.00 ಲಕ್ಷಗಳಿಗೆ ದಿನಾಂಕ:01.09.2025ರಿಂದ ಜಾರಿಗೆ ಬರುವಂತೆ ಹೆಚ್ಚಿಸಿ ಪರಿಷ್ಕರಿಸಲಾಗಿದೆ.

☐ 187 ಪ್ರಕರಣಗಳಲ್ಲಿ ತಲಾ ರೂ. 10.00 ಲಕ್ಷಗಳಂತೆ ಒಟ್ಟು ರೂ.18.70ಕೋಟಿಗಳ ಪರಿಹಾರ ಮೊತ್ತವನ್ನು ಹಾಗೂ 30 ಪ್ರಕರಣಗಳಲ್ಲಿ ರೂ.14.00 ಲಕ್ಷಗಳಂತೆ ಒಟ್ಟು ರೂ.4.20 ಕೋಟಿಗಳ ಪರಿಹಾರ ಮೊತ್ತವನ್ನು ಈಗಾಗಲೇ ವಿತರಿಸಲಾಗಿದೆ.

☐ ಇಂದಿನ ಕಾರ್ಯಕ್ರಮದಲ್ಲಿ 37 ಪ್ರಕರಣಗಳಲ್ಲಿ ಮೃತಾವಲಂಬಿತರಿಗೆ ತಲಾ 14.00 ಲಕ್ಷ ರೂ.ಗಳಂತೆ ಒಟ್ಟು 5.18 ಕೋಟಿ ರೂ.ಗಳನ್ನು ವಿತರಿಸಲಾಯಿತು.

☐ ಅಲ್ಲದೇ, 05 ಪ್ರಕರಣಗಳಲ್ಲಿ ಮೃತಾವಲಂಬಿತರಿಗೆ ತಲಾ ರೂ.10.00 ಲಕ್ಷಗಳಂತೆ ಒಟ್ಟು ರೂ.50.00 ಲಕ್ಷಗಳನ್ನು ವಿತರಿಸಲಾಯಿತು.

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ **ಗುಂಪು ವಿಮಾ ಯೋಜನೆ ರುಮಾಹಿತಿ:**

ಸಂಸ್ಥೆಯಲ್ಲಿ ಜಾರಿಯಲ್ಲಿದ್ದ ಗುಂಪು ವಿಮಾ ಯೋಜನೆಯನ್ನು ಪರಿಷ್ಕರಿಸಿ, ಅಧಿಕಾರಿ/ನೌಕರರ ವಂತಿಗೆ ರೂ.350/ ಮತ್ತು ಸಂಸ್ಥೆಯ ವಂತಿಗೆ ರೂ.150/– ಒಟ್ಟು ರೂ.500/–ಗಳ ವಂತಿಗೆಯೊಂದಿಗೆ ಅಪಘಾತದಿಂದ (ಕರ್ತವ್ಯ ನಿರತ ಅಥವಾ ವೈಯಕ್ತಿಕ ಅಪಘಾತ ಸೇರಿದಂತೆ) ಮೃತಪಟ್ಟಲ್ಲಿ ರೂ.50.00 ಲಕ್ಷ ಮತ್ತು ಸ್ವಾಭಾವಿಕ ಹಾಗೂ ಇನ್ನಿತರ ಕಾರಣಗಳಿಂದ ಮೃತಪಟ್ಟಲ್ಲಿ, ರೂ.10.00 ಲಕ್ಷ ವಿಮಾ ಪರಿಹಾರ ಮೊತ್ತವನ್ನು ಪಾವತಿಸುವ ಯೋಜನೆಯನ್ನು ದಿನಾಂಕ:19.02.2024 ರಿಂದ ಜಾರಿಗೆ ತರಲಾಗಿದ್ದು, ದಿನಾಂಕ:1.10.2024 ರಿಂದ ಅಪಘಾತ/ಇನ್ನಿತರ ಕಾರಣಗಳಿಂದ ಮೃತಪಟ್ಟ ನೌಕರರ ನಾಮನಿರ್ದೇಶಿತರಿಗೆ ರೂ.12.00 ಲಕ್ಷ ವಿಮಾ ಪರಿಹಾರ ಪಾವತಿಸುವ ಯೋಜನೆಯನ್ನು ಜಾರಿಗೆ ತರಲಾಗಿದೆ.

ಸ್ವಾಭಾವಿಕ/ಇನ್ನಿತರ ಕಾರಣಗಳಿಂದ ಮೃತಪಟ್ಟ ಒಟ್ಟು 171 ನೌಕರರ ನಾಮ ನಿರ್ದೇಶಿತರಿಗೆ ತಲಾ ರೂ.10.00 ಲಕ್ಷ/ರೂ.12.00 ಲಕ್ಷದಂತೆ ಒಟ್ಟು ರೂ.17.88 ಕೋಟಿ ಹಾಗೂ ಅಪಘಾತದಿಂದ ಮೃತಪಟ್ಟ 12 ನೌಕರರ ನಾಮನಿರ್ದೇಶಿತರಿಗೆ ತಲಾ ರೂ.50.00 ಲಕ್ಷದಂತೆ ಒಟ್ಟು ರೂ.6.00 ಕೋಟಿ ವಿಮಾ ಪರಿಹಾರ ಮೊತ್ತವನ್ನು ಪಾವತಿಸಲಾಗುತ್ತಿದೆ.

ಇಂದು ಸ್ವಾಭಾವಿಕ ಹಾಗೂ ಇನ್ನಿತರ ಕಾರಣಗಳಿಂದ ಮೃತಪಟ್ಟ 17 ಬೆಂ.ಮ.ಸಾ.ಸಂಸ್ಥೆಯ ನೌಕರರ ನಾಮ ನಿರ್ದೇಶಿತರಿಗೆ ತಲಾ ರೂ.12.00 ಲಕ್ಷದಂತೆ ಒಟ್ಟು ರೂ.2.40 ಕೋಟಿ ಗುಂಪು ವಿಮಾ ಪರಿಹಾರ ಮೊತ್ತದ ಚೆಕ್‌ಗಳನ್ನು ವಿತರಿಸಲಾಯಿತು.


ಈ ಕಾರ್ಯಕ್ರಮದಲ್ಲಿ ಬೆಂ.ಮ.ಸಾ.ಸಂಸ್ಥೆಯ ಅಧ್ಯಕ್ಷ ವಿ.ಎಸ್. ಆರಾಧ್ಯ, ಉಪಾಧ್ಯಕ್ಷ ನಿಕೇತ್‌ರಾಜ್. ಎಂ., ಸಾರಿಗೆ ಇಲಾಖೆಯ ಕಾರ್ಯದರ್ಶಿ ದೀಪಚೋಳನ್, ಕರಾರಸಾನಿಗಮದ ವ್ಯವಸ್ಥಾಪಕ ನಿರ್ದೇಶಕ ಶಿವಕುಮಾರ್ ಕೆ.ಬಿ., ಬೆಂ.ಮ.ಸಾ.ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ರಘುನಂದನ್‌ಮೂರ್ತಿ, ಅಬ್ದುಲ್‌ಅಹದ್, ನಿರ್ದೇಶಕರು (ಭ ಮತ್ತು ಜಾ) ಹಾಗೂ ನಿರ್ದೇಶಕರಾದ (ಸಿ&ಜಾ) ಗಾಯಿತ್ರಿ ಕೆ.ಎಂ. ಅವರು ಹಾಜರಿದ್ದರು.

# ಅವಸರ ಸರಿಯಲ್ಲ, ಎಸ್‌ಐಆರ್ ಪ್ರಕ್ರಿಯೆ ಒಂದು ವರ್ಷ ವಿಸ್ತರಿಸಿ: ಪ್ರಕಾಶ್ ರಾಜ್

**ಬೆಂಗಳೂರು, ಆ.14:** ರಾಜ್ಯದಲ್ಲಿ ಮತದಾರರ ಪಟ್ಟಿಯನ್ನು ಮರುರೂಪಿಸುವ ಎಸ್‌ಐಆರ್ ಪ್ರಕ್ರಿಯೆಯನ್ನು ಅವಸರದಲ್ಲಿ ನಡೆಸುತ್ತಿರುವುದು ಸರಿಯಲ್ಲ. ಪ್ರತಿಯೊಬ್ಬ ಅರ್ಹ ಮತದಾರರು ಮತದಾರರ ಪಟ್ಟಿಯಲ್ಲಿ ಉಳಿಸಿಕೊಳ್ಳಲು ಕನಿಷ್ಠ ಒಂದು ವರ್ಷಕ್ಕೆ ಎಸ್.ಐ.ಆರ್ ಪ್ರಕ್ರಿಯೆಯನ್ನು ಮುಂದುವರೆಸಬೇಕು ಎಂದು ಚಿತ್ರನಟ ಪ್ರಕಾಶ್ ರಾಜ್ ಚುನಾವಣಾ ಆಯೋಗವನ್ನು ಒತ್ತಾಯಿಸಿದ್ದಾರೆ.

ಸಂತ್ರಸ್ತ ನಾಗರಿಕರು ಮತ್ತು ನಾಗರಿಕ ಸಂಘಟನೆಗಳ ಜೊತೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂವಿಧಾನಬದ್ಧವಾದ ಮಹತ್ವದ ಪ್ರಕ್ರಿಯೆ ಅವಸರದಲ್ಲಿ ನಡೆಯುವ ಅಗತ್ಯವಿಲ್ಲ. ಬೂತ್ ಮಟ್ಟದ ಅಧಿಕಾರಿ ಮನೆಗೆ ಹೋದಾಗ ಮನೆಯಲ್ಲಿ ಇಲ್ಲ ಎಂಬ ಒಂದೇ ಕಾರಣಕ್ಕೆ ಮತದಾರರ ಪಟ್ಟಿಯಿಂದ ಡಿಲೀಟ್ ಮಾಡುವುದು ಸೂಕ್ತವಲ್ಲ. ಹೆಚ್ಚಿನವರು ದುಡಿಯಲು ಹೊರಗಡೆ ಹೋಗಿರುತ್ತಾರೆ. ಬೇರೆ ಪ್ರದೇಶಗಳಿಗೂ ತೆರಳಿರುತ್ತಾರೆ. ಇಂತಹವರು ಜೊತೆ ಆಯೋಗ ಘನತೆ ಮತ್ತು ಮಾನವೀಯತೆಯಿಂದ ನಡೆದುಕೊಳ್ಳಬೇಕು. ಮನೆಯಿಂದ ಹೊರಗಡೆ ಹೋಗಿರುವವರಿಗೆ ಕನಿಷ್ಠ ಮೂರು ತಿಂಗಳು ಅವಕಾಶ ಕಲ್ಪಿಸಬೇಕು ಎಂದರು.

ಒಂದು ವಿಳಾಸದಿಂದ ಮತ್ತೊಂದು ವಿಳಾಸಕ್ಕೆ, ಒಂದು ಪ್ರದೇಶ, ಊರುಗಳಿಗೆ



ತೆರಳಿರುವವರನ್ನು ಯಾವುದೇ ಕಾರಣಕ್ಕೂ ಡಿಲೀಟ್ ಪಟ್ಟಿಗೆ ಸೇರಿಸಬಾರದು. ಇಂತಹವರಿಗೆ ಆಯಾ ಸ್ಥಳದಲ್ಲೇ ಎನ್ಯುಮರೇಶನ್ ಫಾರಂ ಮತ್ತು ಫಾರಂ 8 ಅನ್ನು ನೀಡುವ ವ್ಯವಸ್ಥೆ ಕಲ್ಪಿಸಬೇಕು. ಮನೆ ಮನೆಗಳಿಗೆ ತೆರಳಿ ಫಾರಂ ನಂ.6 ಮತ್ತು ಫಾರಂ ನಂ.8 ಅನ್ನು ವಿತರಿಸಬೇಕು ಎಂದು ಹೇಳಿದರು.

ಕರಡು ಮತದಾರರ ಪಟ್ಟಿ ಪ್ರಕಟವಾದ ನಂತರ ಚುನಾವಣಾ ಆಯೋಗದ ಮ್ಯಾನ್ಯುಯಲ್ ನಲ್ಲಿನ ನಿರ್ದೇಶನದಂತೆ ಪ್ರತಿ ಬೂತ್ ಗಳಲ್ಲಿ ಸಾರ್ವಜನಿಕ ಪರಿಶೀಲನಾ ಸಭೆ ನಡೆಸಬೇಕು. ಬಿಟ್ಟುಹೋದವರು, ಸ್ಥಳಾಂತರಗೊಂಡವರು ವಾಪಸ್ ಬಂದಿರುವವರನ್ನು ಮತದಾರರ ಪಟ್ಟಿಯಲ್ಲಿ ಒಳಗೊಳ್ಳುವಂತೆ ಮಾಡಬೇಕು. ಲಾಜಿಕಲ್ ಡಿಸ್ಕ್ರಿಪೆನ್ಸಿಯ ಬಗ್ಗೆ ಆಯೋಗ ಸ್ಪಷ್ಟನೆ ನೀಡಬೇಕು. ಕರ್ನಾಟಕದಲ್ಲಿ ಈ ಪ್ರಕ್ರಿಯೆಯನ್ನು ಯಾವುದೇ ಕಾರಣಕ್ಕೂ ನಡೆಸಬಾರದು ಎಂದು ಪ್ರಕಾಶ್ ರಾಜ್ ಹೇಳಿದರು.

**ಚುನಾವಣೆಗಳಿಲ್ಲದಿದ್ದರೂ ಪ್ರಕ್ರಿಯೆ ಅಗತ್ಯವಿತ್ತೆ?** ಮತದಾರರರು ತಮ್ಮ ಹಕ್ಕು ಉಳಿಸಿಕೊಳ್ಳಲು ಮತದಾರರ ಹಿಂದೆ ಅಲೆಯುವಂತೆ ಮಾಡಲಾಗುತ್ತಿದೆ. ಅಸಂಖ್ಯಾತ ಅರ್ಹ ಮತದಾರರಿಗೆ ಯಾವುದೇ ನೋಟಿಸ್ ನೀಡದೇ ಸುಲಭವಾಗಿ ಅವರ ಮೂಲಭೂತ ಹಕ್ಕು ಕಸಿಯಲಾಗುತ್ತಿದ್ದು, ಮತದಾರರ ಘನತೆಗೆ ಧಕ್ಕೆ ತರಲಾಗುತ್ತಿದೆ. ಹಿರಿಯ ನಾಗರಿಕರನ್ನು ಮಡಿದವರು ಎಂಬ ತೀರ್ಮಾನಕ್ಕೆ ಆಯೋಗ ಬರುತ್ತಿದೆ. ಇನ್ನೂ ಎರಡು ವರ್ಷಗಳ ಕಾಲ ರಾಜ್ಯದಲ್ಲಿ ಯಾವುದೇ ಚುನಾವಣೆಗಳಿಲ್ಲದಿದ್ದರೂ, ಇಷ್ಟೊಂದು ಅವಸರದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಸುವ ಅಗತ್ಯವೇನಿತ್ತು ಜನಸಾಮಾನ್ಯರ ಘನತೆಯನ್ನು ಹೀಗೆ ಅವಮಾನಿಸುತ್ತಿರುವುದು ಏಕೆ ಎಂದು ಪ್ರಕಾಶ್ ರಾಜ್ ತೀವ್ರವಾಗಿ ಪ್ರಶ್ನಿಸಿದರು.

ಎಸ್‌ಐಆರ್ ವಿರೋಧ ಕರ್ನಾಟಕ ಮುಖಂಡ ನೂರ್ ಶ್ರೀಧರ್, ಹಿರಿಯ ನಾಗರಿಕರ ವಿಷಯದಲ್ಲೂ ಅಧಿಕಾರಿಗಳು ಕರುಣೆಯಿಲ್ಲದೆ ವರ್ತಿಸುತ್ತಿದ್ದಾರೆ.

ಬಿಎಲ್‌ಓಗಳು ನಿರ್ದಿಷ್ಟವಾಗಿ ಸತ್ತಿಲ್ಲ ಎಂದು ನಮೂದಿಸದಿದ್ದರೆ ಹಿರಿಯ ಜೀವಗಳನ್ನು ಮೃತಪಟ್ಟವರು ಎಂದು ಗುರುತಿಸಿ, ಬದುಕಿರುವವರನ್ನೂ ಪಟ್ಟಿಯಿಂದ ತೆಗೆದುಹಾಕಲಾಗುತ್ತಿದೆ ಎಂದು ಕಿಡಿಕಾರಿದರು.

# ಸಿಎಂ ರಾಜಕೀಯ ಕಾರ್ಯದರ್ಶಿ ಎ.ಎಸ್. ಪೊನ್ನಣ್ಣ ಕಾರಿನಲ್ಲಿ ಹಾವು!


**ಬೆಂಗಳೂರು, ಆ.14:** ಮುಖ್ಯ ಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಹಾಗೂ ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ಅವರ ಕಾರಿನಲ್ಲಿ ಹಾವು ಸೇರಿಕೊಂಡು ಕೆಲವೊತ್ತು ಭೀತಿ ಸೃಷ್ಟಿಸಿತು.



ವಿಧಾನಸೌಧದ ಕೆಂಗೇಲ್ ಗೇಟ್ ಮುಂಭಾಗ ನಿಂತಿದ್ದ ಕಾರಿನಲ್ಲಿ ಹಾವು ಸೇರಿಕೊಂಡಿತು. ರಸ್ತೆಯಲ್ಲಿ ಹರಿದಾಡುತ್ತಿದ್ದ ಹಾವು ಎ.ಎಸ್ ಪೊನ್ನಣ್ಣ ಅವರ ಕಾರು ಹತ್ತಿದ್ದನ್ನು ಅಲ್ಲಿ ನಿಂತಿದ್ದ ಮೂರ್ನಾಲ್ಕು ಮಂದಿ ಪೊಲೀಸರು ನೋಡಿದರು.

ತಕ್ಷಣವೇ ಕಾರಿನ ಚಾಲಕನಿಗೆ ಮಾಹಿತಿ ನೀಡಿದರು. ಚಾಲಕ ವಾಹನದ ಬಾನೆಟ್ ತೆಗೆದು ಹಾವು ಹೊರಹೋಗುವಂತೆ ಮಾಡಲು ಹರಸಾಹಸ ಪಟ್ಟರು. ಆದರೆ ಯಾರ ಕಣ್ಣಿಗೂ ಹಾವು ಕಾಣಿಸಿಕೊಳ್ಳಲಿಲ್ಲ. ಕೆಲವರು ಕಾರನ್ನು ಅಲುಗಾಡಿಸಿದರು. ಸ್ವಲ್ಪ ಹೊತ್ತಿನ ನಂತರ ಹಾವು ವಿಧಾನಸೌಧದ ಪಾರ್ಕ್ ಒಳಗೆ ಸರಿಯಿತು.

ಶಾಸಕ ಪೊನ್ನಣ್ಣ ಅವರು ಮತ್ತೊಂದು ಕಾರಿನಲ್ಲಿ ತೆರಳಿದರು. ಹೀಗೆ ಸ್ವಲ್ಪ ಕಾಲ ಅಲ್ಲಿದ್ದವರು ಉರಗತಜ್ಞರಂತೆ ಸಲಹೆ ನೀಡುತ್ತಿದ್ದದ್ದು ಕಂಡು ಬಂತು.


ನಾಡಿನ ಸಮಸ್ತ
ಜನತೆಗೆ 80ನೇ
ಸ್ವಾತಂತ್ರ್ಯೋತ್ಸವದ
ಹಾರ್ದಿಕ
ಶುಭಾಶಯಗಳು
15.08.2026
ಮಾಜಿ ಸಚಿವರು ಹಾಗೂ ಗದಗ ವಿಧಾನಸಭಾ
ಕ್ಷೇತ್ರದ ಜನಪ್ರಿಯ ಶಾಸಕರಾದ
ಡಾ. ಎಚ್.ಕೆ.ಪಾಟೀಲ್
ಅವರಿಗೆ...
ಜನ್ಮದಿನದ ಹಾರ್ದಿಕ
ಶುಭಾಶಯಗಳು
ಕೆ.ಎಚ್.ಪಾಟೀಲ್
ಅಧ್ಯಕ್ಷರು,
ಕರ್ನಾಟಕ ಯುವ ಕಾಂಗ್ರೆಸ್,
ಗದಗ ಜಿಲ್ಲೆ
ಶುಭ ಕೋರುವವರು
ಅಭಿಮಾನಿಗಳು ಹಾಗೂ ಹಿತೈಷಿಗಳು
ಗದಗ ವಿಧಾನಸಭಾ ಕ್ಷೇತ್ರ ಹಾಗೂ ಬೆಂಗಳೂರು, ಕರ್ನಾಟಕ